ಸಂಪುಟ: ೦೭/ ಸಂಚಿಕೆ: ೧೮೪/ ಗುರುವಾರ ದಿನಾಂಕ : ೧೧-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 184/ THURSDAY Date : 11-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## 12ನೇ ದಾಖಲೆಯಾಗಿ ಆಧಾರ್ ಸ್ವೀಕರಿಸಿ ಸುಪ್ರಿಂ

**ಹೊಸದಿಲ್ಲಿ:** ಸುಪ್ರೀಂ ಕೋರ್ಟ್ ನಿರ್ದೇಶನದನ್ವಯ ಬಿಹಾರ ಎಸ್‌ಐಆರ್‌ಗೆ ಆಧಾರ್ ಕಾರ್ಡ್ ಅನ್ನು ಪುರಾವೆಯಾಗಿ ಪರಿಗಣಿಸುವಂತೆ ಭಾರತೀಯ ಚುನಾವಣಾ ಆಯೋಗವು ಬಿಹಾರದ ಚುನಾವಣಾ ಅಧಿಕಾರಿಗಳಿಗೆ ಸೂಚಿಸಿದೆ.

ಬಿಹಾರ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಭಾರತೀಯ ಚುನಾವಣಾ ಆಯೋಗವು ಪತ್ರ ಬರೆದಿದ್ದು,ಆಧಾರ್ ಕಾರ್ಡ್ ಅನ್ನು ಪಟ್ಟಿ ಮಾಡಲಾದ 11 ದಾಖಲೆಗಳ ಜೊತೆಗೆ 12ನೇ ದಾಖಲೆಯಾಗಿ ಪರಿಗಣಿಸಬೇಕು ಎಂದು ಹೇಳಿದೆ.

ಆಧಾರ್ ಕಾಯ್ದೆಯ ಸೆಕ್ಷನ್ 9ರ ಪ್ರಕಾರ, ಆಧಾರ್ ಕಾರ್ಡ್ ಅನ್ನು ಗುರುತಿನ ಪುರಾವೆಯಾಗಿ ಬಳಸಬೇಕು, ಪೌರತ್ವದ ಪುರಾವೆಯಾಗಿ ಅಲ್ಲ ಎಂದು ಚುನಾವಣಾ ಆಯೋಗ ತಿಳಿಸಿದೆ. 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 23(4) ರಡಿಯಲ್ಲಿ ವ್ಯಕ್ತಿಯ ಗುರುತನ್ನು ಸಾಬೀತುಪಡಿಸುವ ದಾಖಲೆಗಳಲ್ಲಿ ಆಧಾರ್ ಕಾರ್ಡ್ ಒಂದಾಗಿದೆ. ಈ ನಿರ್ದೇಶನಕ್ಕೆ ಅನುಗುಣವಾಗಿ ಆಧಾರ್ ಅನ್ನು ಪರಿಗಣಿಸದಿರುವ ಅಥವಾ ಸ್ವೀಕರಿಸಲು ನಿರಾಕರಿಸುವ ಯಾವುದೇ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಚುನಾವಣಾ ಆಯೋಗ ಎಚ್ಚರಿಸಿದೆ.

ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಮತದಾರರ ಗುರುತಿನ ಪುರಾವೆಯಾಗಿ ಆಧಾರ್ ಕಾರ್ಡ್ ಅನ್ನು ಪರಿಗಣಿಸಬೇಕು ಎಂದು ಸುಪ್ರೀಂ ಕೋರ್ಟ್ ಸೋಮವಾರ ನಿರ್ದೇಶಿಸಿತ್ತು. ಸೆಪ್ಟೆಂಬರ್ 9 ರೊಳಗೆ ನಿರ್ದೇಶನವನ್ನು ಜಾರಿಗೆ ತರುವಂತೆ ಚುನಾವಣಾ ಆಯೋಗಕ್ಕೆ ಸೂಚಿಸಿತ್ತು.

## ಅನರ್ಹ ಬಿಪಿಎಲ್ ಕಾರ್ಡ್‌ಗಳ ರದ್ದುಪಡಿಸಲು ಖಡಕ್ ಸೂಚನೆ

**ಬೆಂಗಳೂರು:** ರಾಜ್ಯದಲ್ಲಿ ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಆದರೆ, ಅರ್ಹ ಬಿಪಿಎಲ್ ಕಾರ್ಡುದಾರರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಅರ್ಹರು ಯಾರಾದರೂ ಬಿಟ್ಟು ಹೋಗಿದ್ದರೆ ಅವರಿಗೆ ಬಿಪಿಎಲ್ ಕಾರ್ಡ್ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗೃಹ ಕಚೇರಿ ಕೃಷ್ಣದಲ್ಲಿ ನಡೆದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಈ ವೇಳೆ ಇಲಾಖೆಯ ಹಲವು ಅಂಶಗಳು ಚರ್ಚೆಗೊಳಗಾದವು.

ಈಗಾಗಲೇ ಗುರುತಿಸಲಾಗಿರುವ ಅನರ್ಹ ಬಿಪಿಎಲ್ ಪಡಿತರ ಚೀಟಿದಾರರ ಪೈಕಿ 3,65,614 ಪಡಿತರ ಚೀಟಿಗಳನ್ನು ರದ್ದು/ವರ್ಗ ಬದಲಾವಣೆ ಮಾಡಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಅಕ್ಕಿಯ ಜೊತೆಗೆ ಪೌಷ್ಟಿಕ ಧಾನ್ಯ, ಅಗತ್ಯ ಆಹಾರ ಸಾಮಗ್ರಿಗಳನ್ನು ಒಳಗೊಂಡ ಕಿಟ್ ಒದಗಿಸುವ ಕುರಿತು ಪರಿಶೀಲನೆ ನಡೆಸಲಾಗಿದ್ದು, ಈ ಕುರಿತು ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ಕೊಟ್ಟರು.

ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಹಿಂದಿನ ಬಾರಿ ನಮ್ಮ ಸರ್ಕಾರವಿದ್ದಾಗ 43,874 ಮನೆಗಳು ಸೇರಿದಂತೆ ಒಟ್ಟು 47,848 ಮನೆಗಳನ್ನು ಮಂಜೂರು ಮಾಡಲಾಗಿದೆ. ಇದರಲ್ಲಿ 13,303 ಮನೆಗಳು ಬಹುತೇಕ ಪೂರ್ಣಗೊಂಡಿದ್ದು, ಒಟ್ಟು 25,815 ಮನೆಗಳು ನಿರ್ಮಾಣ ಹಂತದಲ್ಲಿವೆ. ಇದರಲ್ಲಿ ಫಲಾನುಭವಿಗಳ ವಂತಿಕೆ ಒಟ್ಟು 134ಕೋಟಿ ರೂ. ಸಂಗ್ರಹಿಸಲಾಗಿದೆ ಎಂದು ತಿಳಿಸಿದರು.

ಮೊದಲ ಹಂತದಲ್ಲಿ 7900 ಮನೆಗಳು ಬಹುತೇಕ ಪೂರ್ಣಗೊಂಡಿದ್ದು, ಫಲಾನುಭವಿಗಳ ವಂತಿಕೆ ಮೊತ್ತ 216 ಕೋಟಿ ರೂ. ಬಾಕಿಯಿದೆ. ಮನೆ ಹಂಚಿಕೆ ಮಾಡಲು ಸಾಧ್ಯವಾಗುವಂತೆ ಈ ಬಾಕಿ ಮೊತ್ತದ ಪಾವತಿ ಬಗ್ಗೆ ಹುಡ್ಕೋದಿಂದ ಸಾಲ ಪಡೆಯುವುದು ಸೇರಿದಂತೆ ಸೂಕ್ತ ಪ್ರಸ್ತಾವನೆ ಸಿದ್ಧಪಡಿಸಲು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.

ಸ್ಲಂ ಬೋರ್ಡ್ ಅಡಿ 42ಸಾವಿರ ಮನೆಗಳನ್ನು ನಿರ್ಮಿಸಲಾಗುತ್ತಿದ್ದು, ಇಲ್ಲಿ ರಸ್ತೆ ಸೇರಿದಂತೆ ಮೂಲಸೌಲಭ್ಯಗಳನ್ನು ಕಲ್ಪಿಸಲು ಅನುದಾನ ಒದಗಿಸಲಾಗುವುದು. ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ)ಯಡಿ 900 ಕೋಟಿ ರೂ. ಅನುದಾನ ಬಜೆಟ್?ನಲ್ಲಿ ನಿಗದಿಪಡಿಸಲಾಗಿದೆ. ಈ ಯೋಜನೆಯಡಿ 94,939 ಮನೆಗಳನ್ನು ನಿರ್ಮಿಸಲಾಗುತ್ತಿದ್ದು, 56,682 ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ ಎಂದು ಹೇಳಿದರು.

ಸಭೆಯಲ್ಲಿ ವಸತಿ ಸಚಿವ ಜಮೀರ್ ಅಹಮದ್ ಖಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಹಾಗೂ ವಸತಿ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



### ಜಿಪಿಎಸ್ ಟ್ರ್ಯಾಕ್ಟರ್ ಅಳವಡಿಕೆಗೆ ಸೂಚನೆ

ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯದವರಿಗೆ ಹೊಸ ನ್ಯಾಯ ಬೆಲೆ ಅಂಗಡಿಗಳನ್ನು ಆದ್ಯತೆ ಮೇಲೆ ನೀಡಲು ಕ್ರಮ ಕೈಗೊಳ್ಳಬೇಕು. ಆಹಾರ ಧಾನ್ಯಗಳನ್ನು ಸರಬರಾಜು ಮಾಡುತ್ತಿರುವ ವಾಹನಗಳಿಗೆ ಜಿಪಿಎಸ್ ಟ್ರ್ಯಾಕರ್‌ಗಳನ್ನು ಅಳವಡಿಸಬೇಕು. ರಾಜ್ಯದಲ್ಲಿರುವ ಎಲ್ಲಾ ಗೋದಾಮುಗಳಲ್ಲಿ ಸಿಸಿಟಿವಿ ಅಳವಡಿಸಲು ಕ್ರಮ ಕೈಗೊಳ್ಳಬೇಕು. ಕನಿಷ್ಠ ಬೆಂಬಲ ಯೋಜನೆಯಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಸ್ವಸಹಾಯ ಸಂಘಗಳ ಸಹಯೋಗದೊಂದಿಗೆ ಆಹಾರಧಾನ್ಯಗಳ ಖರೀದಿ ಪ್ರಕ್ರಿಯೆ ನಡೆಸಬೇಕು. ಇದೇ ಪ್ರಥಮ ಬಾರಿಗೆ 0.29 ಲಕ್ಷ ಮೆಟ್ರಿಕ್ ಟನ್ ಕಿರು ಸಿರಿಧಾನ್ಯಗಳನ್ನು ಖರೀದಿಸಲಾಗುತ್ತಿದೆ. ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಲ್ಲಿ ಖಾಲಿಯಿರುವ ಅಗತ್ಯ ಸಿಬ್ಬಂದಿ ನೇಮಕಾತಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.ವಸತಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಿಎಂ, ವಿವಿಧ ವಸತಿ ಯೋಜನೆಗಳ ಅಡಿ ನಿರ್ಮಿಸಲಾಗುತ್ತಿರುವ ಮನೆಗಳನ್ನು ಪೂರ್ಣಗೊಳಿಸುವ ಅಗತ್ಯ ಅನುದಾನ ಹಂಚಿಕೆ ಕುರಿತಾಗಿ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಹಣಕಾಸು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

## ಅಕ್ರಮ ಗಣಿ ಆಸ್ತಿ ಜಪ್ತಿ ಕಾನೂನಿಗೆ ಅಧಿಕೃತ ಮುದ್ರೆ

**ಬೆಂಗಳೂರು:** ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯಿಂದ ಸೃಷ್ಟಿಯಾದ ಆಸ್ತಿಯನ್ನು ಜಪ್ತಿ ಮಾಡುವ ಜತೆಗೆ ವಸೂಲಾತಿ ಆಯುಕ್ತರ ನೇಮಕಾತಿ ಕಾನೂನಿಗೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ್ ಹೇಳಿದ್ದಾರೆ.



ಬುಧವಾರ ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಲೆಕ್ಕವಿಲ್ಲದಷ್ಟು ಸಂಖ್ಯೆಯಲ್ಲಿ ಗುತ್ತಿಗೆದಾರರು, ಸಾಗಾಣಿಕೆದಾರರು, ರಫ್ತುದಾರರು, ಖರೀದಿದಾರರು, ಮಧ್ಯವರ್ತಿಗಳು ಅಕ್ರಮ ಗಣಿಗಾರಿಕೆ ಚಟುವಟಿಕೆಗಳಿಂದ ಸಂಘಟಿತ ಅಪರಾಧ ಮಾಡಿರುವುದಲ್ಲದೆ, ಅಕ್ರಮ ಆಸ್ತಿ ಸೃಷ್ಟಿಸಿದ್ದಾರೆ. ಈ ಹಿನ್ನೆಲೆ ಕಾನೂನು ರೀತ್ಯಾ ಜಪ್ತಿ ಮಾಡಲು ಸರಕಾರ ಮುಂದಾಗಿದೆ ಎಂದರು.

ಆಸ್ತಿ ಹಾಗೂ ಇತರೆ ಮೌಲ್ಯ ವಸ್ತುಗಳು ಜಪ್ತಿ, ಮುಟ್ಟುಗೋಲು ಹಾಕಿಕೊಳ್ಳುವುದಕ್ಕೆ ವಸೂಲಿ ಆಯುಕ್ತರೊಬ್ಬರ ನೇಮಕಾತಿಯ ಅವಶ್ಯಕತೆಯನ್ನು ಸರಕಾರ ಮನಗಂಡು ಈ ಅಧಿನಿಯಮವನ್ನು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಂಡಿಸಿ, ಒಪ್ಪಿಗೆ ಪಡೆದು ಇಂದು ಅಧಿಸೂಚಿಸಿದೆ. ಒಟ್ಟಿನಲ್ಲಿ ಅಕ್ರಮ ಗಣಿಗಾರಿಕೆ ಪ್ರಕರಣಗಳಲ್ಲಿ ಮುಟ್ಟುಗೋಲು ಹಾಕಿಕೊಳ್ಳಬಹುದಾದ ಆಸ್ತಿಯನ್ನು ಗುರುತಿಸಿ, ಅಂತಹ ಆಸ್ತಿಯನ್ನು ಜಪ್ತಿ ಮಾಡಲು ಸರಕಾರಕ್ಕೆ ಅಸ್ತ್ರ ದೊರೆತಿದೆ ಎಂದು ಉಲ್ಲೇಖಿಸಿದರು.

ರಾಜ್ಯದಲ್ಲಿ ಗಣಿ ಹಗರಣಗಳಿಗೆ ತಡೆ ಹಾಕಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿಶೇಷ ಮಾರ್ಗದರ್ಶನದಲ್ಲಿ ಹಲವಾರು ಕ್ರಮಗಳನ್ನು ಸರಕಾರ ಕೈಗೊಳ್ಳಲು ಪ್ರಾರಂಭಿಸಿತ್ತು.ಇದೀಗ ಈ ಐತಿಹಾಸಿಕ ಮಸೂದೆಗೆ ರಾಜ್ಯಪಾಲರು ಅಂಕಿತ ಹಾಕುವ ಮೂಲಕ ಸರಕಾರದ ಬದ್ಧತೆಗೆ ಮುದ್ರೆ ಒತ್ತಿದ್ದಾರೆ. ಕನ್ನಡಿಗರ ಆಸ್ತಿ ಕನ್ನಡಿಗರಿಗೆ ಮರಳಿಸುವ ಉದ್ದೇಶ ಈಡೇರಿದೆ. ನಮ್ಮ ಪಕ್ಷ ಮತ್ತು ಸರಕಾರ ಈ ಮೊದಲು ಕನ್ನಡ ನಾಡಿನ ಜನತೆಗೆ ನೀಡಿದ ವಾಗ್ದಾನವನ್ನು ಸಂಪೂರ್ಣವಾಗಿ ಕಾರ್ಯಗತಗೊಳಿಸಿದೆ ಎಂದು ಸಚಿವರು ತಿಳಿಸಿದರು.

## ಇಂದಿನಿಂದ 3ದಿನ ಕಾಮನ್‌ವೆಲ್ತ್ ಸಂಸದೀಯ ಸಂಘದ ಸಮ್ಮೇಳನ

**ಬೆಂಗಳೂರು :** ಕಾಮನ್‌ವೆಲ್ತ್ ಸಂಸದೀಯ ಸಂಘದ (ಸಿಪಿಎ) ಭಾರತ ವಿಭಾಗದ 11ನೇ ಸಮ್ಮೇಳನ ನಾಳೆಯಿಂದ (ಸೆ.11) ಸೆ.13ರವರೆಗೆ ನಡೆಯಲಿದೆ ಎಂದು ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಇಂದು ಸಂಜೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ವಿಧಾನಸೌಧದ ಮೆಟ್ಟಿಲುಗಳ ಮೇಲೆ ಇಂದು ಸಂಜೆ 5.30ಕ್ಕೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಸಮ್ಮೇಳನ ಉದ್ಘಾಟಿಸಲಿದ್ದಾರೆ ಎಂದು ಹೇಳಿದರು. ಲೋಕಸಭೆಯ ಮಾರ್ಗದರ್ಶನದಂತೆ ಆಯೋಜನೆ ಮಾಡಲಾಗಿದ್ದು, ಜಾಹೀರಾತಿನಿಂದ ಹಿಡಿದು ಪ್ರತಿಯೊಂದು ಅವರ ಅನುಮತಿ ಮೇರೆಗೆ ಮಾಡಲಾಗುತ್ತಿದೆ. ನಾಳೆ ಮಧ್ಯಾಹ್ನ 3ಕ್ಕೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಲೋಕಸಭೆ ಸ್ಪೀಕರ್ ಓಂಬಿರ್ಲಾ ಅಧ್ಯಕ್ಷತೆಯಲ್ಲಿ ಸಿಪಿಎ ಕಾರ್ಯಕಾರಣಿ ಸಭೆ ನಡೆಯಲಿದೆ. ಸಂಜೆ 5ಕ್ಕೆ ಫೋಟೋಸೆಷನ್ ಇರಲಿದೆ ಎಂದು ವಿವರಿಸಿದರು.

ಸಿಎಂ ಸಿದ್ದರಾಮಯ್ಯ ಅವರು ಮೈ ಸ್ಟ್ಯಾಂಪ್ ಬಿಡುಗಡೆ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಮಾಜಿ ಸ್ಪೀಕರ್, ಸಭಾಪತಿಗಳನ್ನು ಸನ್ಮಾನಿಸಲೂ ನಿರ್ಧರಿಸಲಾಗಿದೆ. ಜತೆಗೆ ನಿವೃತ್ತ ಕಾರ್ಯದರ್ಶಿಗಳಿಗೂ ಸನ್ಮಾನ ಮಾಡಲಾಗುವುದು ಎಂದು ತಿಳಿಸಿದರು. ಉದ್ಘಾಟನಾ ಕಾರ್ಯಕ್ರಮದ ನಂತರ ಸಾಂಸ್ಕೃತಿಕ ಕಾರ್ಯಕ್ರಮ ಆಳ್ವಾಸ್ ನುಡಿಸಿರಿಯ ವಿರಾಸತ್ ನಡೆಯಲಿದೆ. ಸಾರ್ವಜನಿಕರಿಗೆ ವಿಧಾನಸೌಧಕ್ಕೆ ಪ್ರವೇಶವಿಲ್ಲ. ಆದರೆ, ರಸ್ತೆಯಲ್ಲೇ ನಿಂತು ಕಾರ್ಯಕ್ರಮ ವೀಕ್ಷಿಸಬಹುದು ಎಂದು ಮಾಹಿತಿ ನೀಡಿದರು.

**ಎರಡು ದಿನ ಸಮ್ಮೇಳನ:** ಸೆ.12 ಮತ್ತು 13 ರಂದು ತಾಜ್ ವೆಸ್ಟ್ ಎಂಡ್ ಹೋಟೆಲ್‌ನಲ್ಲಿ ಸಮ್ಮೇಳನ ನಡೆಯಲಿದ್ದು, ಸಮ್ಮೇಳನದಲ್ಲಿ ಲೋಕಸಭೆಯ ಸಭಾಧ್ಯಕ್ಷರು, ರಾಜ್ಯಸಭೆಯ ಉಪ ಸಭಾಪತಿಯವರು. ಭಾರತ ದೇಶದ ಎಲ್ಲ ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರುಗಳು/ ಉಪ ಸಭಾಧ್ಯಕ್ಷರುಗಳು, ವಿಧಾನ ಪರಿಷತ್ತಿನ ಸಭಾಪತಿಗಳು/ಉಪ ಸಭಾಪತಿಗಳು, ಲೋಕಸಭಾ ಸದಸ್ಯರು, ವಿದೇಶಿ ಗಣ್ಯರುಗಳು, ಲೋಕಸಭೆ/ರಾಜ್ಯಸಭೆಯ ಮಹಾ ಕಾರ್ಯದರ್ಶಿಗಳು ಹಾಗೂ ಎಲ್ಲಾ ರಾಜ್ಯಗಳ ವಿಧಾನಮಂಡಲದ ಕಾರ್ಯದರ್ಶಿಗಳು ಭಾಗವಹಿಸಲಿದ್ದಾರೆ. ವಿಧಾನಸಭೆ, ವಿಧಾನಪರಿಷತ್‌ನಲ್ಲಿ ಜನಸಾಮಾನ್ಯರ ವಿಶ್ವಾಸ ಗಳಿಸುವಿಕೆ ಮತ್ತಿತರ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ಸೆ. 13ರ ಸಂಜೆ 4.30ಕ್ಕೆ ಲೋಕಸಭೆ ಸ್ಪೀಕರ್ ಅವರ ಸುದ್ದಿಗೋಷ್ಠಿ ಇರಲಿದೆ. ಸೆ.14 ರಂದು ಗಣ್ಯರಿಗೆ ಮೈಸೂರು ಮತ್ತು ಸುತ್ತಮುತ್ತಲಿನ ಸ್ಥಳಗಳಿಗೆ ಪ್ರವಾಸ ಆಯೋಜಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

### ನೇಪಾಳದಲ್ಲಿ ಹಿಂಸಾಚಾರ

## ಕನ್ನಡಿಗನ ರಕ್ಷಣೆಗೆ ಸರ್ಕಾರ ಬದ್ಧ

**ಬೆಂಗಳೂರು:** ನೇಪಾಳದಲ್ಲಿ ನಡೆದ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದ್ದು, ಘಟನೆ ಬೆನ್ನಲ್ಲೇ ಸಂಕಷ್ಟಕ್ಕೆ ಸಿಲುಕಿರುವ ಪ್ರತಿಯೊಬ್ಬ ಕನ್ನಡಿಗನ ರಕ್ಷಣೆಗೆ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಹೇಳಿದ್ದಾರೆ.

ನೇಪಾಳ ಪರಿಸ್ಥಿತಿ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ನೇಪಾಳದಲ್ಲಿ ವಿದ್ಯಾರ್ಥಿ–ಯುವಜನರ ಕ್ಷಿಪ್ರ ಬೃಹತ್ ಪ್ರತಿಭಟನೆ ಕಾರಣಕ್ಕೆ ದೇಶಾದ್ಯಂತ ಪ್ರಕ್ಷುಬ್ಧ ವಾತಾವರಣ ಸೃಷ್ಟಿಯಾಗಿದೆ. ಪರಿಣಾಮವಾಗಿ ಕಠ್ಮಂಡು ವಿಮಾನ ನಿಲ್ದಾಣದಲ್ಲಿ ಸಿಲುಕಿರುವ 39 ಮಂದಿ ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತರಲು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಮುಖ್ಯ ಕಾರ್ಯದರ್ಶಿಗಳು ಈ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಚರ್ಚಿಸಿ ಅಗತ್ಯ ಕ್ರಮ ಕೈಗೊಂಡಿದ್ದು, ನೇಪಾಳದಲ್ಲಿ ಸಂಕಷ್ಟಕ್ಕೆ ಸಿಲುಕಿರುವ ಪ್ರತಿಯೊಬ್ಬ ಕನ್ನಡಿಗನನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆತರಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ನೇಪಾಳದ ಕೆಪಿ ಓಲಿ ಸರ್ಕಾರವು ಫೇಸ್‌ಬುಕ್, ಯೂಟ್ಯೂಬ್, ಇನ್‌ಸ್ಟಾಗ್ರಾಮ್ ಮತ್ತು ಎಕ್ಸ್‌ನಂತಹ 26 ಪ್ರಮುಖ ಸಾಮಾಜಿಕ ಮಾಧ್ಯಮ ವೇದಿಕೆಗಳನ್ನು ನಿಷೇಧಿಸಿ ಆದೇಶ ಹೊರಡಿಸಿತ್ತು. ಸರ್ಕಾರದಲ್ಲಿ



ನೋಂದಾಯಿಸಲು ವಿಫಲವಾದ ಕಾರಣ ನೇಪಾಳ ಸರ್ಕಾರ ಈ ಕ್ರಮಕ್ಕೆ ಮುಂದಾಗಿತ್ತು. ಈ ಆದೇಶದ ಬೆನ್ನಲ್ಲೇ ಸರ್ಕಾರದ ವಿರುದ್ಧ ಝೆನ್ ಜಿ ತಿರುಗಿ ಬಿದ್ದಿತ್ತು. ನೇಪಾಳದ ರಾಜಧಾನಿ ಕಠ್ಮಂಡುವಿನಲ್ಲಿ ಸಾಮಾಜಿಕ ಮಾಧ್ಯಮಗಳನ್ನು ಬ್ಯಾನ್ ಮಾಡಿದ್ದಕ್ಕೆ ಯುವ ಜನತೆ ಪ್ರತಿಭಟನೆಗೆ ಮುಂದಾದರು.

ಪೊಲೀಸ್, ಸೇನೆ ಯಾವುದಕ್ಕೂ ಹೆದರದೇ ಬೀದಿಗಿಳಿದು ಯುವ ಜನತೆ ಪ್ರತಿಭಟಿಸಿದರು. ಯುವಕರ ಹಿಂಸಾತ್ಮಕ ಪ್ರತಿಭಟನೆಗಳು ಕನಿಷ್ಠ 19 ಜನರ ಸಾವಿಗೆ ಕಾರಣವಾಯಿತು. ಜೊತೆಗೆ 300ಕ್ಕೂ ಹೆಚ್ಚು ಜನರು ಘಟನೆಯಲ್ಲಿ ಗಾಯಗೊಂಡಿದ್ದಾರೆ. ಪರಿಸ್ಥಿತಿ ಕೈಮೀರಿ ಹೋಗಬಹುದು ಎಂದು ತಿಳಿದು ಸರ್ಕಾರ, ಸಾಮಾಜಿಕ ಮಾಧ್ಯಮ ತಾಣಗಳನ್ನು ನಿಷೇಧಿಸುವ ತನ್ನ ಹಿಂದಿನ ನಿರ್ಧಾರವನ್ನು ಪ್ರಸ್ತುತ ಹಿಂತೆಗೆದುಕೊಂಡಿದೆ.

## ನೇಪಾಳ ಧಗಧಗ

### ಮಾಜಿ ಪ್ರಧಾನಿಯ ಪತ್ನಿ ಸಜೀವ ದಹನ

**ಕಠ್ಮಂಡು:** ನೇಪಾಳ ಜೆನ್ ಅಥವಾ ಯುವಜನರ ಕಿಚ್ಚಿಗೆ ಅಕ್ಷರಶ: ನಲುಗಿ ಹೋಗಿದೆ. ಪ್ರತಿಭಟನಾಕಾರರು ಮಂಗಳವಾರ ಸಂಸತ್ತು, ಪ್ರಧಾನಿ, ಮಾಜಿ ಪ್ರಧಾನಿ, ಮಂತ್ರಿಗಳು ಹಾಗು ಸರ್ಕಾರಿ ಕಚೇರಿಗಳಿಗೆ ಬೆಂಕಿ ಹಚ್ಚಿ ತೀವ್ರ ಆಕ್ರೋಶ ಹೊರಹಾಕಿದ್ದಾರೆ. ಅಷ್ಟೇ ಅಲ್ಲದೇ, ಮಾಜಿ ಪ್ರಧಾನಿ ಜಲನಾಥ್ ಖನಾಲ್ ಅವರ ಪತ್ನಿ ರಾಜ್ಯಲಕ್ಷ್ಮಿ ಚಿತ್ರಾಕರ್ ಸಜೀವ ದಹನವಾಗಿದ್ದಾರೆ. ಪ್ರತಿಭಟನಾಕಾರರು ಬೆಂಕಿ ಹಚ್ಚಿದ ವೇಳೆ ಮನೆಯಲ್ಲಿದ್ದ ಚಿತ್ರಾಕರ್ ಅವರು ಗಂಭೀರ ಸುಟ್ಟುಗಾಯಗಳಿಗೆ ಒಳಗಾಗಿ ಸಾವನ್ನಪ್ಪಿದರು ಎಂದು ವರದಿಯಾಗಿದೆ.

ಉದ್ರಿಕ್ತರ ಗುಂಪು ಮಾಜಿ ಪ್ರಧಾನಿಯ ನಿವಾಸಕ್ಕೆ ಆಗಮಿಸಿದಾಗ ರಾಜ್ಯಲಕ್ಷ್ಮಿ ಅವರು ಮನೆಯೊಳಗೆ ಇದ್ದರೂ ಲೆಕ್ಕಿಸದೆ ಬೆಂಕಿ ಹಚ್ಚಿದ್ದಾರೆ. ಈ ವೇಳೆ ಗಂಭೀರ ಗಾಯಗೊಂಡ ಅವರನ್ನು ಕಿರ್ತಿಪುರ್? ಬರ್ನ್? ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಿಸದೆ ಅವರು ಸಾವನ್ನಪ್ಪಿದರು ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

ಸಾಮಾಜಿಕ ಜಾಲತಾಣಗಳ ಮೇಲೆ ನಿಷೇಧ ಮತ್ತು ಭ್ರಷ್ಟಾಚಾರದ ವಿರುದ್ಧ ಬೀದಿಗಿಳಿದು ಜೆನ್? ಜೆಡ್‌ಗಳು ತಮ್ಮ ಪ್ರತಿಭಟನೆಯನ್ನು ತೀವ್ರಗೊಳಿಸಿದ್ದಾರೆ. ಇದರ ಪರಿಣಾಮ ಪ್ರಧಾನಿ ಕೆ.ಪಿ.ಓಲಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಪ್ರತಿಭಟನಾಕಾರರ ಗುಂಪು




ಸಂಸತ್ ಭವನ, ಕಠ್ಮಂಡುವಿನಲ್ಲಿದ್ದ ಅಧ್ಯಕ್ಷರ ಕಚೇರಿ ಸೇರಿದಂತೆ ಹಲವು ಸರ್ಕಾರಿ ಕಟ್ಟಡಗಳಿಗೆ ಬೆಂಕಿ ಇಟ್ಟಿದೆ. ಈ ನಡುವೆ ಮಾತುಕತೆಯ ಮೂಲಕ ಪ್ರತಿಭಟನೆಯನ್ನು ಕೈಬಿಟ್ಟು ಶಾಂತಿಯುತ ನಿರ್ಣಯಕ್ಕೆ ಬರೋಣ ಎಂದು ನೇಪಾಳ ಅಧ್ಯಕ್ಷ ರಾಮ್ ಚಂದ್ರ ಪೌಡೆಲ್ ಪ್ರತಿಭಟನಕಾರರಿಗೆ ಕರೆ ನೀಡಿದ್ದಾರೆ. ಪ್ರಧಾನಿ ಕೆ.ಪಿ.ಶರ್ಮಾ ಓಲಿ ಅವರ ರಾಜೀನಾಮೆಯನ್ನು ಸ್ವೀಕರಿಸಿದ್ದು, ಹಾನಿ ಮತ್ತು ರಕ್ತಪಾತದ ಹೊರತಾಗಿ ಈ ಬಿಕ್ಕಟ್ಟನ್ನು ಪರಿಹರಿಸಲು ಗಮನ ಹರಿಸೋಣ. ಎಲ್ಲರೂ ಶಾಂತಿಯುತವಾಗಿರಬೇಕು ಎಂದು ಮನವಿ ಮಾಡುತ್ತೇನೆ. ದೇಶ ಮತ್ತಷ್ಟು ಹಾನಿಗೊಳಗಾಗದಂತೆ ಮಾತುಕತೆಯಲ್ಲಿ ಈ ವಿಚಾರಗಳನ್ನು ಬಗೆಹರಿಸೋಣ. ಪ್ರಜಾಪ್ರಭುತ್ವದಲ್ಲಿ ನಾಗರಿಕರ ಬೇಡಿಕೆಗಳನ್ನು ಸಂವಾದ ಮತ್ತು ಮಾತುಕತೆಯ ಮೂಲಕ ಪರಿಹರಿಸಬಹುದು ಎಂದು ಅವರು ತಿಳಿಸಿದ್ದಾರೆ.

### ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಅನುಷ್ಠಾನ

## ಸಂತ್ರಸ್ತರಿಗೆ ಪುನರ್ವಸತಿ ಕಲ್ಪಿಸಲು ತೀರ್ಮಾನ

**ಬೆಂಗಳೂರು:** ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಮೀನು ಕಳೆದುಕೊಳ್ಳುವ ರೈತರಿಗೆ ನ್ಯಾಯಯುತವಾದ ಪರಿಹಾರ ಒದಗಿಸಲು ಸರಕಾರ ಬದ್ಧವಾಗಿದೆ. ಸಂತ್ರಸ್ತರಿಗೆ ಸೂಕ್ತ ಪುನರ್ವಸತಿಯನ್ನು ಕಲ್ಪಿಸುವ ಕುರಿತು ಸಚಿವ ಸಂಪುಟ ಸಭೆಯಲ್ಲಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬುಧವಾರ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಮುಳುಗಡೆ ಹೊಂದಲಿರುವ ಜಮೀನನ್ನು ಎರಡು ಹಂತದಲ್ಲಿ ಭೂಸ್ವಾಧೀನಕ್ಕೆ ಒಳಪಡಿಸುವ ಬದಲು ಒಂದೆ ಹಂತದಲ್ಲಿ ಸ್ವಾಧೀನಪಡಿಸಲು ಈಗಾಗಲೇ ತೀರ್ಮಾನಿಸಲಾಗಿದೆ ಎಂದು ಹೇಳಿದರು.

ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ–2 ರ ತೀರ್ಪಿನ ಅನ್ವಯ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3 ಅನುಷ್ಠಾನಕ್ಕಾಗಿ 130 ಟಿಎಂಸಿ ನೀರಿನ ಹಂಚಿಕೆ ಮಾಡಿದ್ದು, ಇದರಿಂದ 5.94 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಸಾಧ್ಯವಾಗಲಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.




ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರಲ್ಲಿ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣಾ ಮಟ್ಟ 519 ಮೀಟರ್ ನಿಂದ 524 ಮೀಟರ್ ಗೆ ಎತ್ತರಿಸುವುದರಿಂದ ಹೆಚ್ಚುವರಿಯಾಗಿ 100 ಟಿಎಂಸಿ ನೀರಿನ ಪ್ರಮಾಣ ಸಂಗ್ರಹ ಅಂದಾಜಿಸಲಾಗಿದೆ ಎಂದು ಅವರು ತಿಳಿಸಿದರು. ಯೋಜನೆ ಅನುಷ್ಠಾನಕ್ಕೆ ಒಟ್ಟು 1,33,867 ಎಕರೆ ಜಮೀನು ಭೂಸ್ವಾಧೀನ ಅಗತ್ಯವಿದ್ದು, ಇದರಲ್ಲಿ 75,563 ಎಕರೆ ಹಿನ್ನೀರಿನಲ್ಲಿ ಮುಳುಗಡೆಯಾಗುವ ಜಮೀನು ಸೇರಿದೆ. ಇದುವರೆಗೆ 29,566 ಎಕರೆ ಭೂಸ್ವಾಧೀನ ಐತೀರ್ಪು ಹೊರಡಿಸಲಾಗಿದೆ. 59,354 ಎಕರೆ ಜಮೀನು ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಬೇಕಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಯೋಜನೆ ಅನುಷ್ಠಾನಕ್ಕೆ ಆರಂಭದಲ್ಲಿ 51,148 ಕೋಟಿ ರೂ. ಯೋಜನಾ ಮೊತ್ತ ಅಂದಾಜಿಸಲಾಗಿತ್ತು. ಈಗ ಪರಿಷ್ಕೃತ 87,818 ಕೋಟಿ ರೂ. ಅಂದಾಜಿಸಲಾಗಿದೆ. ಇದರಲ್ಲಿ ಭೂಸ್ವಾಧೀನ ಪ್ರಕ್ರಿಯೆಗೆ 17,627 ಕೋಟಿ ರೂ. ಆರಂಭದಲ್ಲಿ ಅಂದಾಜಿಸಲಾಗಿತ್ತು. ಪ್ರಸಕ್ತ ಪರಿಷ್ಕೃತ ಮೊತ್ತ 40,557.09 ಕೋಟಿ ರೂಪಾಯಿ ಅಂದಾಜಿಸಲಾಗಿದೆ ಎಂದು ಅವರು ತಿಳಿಸಿದರು. ಯೋಜನೆಗೆ ಸಂಬಂಧಿಸಿದಂತೆ 9 ಉಪ ಯೋಜನಾ ಸಿವಿಲ್ ಕಾಮಗಾರಿಗಳಿಗೆ ಪರಿಷ್ಕೃತ ಮೊತ್ತ 25,122.53 ಕೋಟಿ ರೂಪಾಯಿ ಅಂದಾಜಿಸಲಾಗಿದೆ. ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ನೀರು ಹರಿಸುವುದು ನಮ್ಮ ಸರಕಾರದ ವಾಗ್ದಾನವಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಸಭೆಯಲ್ಲಿ ಜಲಸಂಪನ್ಮೂಲ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಬಿಹಾರಕ್ಕೆ ಮೋದಿ ಬಂಪರ್ ಗಿಫ್ಟ್

### 7,616 ಕೋಟಿ ರೂ ರೈಲು, ರಸ್ತೆ ಯೋಜನೆಗಳಿಗೆ ಕೇಂದ್ರ ಅನುಮೋದನೆ

**ನವದೆಹಲಿ:** ಅಕ್ಟೋಬರ್–ನವೆಂಬರ್‌ನಲ್ಲಿ ನಡೆಯಲಿರುವ ಬಿಹಾರ ವಿಧಾನಸಭಾ ಚುನಾವಣೆಗೆ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಬಂಪರ್ ಗಿಫ್ಟ್ ನೀಡಿದ್ದು, ಚುನಾವಣೆ ಎದುರಿಸಲಿರುವ ರಾಜ್ಯಕ್ಕೆ 7,616 ಕೋಟಿ ರೂ. ಮೌಲ್ಯದ ಎರಡು ಪ್ರಮುಖ ಮೂಲಸೌಕರ್ಯ ಯೋಜನೆಗಳಿಗೆ ಕೇಂದ್ರ ಸರ್ಕಾರ ಬುಧವಾರ ಅನುಮೋದನೆ ನೀಡಿದೆ.

ಪ್ರಧಾನಿ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿ(ಸಿಸಿಇಎ) ಸಭೆಯಲ್ಲಿ ತೆಗೆದುಕೊಂಡ ನಿರ್ಧಾರಗಳ ಕುರಿತು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಮಾಧ್ಯಮಗಳಿಗೆ ಮಾಹಿತಿ ನೀಡಿದರು. ಎರಡು ಯೋಜನೆಗಳಲ್ಲಿ ಮೊದಲನೆಯದು 4,447 ಕೋಟಿ ರೂ. ವೆಚ್ಚದಲ್ಲಿ ಬಕ್ಸಾರ್–ಭಾಗಲ್ಪುರ್ ಹೈಸ್ಪೀಡ್ ರಾಷ್ಟ್ರೀಯ ಹೆದ್ದಾರಿ ಕಾರಿಡಾರ್ ವಿಭಾಗದ, 82 ಕಿ.ಮೀ. ಹಸಿರು ಮೈದಾನ ಮೊಕಾಮಾ–ಮುಂಗೇರ್ ನಿರ್ಮಾಣವಾಗಿದೆ ಎಂದು ಅವರು ಹೇಳಿದರು. ಮುಂದಿನ ಮೂರು ವರ್ಷಗಳಲ್ಲಿ 3,169 ಕೋಟಿ ರೂ. ಅಂದಾಜು ವೆಚ್ಚದಲ್ಲಿ 177 ಕಿ.ಮೀ. ಭಾಗಲ್ಪುರ್–ದುಮ್ಕಾ–ರಾಮ್‌ಪುರ್ಹತ್ ರೈಲು ಮಾರ್ಗವನ್ನು ದ್ವಿಗುಣಗೊಳಿಸಲು ಎರಡನೇ



ನಿರ್ಧಾರ ತೆಗೆದುಕೊಳ್ಳಲಾಗಿದೆ. ಏಕೆಂದರೆ ಇವೆರಡೂ ಮುಂದಿನ ಮೂರು ವರ್ಷಗಳಲ್ಲಿ ಪೂರ್ಣಗೊಳ್ಳುವ ಸಾಧ್ಯತೆಯಿದೆ ಎಂದು ಸಚಿವರು ಮಾಹಿತಿ ನೀಡಿದರು.

ಈ ರಸ್ತೆ ಯೋಜನೆಯು ಸರಾಸರಿ ವಾಹನ ವೇಗ ಗಂಟೆಗೆ 80 ಕಿ.ಮೀ. ಮತ್ತು ವಿನ್ಯಾಸದ ವೇಗ ಗಂಟೆಗೆ 100 ಕಿ.ಮೀ. ಆಗಿದ್ದು, ಒಟ್ಟಾರೆ ಪ್ರಯಾಣದ ಸಮಯವನ್ನು ಸುಮಾರು 1.5 ಗಂಟೆಗಳಷ್ಟು ಕಡಿಮೆ ಮಾಡುವುದು ಇದರ ಉದ್ದೇಶವಾಗಿದೆ ಎಂದರು.

"ಈ ಪ್ರದೇಶದಲ್ಲಿ ಹೆಚ್ಚಿದ ಆರ್ಥಿಕ ಚಟುವಟಿಕೆಯು ಭವಿಷ್ಯದಲ್ಲಿ ಸರಕು ಸಾಗಣೆ ಮತ್ತು ಮೊಕಾಮಾ–ಮುಂಗರ್ ವಿಭಾಗದಲ್ಲಿ ಸಂಚಾರವನ್ನು ಹೆಚ್ಚಿಸುವ ನಿರೀಕ್ಷೆಯಿದೆ" ಎಂದು ವೈಷ್ಣವ್ ತಿಳಿಸಿದರು.



## ನೂತನ ಗೋ ಶಾಲೆ ಪ್ರಾರಂಭ

**ತೇರದಾಳ:** ಗೋವುಗಳು ಎಂದರೆ ಭಾರತ ದೇಶದ ಪ್ರತೀತಿ ಆಗಿವೆ. ಅವುಗಳ ಲಾಲನೆ ಪಾಲನೆ ಪ್ರತಿಯೊಬ್ಬರ ಕರ್ತವ್ಯ ಆಗಿದೆ. ಆದ್ದರಿಂದ ಹಳಿಂಗಳಿ ಭದ್ರಗಿರಿ ಬೆಟ್ಟದಲ್ಲಿ ಗೋ ಶಾಲೆ ಪ್ರಾರಂಭಿಸಲಾಗಿದೆ ಎಂದು 108 ಕುಲರತ್ನಭೂಷಣ ಮುನಿಗಳು ಹೇಳಿದರು.

ಅತ್ಯಂತ ಪ್ರಾಚೀನ ಧರ್ಮ ಎನಿಸಿಕೊಂಡಿರುವ ಜೈನ್ ಧರ್ಮದಲ್ಲಿ ಸಮಾಜ ಮುಖಿ ಕೆಲಸಗಳಿಗೆ ಹೆಚ್ಚಿನ ಮಣ್ಣನೆ ನೀಡಲಾಗುತ್ತದೆ. ಗೋ ಶಾಲೆ ಪ್ರಾರಂಭಿಸಬೇಕೆಂಬ ಬಹುದಿನಗಳ ಆಸೆ ಈಡೇರಿದಂತಾಗಿದೆ. ಇದಕ್ಕೆ ಬಹಳಷ್ಟು ಜನರ ಸಹಕಾರ ಇದೆ ಎಂದು ಹೇಳಿದರು. ದೆಹಲಿಯ ಉದ್ಯಮಿ ಮಾತನಾಡಿ, ಭದ್ರಗಿರಿಯಲ್ಲಿ ಗೋ ಶಾಲೆ ಪ್ರಾರಂಭಿಸಿರುವುದು ಇತರರಿಗೆ ಮಾದರಿ ಆಗಿದೆ. ಮುಂಬರುವ ದಿನಗಳಲ್ಲಿ ಹಂತ ಹಂತವಾಗಿ ಗೋ ಶಾಲೆ ಅಭಿವೃದ್ಧಿಗೆ ದೇಣಿಗೆ ನೀಡುವುದಾಗಿ ಭರವಸೆ ನೀಡಿದರು. ಕಾರ್ಯಕ್ರಮಕ್ಕೂ ಮೊದಲು ಗೋವುಗಳನ್ನು ವಾದ್ಯ ಮೇಳಗಳೊಂದಿಗೆ ಮೆರವಣಿಗೆ ಮೂಲಕ ಕರೆತಂದು ಗೋ ಶಾಲೆಯನ್ನು ಉದ್ಘಾಟಿಸಲಾಯಿತು. ಬೆಳಗಾವಿ ಮಾಜಿ ಶಾಸಕ ಸಂಜಯ ಪಾಟೀಲ ಮಾತನಾಡಿದರು. ಹಳಿಂಗಳಿ, ತಮದಡ್ಡಿ, ತೇರದಾಳ ವಾಸವಿ ಪೂಜ್ಯ, ರಬಕವಿ, ಅಥಣಿ ತಾಲೂಕಿನ ಮಹಿಷವಾಡಗಿ ಸೇರಿದಂತೆ ಬೇರೆ ಬೇರೆ ಕಡೆಗಳಿಂದ ಜೈನ್ ಸಮಾಜದ ಜನಪ್ರತಿನಿಧಿಗಳು ಮುಖಂಡರು, ಶ್ರಾವಕ ಶ್ರಾವಕಿಯರು ಆಗಮಿಸಿದ್ದರು.


# ಸಂಘಗಳಿಗೆ ಇಷ್ಟವಾಗುವ ರೀತಿಯಲ್ಲಿ ಅಭ್ಯರ್ಥಿಗಳ ಆಯ್ಕೆ

**ಗೋಕಾಕ:** ನಾನು ಮತ್ತು ಗೋಕಾಕ ಶಾಸಕ ರಮೇಶ್ ಜಾರಕಿಹೊಳಿಯವರು ಸೇರಿಕೊಂಡು ಇದೇ ತಿಂಗಳ ಅಂತ್ಯದೊಳಗೆ ಮೂಡಲಗಿ ಮತ್ತು ಗೋಕಾಕ ತಾಲೂಕಿನ ಅಭ್ಯರ್ಥಿಗಳನ್ನು ಅಂತಿಮಗೊಳಿಸುವುದಾಗಿ ಅರಭಾವಿ ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹೇಳಿದರು.

ಬುಧವಾರದಂದು ನಗರದ ಹೊರವಲಯದಲ್ಲಿರುವ ಗೋಕಾಕ ಸಪ್ಲಾಯರ್ಸ್ ಭವನದಲ್ಲಿ ಮೂಡಲಗಿ ಮತ್ತು ಗೋಕಾಕ ತಾಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಆಡಳಿತ ಮಂಡಳಿಯ ಸದಸ್ಯರನ್ನುದ್ದೇಶಿಸಿ ಮಾತನಾಡಿದ ಅವರು, ಸಂಘಗಳಿಗೆ ಇಷ್ಟವಾಗುವ ರೀತಿಯಲ್ಲಿ ಸಮರ್ಥ ವ್ಯಕ್ತಿಗಳನ್ನು ಬ್ಯಾಂಕಿನ ಅಭ್ಯರ್ಥಿಗಳನ್ನಾಗಿ ಆಯ್ಕೆ ಮಾಡುವುದಾಗಿ ತಿಳಿಸಿದರು.

ಬಿಡಿಸಿಸಿ ಬ್ಯಾಂಕಿಗೆ ನಡೆಯುವ ಚುನಾವಣೆಯಲ್ಲಿ ಎಲ್ಲ ಸ್ಥಾನಕ್ಕೂ ಚುನಾವಣೆಯನ್ನು ನಡೆಸದೇ ಹೊಂದಾಣಿಕೆಯಿರುವ ಕಡೆಗಳಲ್ಲಿ ಅವಿರೋಧವಾಗಿ ಆಯ್ಕೆ ಮಾಡುವ ತೀರ್ಮಾನಕ್ಕೆ ಬರಲಾಗಿದೆ. ಅವಶ್ಯವಿದ್ದಲ್ಲಿ ಮಾತ್ರ ಕೆಲವು ಸ್ಥಾನಗಳಿಗೆ ಚುನಾವಣೆಯನ್ನು ನಡೆಸಲಾಗುತ್ತದೆ. ಒಟ್ಟು 16 ಸ್ಥಾನಗಳ ಪೈಕಿ 12 ಸ್ಥಾನಗಳಲ್ಲಿ ನಮ್ಮ ಬೆಂಬಲಿತ ಅಭ್ಯರ್ಥಿಗಳು ಜಯ ಸಾಧಿಸಲಿದ್ದಾರೆ. ಈಗಾಗಲೇ ನಮ್ಮ ಟೀಂ ಬ್ಯಾಂಕಿನ ಅಧಿಕಾರ ಚುಕ್ಕಾಣಿ ಹಿಡಿದಿದೆ ಎಂಬುದನ್ನು ಆತ್ಮವಿಶ್ವಾಸದಿಂದ ಹೇಳುತ್ತಿದ್ದೇನೆ ಎಂದು ಅವರು ತಿಳಿಸಿದರು.

ಅಕ್ಟೋಬರ್ ತಿಂಗಳಲ್ಲಿ ಜರುಗುತ್ತಿರುವ



ಈ ಚುನಾವಣೆಯನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ.

ಚುನಾವಣೆಗೂ ಮುನ್ನವೇ ಮೂರು ತಿಂಗಳಿನಿಂದ ಜಿಲ್ಲೆಯ ಎಲ್ಲ ತಾಲ್ಲೂಕು ಕ್ಷೇತ್ರಗಳಿಗೆ ಭೇಟಿ ನೀಡಿ ಸಹಕಾರ ಸಂಘಗಳ ಸದಸ್ಯರುಗಳ ಅಹವಾಲುಗಳನ್ನು ಸ್ವೀಕರಿಸಿದ್ದೇನೆ. ಬಿಡಿಸಿಸಿ ಬ್ಯಾಂಕಿನಿಂದ ರೈತರಿಗೆ ಮತ್ತು ಸಹಕಾರ ಸಂಘಗಳಿಗೆ ಹೆಚ್ಚಿನ ನೆರವು ಸಿಗಬೇಕೆಂಬುದು ನಮ್ಮ ಆಶಯವಾಗಿದೆ. ಈ ದಿಸೆಯಲ್ಲಿ ಜಿಲ್ಲೆಯಾದ್ಯಂತ ಸಹಕಾರ ಸಂಘಗಳ ಬಗ್ಗೆ ತಿಳುವಳಿಕೆ ಹೊಂದಿರುವ, ರೈತರ ಕಷ್ಟಗಳಿಗೆ ಸಮರ್ಪಕ ರೀತಿಯಲ್ಲಿ ಸ್ಪಂದಿಸುವ ಕ್ರಿಯಾಶೀಲ ವ್ಯಕ್ತಿಗಳನ್ನು ಗುರುತಿಸುತ್ತಿದ್ದೇವೆ. ಬಹುತೇಕ ಕಡೆಗಳಲ್ಲಿ ಅಭ್ಯರ್ಥಿಗಳ ಆಯ್ಕೆಯು ಮುಗಿದಂತಾಗಿದೆ. ಬಾಕಿ ಉಳಿದಿರುವ ಕ್ಷೇತ್ರಗಳಲ್ಲಿ ಜಿಲ್ಲೆಯ ಎಲ್ಲ ವಿವಿಧ ಪಕ್ಷಗಳ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅಭ್ಯರ್ಥಿಗಳನ್ನು ಅಂತಿಮ ಮಾಡುವುದಾಗಿ ಅವರು ಹೇಳಿದರು.

ನಮ್ಮ ಟೀಂ ನಿಂದ ಹೆಚ್ಚಿನ ಪ್ರಮಾಣದಲ್ಲಿ ಅಭ್ಯರ್ಥಿಗಳು ಆಯ್ಕೆಗೊಂಡರೆ ನಮಗೆ ಲಾಭವಾಗುತ್ತದೆ. ಬಿಡಿಸಿಸಿ ಬ್ಯಾಂಕಿನ ಅಧ್ಯಕ್ಷ-ಉಪಾಧ್ಯಕ್ಷರು ನಮ್ಮವರಾದರೆ ನಮ್ಮ ಸಂಘ-ಸಂಸ್ಥೆಗಳು ಉಳಿಯುತ್ತವೆ. ಇದನ್ನು ಮನಗಂಡು ಜಿಲ್ಲೆಯಾದ್ಯಂತ ಸಂಚರಿಸಿ ಸಹಕಾರಿಗಳ ಬಳಿಗೆ ಹೋಗಿ ಮತ ಯಾಚಿಸುತ್ತಿದ್ದೇನೆ. ಇದರಲ್ಲಿ ನಮ್ಮದು ಯಾವ ಸ್ವಾರ್ಥವೂ ಇಲ್ಲವೆಂದು ಅವರು ಸ್ಪಷ್ಟಪಡಿಸಿದರು.

ಮುಂದಿನ ದಿನಗಳಲ್ಲಿ ಬಿಡಿಸಿಸಿ ಬ್ಯಾಂಕನ್ನು ರೈತರ ಮನೆ ಬಾಗಿಲಿಗೆ ಹೋಗಬೇಕು. ರೈತರ ಕಷ್ಟಗಳನ್ನು ಅರಿಯಬೇಕು.

ರೈತರ ಆರ್ಥಿಕ ಅಭಿವೃದ್ಧಿಗೆ ಸೌಲಭ್ಯಗಳು ದೊರಕಬೇಕು. ಶೂನ್ಯ ಬಡ್ಡಿ ದರದಲ್ಲಿ ರೈತರಿಗೆ ಸಾಲ ಸಿಗಬೇಕೆಂಬ ಸಂಕಲ್ಪದಿಂದ ರೈತರ ಸುಖ, ನೆಮ್ಮದಿಗಾಗಿ ಬ್ಯಾಂಕಿನ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಿದ್ದೇನೆ. ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಕೆಎಲ್ಇ ಚೇರಮನ್ ಡಾ. ಪ್ರಭಾಕರ ಕೋರೆ, ಶಾಸಕ ರಮೇಶ್ ಜಾರಕಿಹೊಳಿ, ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆಯವರನ್ನು ಒಟ್ಟಾಗಿ ಸೇರಿಸಿಕೊಂಡು ಚುನಾವಣೆಯನ್ನು ಎದುರಿಸುತ್ತಿದ್ದೇವೆ. ಸಂಪೂರ್ಣ ಬಹುಮತದಿಂದ ಬ್ಯಾಂಕಿನ ಆಡಳಿತವು ನಮ್ಮ ಕೈಗೆ ಸಿಗಲಿದೆ ಎಂದು ಬಾಲಚಂದ್ರ ಜಾರಕಿಹೊಳಿಯವರು ವಿಶ್ವಾಸ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಬಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಎಸ್.ಜಿ.ಢವಳೇಶ್ವರ, ನಿರ್ದೇಶಕ ನೀಲಕಂಠ ಕಪ್ಪಲಗುದ್ದಿ, ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಬಸಗೌಡ ಪಾಟೀಲ, ಗೋಕಾಕ ಟಿಎಪಿಸಿಎಂಎಸ್ ಅಧ್ಯಕ್ಷ ಅಶೋಕ ನಾಯಿಕ, ಜಿ.ಪಂ. ಮಾಜಿ ಸದಸ್ಯರಾದ ಟಿ ಆರ್ ಕಾಗಲ್, ಮಡ್ಡೆಪ್ಪ ತೋಳಿನವರ, ವಿಠ್ಠಲ ಸವದತ್ತಿ, ಶಂಕರ ಬಿಲಕುಂದಿ, ವಿಠ್ಠಲ ಪಾಟೀಲ, ಪ್ರಭಾ ಶುಗರ್ಸ್ ನಿರ್ದೇಶಕ ಶಿದ್ಲಿಂಗ ಕಂಬಳಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಸಚಿವ ತಿಮ್ಮಾಪುರ ಹುಟ್ಟುಹಬ್ಬಕ್ಕೆ ಸಿದ್ದತೆ

**ಮುಧೋಳ:** ಆರ್.ಬಿ.ಟಿ. ಫೌಂಡೇಶನ್ ಹಾಗು ವಿವಿಧ ಇಲಾಖೆಗಳ ಸಹಯೋಗದಲ್ಲಿ ಸೆ.14,15,ಮತ್ತು 16.ರಂದು ಸಚಿವ ಆರ್.ಬಿ. ತಿಮ್ಮಾಪುರ ಅವರ ಹುಟ್ಟುಹಬ್ಬವನ್ನು ಸರಳ ಹಾಗು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಎಂದು ಕಾಂಗ್ರೇಸ್ ಪಕ್ಷದ ಅಧ್ಯಕ್ಷ ಸದುಗೌಡ ಪಾಟೀಲ, ಲೊಕಾಪುರ ವಲಯದ ಅಧ್ಯಕ್ಷ ಅಶೋಕ ಕಿವಡಿ ತಿಳಿಸಿದ್ದಾರೆ.

ನಗರದ ಕಾನಿಪ. ಕಚೇರಿಯಲ್ಲಿ ಮಾತನಾಡಿದ ಅವರು ಮೂರು ದಿನಗಳ ಕಾಲ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳು ಹಾಗು 30.ಕಂಪನಿಗಳ ಪರ ನಿರುದ್ಯೋಸ್ಥರಿಗೆ ಉದ್ಯೋಗದ ಮೇಳ ಬಡವರಿಗೆ, ಅನಾಥರಿಗೆ, ರೋಗಿಗಳಿಗೆ ಸಹಾಯಹಸ್ತ, ರಕ್ತದಾನ ಶಿಬಿರ, ವಾಹನ ಚಾಲಕರಿಗೆ ಉಚಿತ ವಿಮೆ, ಬ್ಯುಟಿಶಿಯನ್ ತರಬೇತಿ ಒದಗಿಸಲಾಗುತ್ತಿದೆ. ಇದರ ಸದುಪಯೋಗವನ್ನು ಎಲ್ಲರೂ ಪಡೆಯಬೇಕು ಎಂದು ಅವರು ವಿವರಿಸಿ ಸೆ.14.ರಂದು ಶಿಕ್ಷಕರ ಜಯಂತ್ಯುತ್ಸವದ ಅಂಗವಾಗಿ ನಗರದ ನೂತನ ಬಿಈಓ. ಕಚೇರಿ ಜಾಗು ಗುರುಭವನದ ಅಡಿಗಲ್ಲು ಸಮಾರಂಭ ನಡೆಯಲಿದೆ ಎಂದರು.

ಸೆ.15.ರಂದು ನಗರದಲ್ಲಿ ಅಗ್ನಿಶಾಮಕ ನೂತನ ಠಾಣೆ ಹಾಗು ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಜಿಎಲ್ಎಲ್‌ಬಿಸಿ. ಇಲಾಖೆಯ ಮಳಿಗೆಗಳ ಉದ್ಘಾಟನೆ, ಮತ್ತು ಲೋಕಾಪುರ ಬ್ಲಾಕ್ ಕಾಂಗ್ರೇಸ್ ನೂತನ ಕಚೇರಿ ಅಡಿಗಲ್ಲು ಸಮಾರಂಭ ನಡೆಯಲಿದೆ.

ಸೆ.16.ರಂದು ನಗರಸಭೆ ಸಹಯೋಗದಲ್ಲಿ ವೆಂಕಟೇಶ್ವರ(ಮಹಾರಾಣಿ) ಕೆರೆಗೆ ಬಾಗಿನ ಅರ್ಪನೆ, ರು.177.ಕೋಟಿ ವೆಚ್ಚದಲ್ಲಿ 34*7 ಕುಡಿಯುವ ನೀರಿನ ಯೋಜನೆಗೆ ಅಡಿಗಲ್ಲು ಸಮಾರಂಭ, ಪೌರಕಾರ್ಮಿಕರಿಗೆ ಬಟ್ಟೆ, ಅಂಗವಿಕಲರಿಗೆ ತ್ರೀಚಕ್ರ ವಾಹನ, ವಿಶೇಷಚೇತನರಿಗೆ ಟ್ರ್ಯಾಕ್ ಸೂಟ್, ಮದರಸಾ ಮಕ್ಕಳಿಗೆ ನೋಟ್‌ಬುಕ್, ಕೃಷಿ ಇಲಾಖೆಯಿಂದ ರೈತರಿಗೆ ಹೈಟೆಕ್ ಕೃಷಿ ಯಂತ್ರೋಪಕರಣ ಹಾಗು ವಿವಿಧ ಇಲಾಖೆಗಳ ಸಲಕರಣೆ ವಿತರಣೆ ಜೊತೆಗೆ ತೋಟಗಾರಿಕೆ ಇಲಾಖೆ ವತಿಯಿಂದ ಫಲಪುಷ್ಪ ಪ್ರದರ್ಶನ ನಡೆಯಲಿದೆ. ಎಂದರು.

ಸೆ.16.ರಂದು ವೇದಿಕೆ ಕಾರ್ಯಕ್ರಮವು ದಾನಮ್ಮಗುಡಿ ಆವರಣದಲ್ಲಿ ಮ.12.ಕ್ಕೆ ನಡೆಯುವ ಈ ಜನಪರ ಕಾರ್ಯಕ್ರಮದಲ್ಲಿ ಸಚಿವ ಸೇರಿದಂತೆ ಬಾಗಲಕೋಟೆಯ ಶಾಸಕರು, ಮಾಜಿ ಶಾಸಕರು, ಚುನಾಯಿತ ಪ್ರತಿನಿಧಿಗಳು ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆ ಎಂದರು.

ವಕಿಲ ಅಶೋಕ ಕಿವಡಿ, ನಗರ ಘಟಕ ಅಧ್ಯಕ್ಷ ರಾಘು ಮೊಕಾಶಿ, ಮುಖಂಡ ವೆಂಕಣ್ಣ ಗಿಡ್ಡಪ್ಪನವರ, ಮಹಾಂತೇಶ ಮಾಚಕನೂರ, ಸದುಗೌಡ ಪಾಟೀಲ, ಪ್ರವಿಣ ಪಾಟೀಲ, ರಾಜುಗೌಡ ನ್ಯಾಮಗೌಡ, ನಿಂಗಪ್ಪ ಅಮಾತಿ, ಭಾರತಿ ಪಾಚಂಗಿ, ಲಕ್ಷ್ಮಿ ಡೋಣಿ, ಹನಮವ್ವ ಇರನ್ನವರ ಇತರರಿದ್ದರು.




## ವಲಯ ಮಟ್ಟದ ವಾಲಿಬಾಲ್ ಪಂದ್ಯಾವಳಿಗೆ ಚಾಲನೆ



**ತೇರದಾಳ:** ಭಾವಿ ವೈದ್ಯರು ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಕ್ರೀಡೆಗೆ ಮತ್ತಷ್ಟು ಮೆರಗು ಬಂದಂತಾಗಿದೆ ಎಂದು ಬೆಳಗಾವಿ ಜಿಲ್ಲೆ ಹಾರೂಗೇರಿಯ ವೈದ್ಯ ಡಾ. ಸಂಜಯ ಪಾಟೀಲ ಹೇಳಿದರು.

ಇಲ್ಲಿನ ಎಸ್‌ಡಿಎಂ ಟ್ರಸ್ಟ್‌ನ ದಾನಿಗೊಂಡ ಆಯುರ್ವೇದ ವೈದ್ಯಕೀಯ ಕಾಲೇಜ್ ಹಾಗೂ ಬೆಂಗಳೂರಿನ ರಾಜೀವ ಗಾಂಧಿ ವಿಜ್ಞಾನ ವಿಶ್ವ ವಿದ್ಯಾಲಯ ಆಶ್ರಯದಲ್ಲಿ ಎಸ್‌ಡಿಎಂ ಟ್ರಸ್ಟ್ ಆವರಣದಲ್ಲಿ ಹಮ್ಮಿಕೊಂಡಿರುವ ಕಲಬುರಗಿ ವಲಯದ ಮೆಡಿಕಲ್ ಕಾಲೇಜುಗಳ ಪುರುಷ ಹಾಗೂ ಮಹಿಳಾ ವಾಲಿಬಾಲ್ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿದರು.

ಕ್ರೀಡೆಯಲ್ಲಿ ಕ್ರೀಡಾ ಮನೊಭಾವದಿಂದ ಪಾಲ್ಗೊಳ್ಳಿ. ಕ್ರೀಡೆಯಿಂದ ಶಾರೀರರಕಾಗಿ ಹಾಗೂ ಮಾನಸಿಕವಾಗಿ ಸದೃಢರಾಗಲು ಸಾಧ್ಯ ಎಂದು ಹೇಳಿದರು. ಸಂಸ್ಥೆ ಅಧ್ಯಕ್ಷ ಡಾ. ಮಹಾವೀರ ದಾನಿಗೊಂಡ ಮಾತನಾಡಿ ಈ ಮೊದಲು ತಮ್ಮ ಸಂಸ್ಥೆಗೆ ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿ ಹಮ್ಮಿಕೊಳ್ಳಲು ರಾಜೀವ ಗಾಂಧಿ ವಿಜ್ಞಾನ ವಿವಿ ಅವಕಾಶ ನೀಡಿತ್ತು. ಈ ಬಾರಿ ವಲಯ ಮಟ್ಟದ ಅವಕಾಶ ನೀಡಿದೆ. ವೈದ್ಯಕೀಯ ಕೋರ್ಸ್ ಮುಗಿಸಿದ ಬಳಿಕ ಸಮಯ ಇರುವುದಿಲ್ಲ. ಆದ್ದರಿಂದ ಕಲಿಕಾ ಸಂದರ್ಭದಲ್ಲಿಯೇ ಕ್ರೀಡೆಗಳಲ್ಲಿ ಭಾಗವಹಿಸುವ ಅವಕಾಶ ತಪ್ಪಿಸಿಕೊಳ್ಳಬೇಡಿ ಎಂದು ಹೇಳಿದರು. ರಾಜೀವ ಗಾಂಧಿ ವಿಜ್ಞಾನ ವಿವಿಯ ನಟನಿಯೇಲ್ ಮಾತನಾಡಿದರು. ಕಾಲೇಜಿನ ಅಧೀಕ್ಷಕ ಡಾ. ಪಿ.ಬಿ. ಅಪರಾಜ ಪ್ರತಿಜ್ಞಾ ವಿಧಿ ಬೋಧಿಸಿದರು. ಡಾ. ಉಗಾರೆ, ದೈಹಿಕ ನಿರ್ದೇಶಕ ರಾಮು ಹಾಡಕರ ಇದ್ದರು.

ಕಲಬುರಗಿ, ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಯ ವಿವಿಧ ಮೆಡಿಕಲ್ ಕಾಲೇಜುಗಳಿಂದ ಪುರುಷರ ಹಾಗೂ ಮಹಿಳೆಯರ ತಂಡಗಳು ಆಗಮಿಸಿದ್ದು, ಸ. 11ರಂದು ಫೈನಲ್ ಪಂದ್ಯ ನಡೆಯಲಿವೆ.

## ಮೊಬೈಲ್ ನಂಬರ್ ಆಧಾರ್‌ಗೆ ಲಿಂಕ್ ಮಾಡಿ

**ಕಾರವಾರ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಸಮೀಕ್ಷಾ ಕಾರ್ಯವು ಸೆ.22 ರಿಂದ ಅ.7ರ ವರೆಗೆ ನಡೆಯಲ್ಲಿದ್ದು,ಈ ಸಮೀಕ್ಷೆ ಕಾರ್ಯಕ್ಕೆ ಆಧಾರ ಲಿಂಕ್ಸ್ ಮೋಬೈಲ್ ನಂಬರ್ ಕಡ್ಡಾಯವಾಗಿರುವ ಕಾರಣ, ಜಿಲ್ಲೆಯ ಸಾರ್ವಜನಿಕರು ತಮ್ಮ ಚಾಲ್ತಿ ಇರುವ ಮೊಬೈಲ್ ನಂಬರ್‌ನ್ನು ಆಧಾರ ಕಾರ್ಡಗೆ ಲಿಂಕ್ / ಅಪಡೇಟ್ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ

**ಕಾರವಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಕಾನೂನು ಅರಿವು ಕಾರ್ಯಾಗಾರವನ್ನು ಸೆ.11 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ.ಎಂ ಉದ್ಘಾಟಿಸಲಿದ್ದು, ಜಿಲ್ಲಾಧಿಕಾರಿ ಕೆ.ಲಕ್ಷ್ಮೀ ಪ್ರಿಯಾ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ದಿಲೀಷ್ ಶಶಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ನೀರಜ್ ಬಿ.ವಿ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

## ಯಶಸ್ವಿಯಾಗಿ ಪ್ರಾರಂಭವಾದ ವಾರದ ಸಂತೆ



**ನೇಸರಗಿ:** ಇಲ್ಲಿಗೆ ಸಮೀಪದ ಬಹು ದಿನಗಳ ಕನಸಾಗಿದ್ದ ಇಲ್ಲಿನ ಜನರ ಬಹು ಬೇಡಿಕೆಯ ವಾರದ ಸಂತೆಯೂ ಬುಧವಾರದಂದು ಗ್ರಾಮದ ಹಿರಿಯರ ಹಾಗೂ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷರ, ಸದಸ್ಯರ, ಅಭಿವೃದ್ಧಿ ಅಧಿಕಾರಿಗಳ, ಸಿಬ್ಬಂದಿ ವರ್ಗದ ಮತ್ತು ಗ್ರಾಮಸ್ಥರ ಸಮ್ಮುಖದಲ್ಲಿ ಪೂಜೆ ನೆರವೇರಿಸುವದರ ಮೂಲಕ ಬೆಳ್ಳಿಗ್ಗೆ 7 ರಿಂದ ಮದ್ಯಾಹ್ನ 2-00 ರ ವರೆಗೆ ಅದ್ದೂರಿಯಾಗಿ ಪ್ರಾರಂಭವಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಹಾಗೂ ಸುತ್ತಮುತ್ತಲಿನ ರೈತರು, ವ್ಯಾಪಾರಸ್ಥರು ಹುಮ್ಮಸಿನಲ್ಲಿ ನೂತನ ಸಂತೆಯಲ್ಲಿ ಭಾಗವಹಿಸಿದ್ದರು. ಗ್ರಾಮದ ಜನತೆಯಲ್ಲಿ ಖುಷಿ ಸಂಭ್ರಮ ಮನೆ ಮಾಡಿತು. ದೂರದ ಊರುಗಳಿಗೆ ತೆರಳಿ ಸಂತೆ ಆಯಾಸದಿಂದ ಸಂತೆ ಮಾಡದೇ ಆರಾಮವಾಗಿ ಸ್ವಂತ ಊರಲ್ಲಿ ಸಂತೆ ಮಾಡಿ ಸಂಭ್ರಮಿಸಿದರು.

ಸಂತೆ ಪ್ರಾರಂಬೋತ್ಸವ ಕಾರ್ಯಕ್ರಮದಲ್ಲಿ ಗ್ರಾ ಪಂ ಅಧ್ಯಕ್ಷ ಶ್ರೀಮತಿ ಭಾರತಿ ತಿಗಡಿ, ಉಪಾಧ್ಯಕ್ಷರಾದ ಕಾಶಿಮ ಜಮಾದಾರ, ಸದಸ್ಯರಾದ ರೇಣುಕಾ ಕಡಕೋಳ, ಶಾಂತವ್ವ ಹುಲಮನಿ, ವಿಜಯ ಯರಡಾಲ, ರಾಜು ಹಣ್ಣಿಕೇರಿ, ಮಂಜುಳಾ ಹುಲಮನಿ, ಸುಧಾ ಹೊಸಮನಿ, ಯಲ್ಲವ್ವ ಗುಡಿ, ಶಿವಪ್ಪ ಚೋಭಾರಿ, ಚಂದ್ರಯ್ಯ ಹಿರೇಮಠ, ರೈತ ಸಂಘದ ಮುಖಂಡ ಮಹಾಂತೇಶ ಹಿರೇಮಠ, ನೇಮಣ್ಣ ಬೆಳವಲ, ಪಾರಿಸ ಟಗರಿ,ಆಜಾದ ಸೈಯದ, ಮಹಾವೀರ ಅಲ್ಲಯ್ಯನವರ, ಅಜ್ಜಪ್ಪ ಕಮತಗಿ, ಮಹಾಂತೇಶ ಹಿರೇಮಠ, ಮಹಾಂತೇಶ ಬಡಿಗೇರ, ಬಸಯ್ಯ ಹಿರೇಮಠ, ಜ್ಞಾನದೇವ ತುಮ್ಮರಗುದ್ದಿ ಸೇರಿದಂತೆ ಮೇಕಲಮರಡಿ ಗ್ರಾಮದ ಗುರುಹಿರಿಯರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಯುವ ಜನತೆ ಹೆಚ್.ಐ.ವಿ ಬಗ್ಗೆ ಜಾಗೃತರಾಗಿರಬೇಕು: ಡಾ.ದಿಲೀಷ್ ಶಶಿ

**ಕಾರವಾರ:** ಯುವ ಜನತೆ ಹೆಚ್.ಐ.ವಿ ಬಗ್ಗೆ ಸರಿಯಾದ ಮಾಹಿತಿ ತಿಳಿದಿರಬೇಕು ಮತ್ತು ಸದಾ ಜಾಗೃತರಾಗಿರಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ದಿಲೀಷ್ ಶಶಿ ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಜಿಲ್ಲಾ ಆಸ್ಪತ್ರೆ ಕಾರವಾರ, ಸೃಷ್ಠಿ ಸಂಸ್ಥೆ ಕುಮಟಾ, ಪದವಿ ಮಹಾವಿದ್ಯಾಲಯಗಳು, ರೆಡ್ ರಿಬ್ಬನ್ ಕ್ಲಬ್, ಎನ್.ಎಸ್.ಎಸ್ ಘಟಕ, ಕೂರ್ ಸಂಸ್ಥೆ ಇವರುಗಳ ಸಂಯುಕ್ತ ಆಶ್ರಯದಲ್ಲಿ 17 ರಿಂದ 25 ವರ್ಷದೊಳಗಿನ ವಿದ್ಯಾರ್ಥಿಗಳಿಗೆ ನಡೆದ ಜಿಲ್ಲಾ ಮಟ್ಟದ ಮ್ಯಾರಥಾನ್ ಓಟಕ್ಕೆ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು.



ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಹರ್ಷ ವೆಂಕಟೇಶ ಮಾತನಾಡಿ ಯುವ ಜನತೆಯಲ್ಲಿ ಹೆಚ್.ಐ.ವಿ/ಏಡ್ಸ್ ಕುರಿತು ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆ ಮ್ಯಾರಥಾನ್ ಸ್ಪರ್ಧೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಯುವ ಜನತೆಯಲ್ಲಿ ಡ್ರಗ್ಸ್ ಮಾದಕ ವಸ್ತು ಮತ್ತು ಅಸುರಕ್ಷಿತ ಲೈಂಗಿಕತೆಯಿಂದ ಹೆಚ್.ಐ.ವಿ ಸೋಂಕಿಗೆ ಒಳಗಾಗುತ್ತಿದ್ದಾರೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯಲ್ಲಿ ಪರಿಣಾಮಕಾರಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಹೆಚ್.ಐ.ವಿ ಬಗ್ಗೆ ಮಾತನಾಡಲು ಯಾವುದೇ ಮುಜುಗರ ಬೇಡ ಈ ವರ್ಷ ಹೆಚ್.ಐ.ವಿ ಬಗ್ಗೆ ಜಾಗೃತಿ ಮೂಡಿಸಲು ಬೈಕ್ ರ‍್ಯಾಲಿ, ರಸ ಪ್ರಶ್ನೆ ಕಾರ್ಯಕ್ರಮ, ಮ್ಯಾರಥಾನ್ ಸ್ಪರ್ಧೆ, ಕಾಲೇಜು ವಿದ್ಯಾರ್ಥಿಗಳಿಂದ ಪ್ಲಾಷ್ ಮಾಬ್, ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಹದಿಹರೆಯದ ಶಿಕ್ಷಣ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಹುಡುಗರ ವಿಭಾಗದಲ್ಲಿ ಕುಮಟಾದ ನೆಲ್ಲಿಕೇರಿಯ ಹನುಮಂತ ಬೆಣ್ಣೆ ಪದವಿ ಪೂರ್ವ ಕಾಲೇಜಿನ ಮಾಲತೇಶ ಮಂಜಪ್ಪ ಹುಳಕೇರಿ ಪ್ರಥಮ, ಕಾರವಾರದ ಬಾಲಮಂದಿರದ ಕಾರ್ತಿಕ ರವೀಂದ್ರ ನಾಯ್ಕ ದ್ವಿತೀಯ, ಪ್ರತೀಕ ವಾಲೇಕರ ತೃತೀಯ, ಸಮಾದಾನಕರ ಬಹುಮಾನವನ್ನು ಹರಿ ದಾಡಿ ಪಡೆದು ಕೊಂಡರು. ಹುಡುಗಿಯರ ವಿಭಾಗದಲ್ಲಿ ಕಾರವಾರ ಸರಕಾರಿ ಪದವಿ ಪೂರ್ವ ಕಾಲೇಜಿನ ಬಿಂದು ಶ್ರೀಕಾಂತ ಹಿರೇಮಠ ಪ್ರಥಮ, ಕಾರವಾರದ ಬಾಲಮಂದಿರದ ಪೂರ್ವಿ ಟಿ ಹರಿಕಂತ್ರ ದ್ವಿತೀಯ, ಸುಪ್ರಿತಾ ಪರಮೇಶ್ವರ ಚೆನ್ನಯ್ಯ ತೃತೀಯ, ಸಮಾಧಾನಕರ ಬಹುಮಾನವನ್ನು ನಯನಾ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಪಿ.ಎಸ್.ಐ ಶ್ರೀಕಾಂತ ರಾಥೋಡ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಬಿ.ವಿ.ನೀರಜ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ನಟರಾಜ, ದಿವೆಕರ ಕಾಮರ್ಸ್ ಕಾಲೇಜ್ ಉಪನ್ಯಾಸಕ ಡಾ. ತೊರ್ಲೆ, ಶಿವಾಜಿ ಪದವಿ ಮಹಾವಿದ್ಯಾಲಯ ಬಾಡದ ದೈಹಿಕ ಶಿಕ್ಷಣಾಧಿಕಾರಿ ತಾರಾನಾಥ ಹರಿಕಂತ್ರ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಕಚೇರಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಅವಕಾಶಗಳಿವೆ

**ಬಾಗಲಕೋಟೆ:** ಸ್ನಾತಕೋತ್ತರ ನಂತರದ ವೃತ್ತಿ, ಹಾದಿ ಬಹಳ ವಿಶಾಲವಾಗಿದೆ. ಆಸಕ್ತಿ, ಕೌಶಲ್ಯ ಮತ್ತು ನಿರಂತರ ಅಧ್ಯಯನದ ಮೇಲೆ ಅವಲಂಬಿತವಾಗಿ ಶಿಕ್ಷಣ, ಉದ್ಯೋಗ, ಉದ್ಯಮ ಹೀಗೆ ಎಲ್ಲ ದಿಕ್ಕುಗಳಲ್ಲಿ ಅವಕಾಶಗಳು ತೆರೆದಿವೆ ಎಂದು ಬೀಳಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬೀಳಗಿಯ ಸಹಾಯಕ ಪ್ರಾಧ್ಯಾಪಕರಾದ ಡಾ. ಕವಿತಾ ಮುತ್ತಪ್ಪ ಹೇಳಿದರು.

ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಒಂದು ದಿನದ ಕಾರ್ಯಾಗಾರವನ್ನು "ವಾಣಿಜ್ಯ ಸ್ನಾತಕೋತ್ತರ ನಂತರದ ವೃತ್ತಿ ಅವಕಾಶಗಳು" ಎಂಬ ವಿಷಯದ ಮೇಲೆ ಹಮ್ಮಿಕೊಂಡಿದ್ದ ಉಪನ್ಯಾಸದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾತನಾಡಿದ ಅವರು ವಿದ್ಯಾಭ್ಯಾಸವು ವ್ಯಕ್ತಿಯ ಬದುಕಿನಲ್ಲಿ ಬೆಳಕಿನಂತೆ ಮಾರ್ಗದರ್ಶನ ನೀಡುತ್ತದೆ. ಅದರಲ್ಲೂ ವಾಣಿಜ್ಯ ಕ್ಷೇತ್ರದಲ್ಲಿ ಸ್ನಾತಕೋತ್ತರ (ಒ.ಅಂಟ) ಪದವಿ ಪಡೆದ ವಿದ್ಯಾರ್ಥಿಗಳಿಗೆ ಭವಿಷ್ಯದಲ್ಲಿ ಅನೇಕ ವೃತ್ತಿ ಹಾದಿಗಳು ತೆರೆದಿವೆ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೇವಲ ಪದವಿ ಸಾಕಾಗದೆ, ಉನ್ನತ ವಿದ್ಯಾಭ್ಯಾಸ ಮತ್ತು ತಜ್ಞ ಜ್ಞಾನವನ್ನು ಹೊಂದಿರುವವರಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತಿವೆ. ಈ



ಹಿನ್ನೆಲೆಯಲ್ಲಿ ಎಂ.ಕಾಂ ನಂತರದ ವೃತ್ತಿ ಕ್ಷಿತಿಜವನ್ನು ಅನ್ವೇಷಿಸುವುದು ಅತ್ಯಂತ ಅವಶ್ಯಕ. ಎಂ.ಕಾಂ, ಪದವಿ ಪಡೆದ ವಿದ್ಯಾರ್ಥಿಗಳಿಗೆ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಅವಕಾಶಗಳಿವೆ. ಪ್ರಾಧ್ಯಾಪಕರಾಗಲು ಅಥವಾ ಸಂಶೋಧಕರಾಗಲು ನೆಟ್/ಸೆಟ್ ಪರೀಕ್ಷೆಗಳನ್ನು ಉತ್ತೀರ್ಣಗೊಳ್ಳಬಹುದು. ಹೀಗೆಯೇ ಪಿ.ಎಚ್.ಡಿ. ಪದವಿಯನ್ನು ಪಡೆದರೆ ಸಂಶೋಧನಾ ಕ್ಷೇತ್ರದಲ್ಲಿ ಮಹತ್ವದ ಕೊಡುಗೆ ನೀಡುವ ಅವಕಾಶ ಸಿಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯ ಡಾ.ಜಗನ್ನಾಥ ಚವ್ಹಾಣ ಅವರು ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರವೂ ಎಂ.ಕಾಂ, ಪದವೀಧರರಿಗೆ ಭರವಸೆಯ ಉದ್ಯೋಗ ಕ್ಷೇತ್ರವಾಗಿದೆ.

ವಾಣಿಜ್ಯ ಜ್ಞಾನ, ಅಕೌಂಟಿಂಗ್ ಹಾಗೂ ಹಣಕಾಸು ನಿರ್ವಹಣೆಯಲ್ಲಿ ಪರಿಣತಿ ಹೊಂದಿರುವವರಿಗೆ ಬ್ಯಾಂಕುಗಳು, ವಿಮಾ ಕಂಪನಿಗಳು, ಹೂಡಿಕೆ ಸಂಸ್ಥೆಗಳು ಹಾಗೂ ಮಲ್ಟಿನ್ಯಾಷನಲ್ ಕಂಪನಿಗಳಲ್ಲಿ ಉತ್ತಮ ಹುದ್ದೆಗಳು ದೊರೆಯುತ್ತವೆ ಎಂದರು. ಸಿಬ್ಬಂದಿ ಕಾರ್ಯದರ್ಶಿ ಡಾ.ಎಂ.ನಂಜುಂಡಸ್ವಾಮಿ, ಐಕ್ಯೂಎಸ್.ಸಂಯೋಜಕರಾದ ಗೀರಿಜಾ ನಾವದಗಿ, ಸಹಾಯಕ ಪ್ರಾಧ್ಯಾಪಕರಾದ ಅಲ್ಮಾಜ್ ಭಾಗವನ್, ಎಂ,ಕಾಂ ವಿಭಾಗದ ಮುಖ್ಯಸ್ಥರಾದ ಕವಿತಾ ಮಳಜಿ, ಸಾಗರ ಭೆಬ್ಬಿ ಉಪಸ್ಥಿತರಿದ್ದರು.

## ಗಣತಿ ಮನೆಪಟ್ಟಿ ಅಂಟಿಸುವ ಕಾರ್ಯಕ್ಕೆ ಸಹಕರಿಸಿ

**ಬೆಳಗಾವಿ:** ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದ ಎಲ್ಲ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಕಾರ್ಯವನ್ನು ಕೈಗೊಳ್ಳಲಾಗುತ್ತಿದ್ದು, ಈ ಸಮೀಕ್ಷೆಯ ಕಾರ್ಯದಲ್ಲಿ ಮನೆ ಪಟ್ಟಿ (ಹೌಸ್ ಲಿಸ್ಟಿಂಗ್ ಎಕ್ಸರ್ಸೈಜ್) ಮಾಡಲಾಗುತ್ತಿರುವ ಹಿನ್ನೆಲೆಯಲ್ಲಿ ಇಂದು ಹೆಸ್ಕಾಂ ಅಧಿಕಾರಿಗಳು ಬುಧವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಬೆಳಗಾವಿಯ ನಿವಾಸಕ್ಕೆ ಭೇಟಿ ನೀಡಿ, ಸಮೀಕ್ಷೆಯ ಭಾಗವಾಗಿ ಮನೆಗಳಿಗೆ ಅಂಟಿಸಬೇಕಿರುವ ಸ್ಟಿಕರ್ ಕುರಿತು ಮಾಹಿತಿಯನ್ನು ನೀಡಿದರು.

ರಾಜ್ಯದ ಪ್ರತಿ ಮನೆಗೆ ಸಿಬ್ಬಂದಿ ಭೇಟಿ ನೀಡಿ ಸ್ಟಿಕರ್ ಅಂಟಿಸಿದ ಬಳಿಕ ಶಿಕ್ಷಕರು ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳಲಿದ್ದಾರೆ. ಸಮೀಕ್ಷೆಯ ವೇಳೆ ಅವರಿಗೆ ಸೂಕ್ತ ಮಾಹಿತಿ ನೀಡಿ ಸಮೀಕ್ಷೆಯನ್ನು ಯಶಸ್ವಿಗೊಳಿಸಬೇಕು ಎಂದು ಸಚಿವರು ಸಾರ್ವಜನಿಕರಲ್ಲಿ ಮನವಿ ಮಾಡಿದರು. ಈ ವೇಳೆ ಹೆಸ್ಕಾಂ ನ ಅಸಿಸ್ಟಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಅಶ್ವಿನ್ ಶಿಂಧೆ, ಶೀತಲ್ ಸನದಿ, ಶಂಕರ ಕದಂ, ಸೆಕ್ಷನ್ ಆಫೀಸರ್ ಹಂದಿಗುಂದ್, ಕಾಮತ್, ಛಾಯಾ, ಸಂದೀಪ್, ಮಾರುತಿ ಮುಂತಾದವರು ಉಪಸ್ಥಿತರಿದ್ದರು.




**ಮುಗಳಖೋಡ ದಕ್ಷಿಣಭಾಗ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ. ನಿ.ಮುಗಳಖೋಡ.**

**27 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ನೋಟಿಸು**

ಸಂಘದ ಸನ್ 2024-25 ನೇ ಸಾಲಿನ ವಾರ್ಷಿಕ ಸರ್ವಸಾಧಾರಣ ಸಭೆಯನ್ನು ಶನಿವಾರ ದಿನಾಂಕ 13-9-2025 ರಂದು ಸಂಜೆ 4 ಗಂಟೆಗೆ ಸಂಘದ ಕಚೇರಿಯ ಆವರಣದಲ್ಲಿ ಸಂಘದ ಅಧ್ಯಕ್ಷರಾದ ಶ್ರೀ ಸಂಜಯ ಚ. ಕುಲಿಗೋಡ ಇವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಆಯೋಜಿಸಲಾಗಿದೆ. ಸಂಘದ ಎಲ್ಲಾ ಸದಸ್ಯರಿಗೆ ಈಗಾಗಲೇ ಸಭೆಯ ನೋಟಿಸುಗಳನ್ನು ತಲುಪಿಸಲಾಗಿದ್ದು. ಆದರೂ ಕೂಡ ಯಾರಿಗಾದರೂ ನೋಟೀಸ್ ತಲುಪದೇ ಇದ್ದಲ್ಲಿ ಇದನ್ನು ನೋಟಿಸ್ ಎಂದು ಪರಿಗಣಿಸಿ ಸರ್ವ ಸದಸ್ಯರು ನಿಗದಿತ ಸಮಯಕ್ಕೆ ಸಭೆಗೆ ಹಾಜರಾಗಲು ಸರ್ವ ಸದಸ್ಯರಲ್ಲಿ ವಿನಂತಿಸಿಕೊಳ್ಳುತ್ತೇನೆ.

**ಆಡಳಿತ ಮಂಡಳಿಯ ಪರವಾಗಿ**

ಸ್ಥಳ: ಮುಗಳಖೋಡ
ದಿನಾಂಕ: 09-09-2025

| ಸಹಿ | ಸಹಿ |
|---|---|
| ಶ್ರೀ ಅಮಿತಕುಮಾರ ಬ. ಬದ್ನಿಕಾಯಿ | ಶ್ರೀ ಸಂಜಯ ಚ. ಕುಲಿಗೋಡ |
| ಮುಖ್ಯ ಕಾರ್ಯನಿರ್ವಾಹಕರು. | ಅಧ್ಯಕ್ಷರು. |

# ಛಾಯಾಚಿತ್ರಗಳು ಜೀವನದ ಪ್ರತಿಬಿಂಬ: ಜಿಲ್ಲಾಧಿಕಾರಿ ದಿವ್ಯ ಪ್ರಭು



**ಧಾರವಾಡ:** ಛಾಯಾಚಿತ್ರಗಳು ಕೇವಲ ಚಿತ್ರಗಳಲ್ಲ, ಅವು ಜೀವನದ ನಿಜವಾದ ಕ್ಷಣಗಳನ್ನು, ಭಾವನೆಗಳನ್ನು ಮತ್ತು ಸಮಾಜದ ಹೃದಯಸ್ಪಂದನವನ್ನು ಸೆರೆ ಹಿಡಿಯುವ ಸಾಧನಗಳಾಗಿವೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಮಂಗಳವಾರ ಸೆ.15 ರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಛಾಯಾಗ್ರಾಹಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಪ್ರಜಾಪ್ರಭುತ್ವ ಕುರಿತ ಛಾಯಾಚಿತ್ರ ಸ್ಪರ್ಧೆ ಮತ್ತು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಪ್ರಜಾಪ್ರಭುತ್ವದ ಆಶಯಗಳನ್ನು ಎತ್ತಿಹಿಡಿಯುವಲ್ಲಿ ಛಾಯಾಚಿತ್ರಗಳು ಪ್ರಮುಖ ಪಾತ್ರವಹಿಸುತ್ತವೆ. ದೃಶ್ಯ ಮಾಧ್ಯಮದ ಮೂಲಕ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಜನರಿಗೆ ತಲುಪಿಸಲು ಇಂತಹ ಸ್ಪರ್ಧೆಗಳು ಸಹಕಾರಿಯಾಗಿವೆ ಎಂದು ತಿಳಿಸಿದರು.

ಸ್ಪರ್ಧೆಯು ಸ್ಥಳೀಯ ಛಾಯಾಗ್ರಾಹಕರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗಿದೆ ಎಂದು ಅವರು ಹೇಳಿದರು. ಹಿಂದಿನ ದಿನಗಳಲ್ಲಿ ಛಾಯಾಚಿತ್ರಗಳ ಪ್ರದರ್ಶನದ ಸ್ಪರ್ಧೆಯನ್ನು ಸಾಮಾನ್ಯವಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳ ಮಟ್ಟಕ್ಕೆ ಮಾತ್ರ ಸೀಮಿತವಾಗಿತ್ತು. ಆದರೆ ಈ ಬಾರಿ ಸಾರ್ವಜನಿಕರಿಂದಲೂ ಅತೀ ಉತ್ತಮ ಸ್ಪಂದನೆ ದೊರೆತಿದೆ. ಛಾಯಾಚಿತ್ರಗಳನ್ನು ತೆಗೆಯುವ ಮೂಲಕ ತಮ್ಮ ಅನುಭವ ಮತ್ತು ಸೃಜನಶೀಲತೆಯನ್ನು ಅವರು ಹಂಚಿಕೊಂಡಿದ್ದು ನೋಡಿದರೆ ಈ ಪ್ರದರ್ಶನ ಒಂದು ಸಮಾಜದ ಸಂವೇದನೆಗಳ ನಿಜವಾದ ಪ್ರತಿಬಿಂಬವಾಗಿದೆ ಎಂದು ಹೇಳಿದರು.

ಮೊದಲಿನ ದಿನಗಳಲ್ಲಿ ಛಾಯಾಚಿತ್ರ ತೆಗೆದುಕೊಳ್ಳುವುದು ಸುಲಭವಾಗಿರಲಿಲ್ಲ. ಆ ಸಮಯದಲ್ಲಿ ಕ್ಯಾಮೆರಾ ಸಾಧನಗಳು ಅಪರೂಪವಾಗಿದ್ದವು. ವಿಶೇಷ ಸಂದರ್ಭಗಳಲ್ಲಿ ಮಾತ್ರ ಛಾಯಾಚಿತ್ರೀಕರನ್ನು ಕರೆಸಿಕೊಳ್ಳಲಾಗುತ್ತಿತ್ತು. ಅವರು ತೆಗೆದ ಚಿತ್ರಗಳು ನಮ್ಮ ಜೀವನದ ನೆನಪುಗಳಾಗುತ್ತಿದ್ದವು. ಆದರೆ ಕಾಲ ಬದಲಾದಂತೆ ತಂತ್ರಜ್ಞಾನ ಬೆಳೆದಿತ್ತು. ಡಿಜಿಟಲ್ ಕ್ಯಾಮೆರಾಗಳು ಮತ್ತು ಸ್ಮಾರ್ಟ್‌ಫೋನ್‌ಗಳ ಪ್ರಚಾರ ಹೆಚ್ಚಾದ ಕಾರಣ ಇಂದು ಪ್ರತಿಯೊಬ್ಬರೂ ಛಾಯಾಗ್ರಾಹಕರಾಗಿದ್ದಾರೆ.

ಇಂದಿನ ಛಾಯಾಗ್ರಹಣವು ತಂತ್ರಜ್ಞಾನದ ಅಬ್ಬರದಿಂದ ಸಂಪೂರ್ಣವಾಗಿ ಬದಲಾಗಿದೆ. ಡಿಜಿಟಲ್ ಕ್ಯಾಮರಾಗಳು, ಸ್ಮಾರ್ಟ್‌ಫೋನ್‌ಗಳು, ಡ್ರೋನ್‌ಗಳು ಛಾಯಾಗ್ರಹಣವನ್ನು ಪ್ರತಿಯೊಬ್ಬರಿಗೂ ಸುಲಭವಾಗಿ ತಲುಪಿಸಿವೆ. ಈಗ ಒಂದು ಸೆಕೆಂಡಿಗೆ ನೂರಾರು ಚಿತ್ರಗಳನ್ನು ತೆಗೆಯಬಹುದು, ಅವುಗಳನ್ನು ತಕ್ಷಣವೇ ಪರಿಶೀಲಿಸಬಹುದು, ಸಂಪಾದಿಸಬಹುದು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಬಹುದು. ಛಾಯಾಗ್ರಹಣವು ಕೇವಲ ನೆನಪುಗಳನ್ನು ಸೆರೆಹಿಡಿಯುವ ಸಾಧನವಾಗಿ ಉಳಿದಿಲ್ಲ, ಅದೊಂದು ಸಂವಹನ ಮಾಧ್ಯಮವಾಗಿದೆ ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ ಅವರು ಮಾತನಾಡಿ, ಫೋಟೋಗ್ರಾಫಿ ಕೇವಲ ದೃಶ್ಯವಲ್ಲ, ಅದೊಂದು ಅನುಭವ, ನಿಮ್ಮ ಕ್ಯಾಮೆರಾ ಕೇವಲ ಒಂದು ಉಪಕರಣವಲ್ಲ, ಅದು ನಿಮ್ಮ ಕಣ್ಣುಗಳು ಮತ್ತು ಆತ್ಮದ ವಿಸ್ತರಣೆ. ನೀವು ಏನು ನೋಡುತ್ತೀರಿ ಎಂಬುದಕ್ಕಿಂತ ಹೆಚ್ಚಾಗಿ, ನೀವು ಏನು ಅನುಭವಿಸುತ್ತೀರಿ ಎಂಬುದನ್ನು ಸೆರೆಹಿಡಿಯಲು ಪ್ರಯತ್ನಿಸುತ್ತಿರಿ ಎಂದು ಛಾಯಾಗ್ರಾಹಕರ ಬಗ್ಗೆ ಹೇಳಿದರು.

ಇಂದಿನ ಡಿಜಿಟಲ್ ಯುಗದಲ್ಲಿ, ಯಾರಾದರೂ ಸುಲಭವಾಗಿ ಫೋಟೋ ತೆಗೆಯಬಹುದು. ಆದರೆ, ನಿಜವಾದ ಕಲಾಕೃತಿ ಹೊರಹೊಮ್ಮುವುದು ಭಾವನೆಗಳು ಮತ್ತು ಆಲೋಚನೆಗಳ ಸಂಯೋಜನೆಯಿಂದ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಧಾರವಾಡ ಫೋಟೋ ಮತ್ತು ವಿಡಿಯೋ ಗ್ರಾಫರ್ಸ್ ಸಂಘದ ಅಧ್ಯಕ್ಷ ಧತ್ತ ಪ್ರಸಾದ ವೆಂಕಟೇಶ, ಧಾರವಾಡ ಗ್ರಾಮೀಣ ಛಾಯಾಗ್ರಾಹಕ ಸಂಘದ ಅಧ್ಯಕ್ಷ ಪ್ರಭಯ್ಯ ಲಕ್ಕುಂಡಿಮಠ ಮತ್ತು ಹುಬ್ಬಳ್ಳಿ ತಾಲೂಕಿನ ಛಾಯಾಚಿತ್ರದ ಉಪಾಧ್ಯಕ್ಷ ದಿನೇಶ ದಾಬಡೆ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ಶೈಕ್ಷಣಿಕ ಸಮೀಕ್ಷಾ ಪೂರ್ವ ಜಾಗೃತಿ ಅಭಿಯಾನ



**ಗೋಕಾಕ:** ಕೇಂದ್ರ ಸರಕಾರದ ನಿರ್ದೇಶನದ ಮೇರೆಗೆ ಗಣತಿ ಕಾರ್ಯವನ್ನು ಸೆಪ್ಟೆಂಬರ 22ರಿಂದ ಅಕ್ಟೋಬರ್ 7ರವರೆಗೆ ನಡೆಸಲಾಗುತ್ತಿದ್ದು ಜನತೆ ಸಹಕರಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಜಿ ಬಿ ಬಳಗಾರ ಹೇಳಿದರು.

ನಗರದ ಲಕ್ಷ್ಮಣರಾವ ಜಾರಕಿಹೊಳಿ ಪದವಿ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕದ ಅಡಿಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಪೂರ್ವ ಜಾಗೃತಿ ಅಭಿಯಾನದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು. ವಿವಿಧ ಉದ್ದೇಶಗಳಿಂದ ಈ ಗಣತಿಯನ್ನು ನಡೆಸಲಾಗುತ್ತಿದೆ. ಗಣತಿಗಾರರು ಮನೆಗಳಿಗೆ ಭೇಟಿ ನೀಡಿದಾಗ ಸಂಪೂರ್ಣ ಮಾಹಿತಿಯನ್ನು ನೀಡಬೇಕು. ವಿದ್ಯಾರ್ಥಿಗಳು ತಾವು ಇದರಲ್ಲಿ ಪಾಲ್ಗೊಂಡು ಪಾಲಕರಿಗೆ ಹಾಗೂ ಜನತೆಗೆ ಅರಿವು ಮೂಢಿಸುವಂತೆ ಕೋರಿದರು.

ವೇದಿಕೆಯ ಮೇಲೆ ತಹಶೀಲದಾರ ಡಾ.ಮೋಹನ ಭಸ್ಮೆ, ಹಿಂದುಳಿದ ವರ್ಗಗಳ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿ ಪಿ ಆರ್ ಬೇವಿನಗಿಡದ, ಹೆಸ್ಕಾಂ ಎಇಇ ಎಸ್ ಪಿ ವರಾಳೆ, ಪ್ರಾಚಾರ್ಯ ಡಾ.ಐ ಎಸ್ ಪವಾರ ಇದ್ದರು.

## ಹಿಂದೂ ವಿರೋಧಿ ನೀತಿ ಖಂಡನೀಯ

**ಬಾಗಲಕೋಟೆ:** ಮದ್ದೂರು ಘಟನೆ ಸೇರಿದಂತೆ ರಾಜ್ಯದಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ದುರ್ಘಟನೆಗಳನ್ನು ಗಮನಿಸಿದರೆ ಇದು ಹಿಂದೂಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ, ಇದು ಖಂಡನೀಯ ಎಂದು ಹಿಂದಿನ ಶಾಸಕ ಡಾ.ವೀರಣ್ಣ ಚರಂತಿಮಠ ಅವರು ತಿಳಿಸಿದ್ದಾರೆ.



ರಾಜ್ಯದಲ್ಲಿ ಹಿಂದೂಗಳ ಧಾರ್ಮಿಕ ಶ್ರದ್ಧಾ ಕೇಂದ್ರಗಳ ವಿರುದ್ಧದ ಅಪಪ್ರಚಾರದ ಷಡ್ಯಂತ್ರಗಳು, ಮದ್ದೂರು ಹಾಗೂ ರಾಜ್ಯದಲ್ಲಿ ಗಣೇಶ ವಿಸರ್ಜನೆ ವೇಳೆ ನಡೆಯುತ್ತಿರುವ ಘಟನೆಗಳನ್ನು ಗಮನಿಸಿದರೆ, ರಾಜ್ಯ ಸರಕಾರದ ಭದ್ರತಾ ವೈಪಲ್ಯ ಎದ್ದು ಕಾಣುತ್ತಿದೆ, ಕಾಂಗ್ರೆಸ್ಸ ಸರ್ಕಾರದ ಹಿಂದೂ ವಿರೋಧಿ, ತುಷ್ಟೀಕರಣನೀತಿಯಿಂದ ಹಿಂದೂಗಳ ಮೇಲೆ ದಬ್ಬಾಳಿಕೆ ನಡೆಯುತ್ತಿರುವುದು ಖಂಡನೀಯ. ಪೊಲೀಸ ಇಲಾಖೆಯನ್ನು ಸರ್ಕಾರ ನಿಶ್ಯಕ್ತಗೊಳಿಸಿದ್ದು, ರಾಜ್ಯದಲ್ಲಿ ಕಾನೂನು ಸವ್ಯವಸ್ಥೆ ಕುಸಿದಿದ್ದು ರಾಜ್ಯ ಸರ್ಕಾರದ ಪಾಪದ ಕೊಡ ತುಂಬಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಪೂರ್ಣಚಂದ್ರ ತೇಜಸ್ವಿಯವರ ಜನ್ಮದಿನಾಚರಣೆ



**ರಾಯಬಾಗ:** ಚಿದಂಬರ ರಹಸ್ಯ, ಜುಗಾರಿ ಕ್ರಾಸ್, ಮಾಯಾಲೋಕ, ಕಾಡು ಮತ್ತು ಕ್ರೌರ್ಯ, ಕರ್ವಾಲು ಸೇರಿದಂತೆ ಹಲವಾರು ಕಾದಂಬರಿಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಕಟ್ಟಿಕೊಟ್ಟ ಕನ್ನಡ ಸಾಹಿತ್ಯದ ಪೂರ್ಣಚಂದ್ರ ತೇಜಸ್ವಿಯವರ ಬದುಕು ಮತ್ತು ಬರಹ ಯುವ ಪೀಳಿಗೆಗೆ ದಾರಿ ದೀಪವಾಗಬೇಕು ಎಂದು ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ತ ತಾಲೂಕು ಘಟಕದ ಅಧ್ಯಕ್ಷ, ಸಾಹಿತಿ ಟಿ.ಎಸ್. ಒಂಟಗೂಡಿ ಹೇಳಿದರು.

ಸೋಮವಾರ ತಾಲೂಕಿನ ಹಿಡಕಲ್ ಗ್ರಾಮದಲ್ಲಿ ಪೂರ್ಣಚಂದ್ರ ತೇಜಸ್ವಿಯವರ ಜನ್ಮ ದಿನಾಚರಣೆ ಪ್ರಯುಕ್ತ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ರಾಮು ಒಂಟಗೂಡಿ, ಅಮಿತ ಪೂಜಾರಿ, ಹಾಲಸಿದ್ಧ ಒಂಟಗೂಡಿ, ಕರಿಸಿದ್ದ ಒಂಟಗೂಡಿ ಸೇರಿ ಅನೇಕರು ಇದ್ದರು.

### ತಂಗಡಗಿಯ ಹಡಪದ ಅಪ್ಪಣ್ಣ ಮಹಾಸಂಸ್ಥಾನ ಪೀಠದಲ್ಲಿ ರಾಜ್ಯ ಪದಾಧಿಕಾರಿಗಳ ಸಭೆ

# ಕರ್ನಾಟಕದಾದ್ಯಂತ ನಾವೆಲ್ಲರೂ ಒಂದೇ



**ಮುದ್ದೇಬಿಹಾಳ:** ರಾಜ್ಯ ಸರ್ಕಾರದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಹಾಗೂ ಕೇಂದ್ರ ಸರ್ಕಾರದ ಜನಗಣತಿ ವೇಳೆ ರಾಜ್ಯಾದ್ಯಂತ ಇರುವ ಸಮಾಜ ಬಾಂಧವರೆಲ್ಲರೂ ಧರ್ಮದ ಕಾಲಂನಲ್ಲಿ ಹಿಂದು, ಜಾತಿಯ ಕಾಲಂನಲ್ಲಿ ಹಡಪದ ಎಂದೇ ಬರೆಸುವ ಮೂಲಕ ಕರ್ನಾಟಕದಾದ್ಯಂತ ನಾವೆಲ್ಲರೂ ಒಂದೇ ಸಮಾಜ ಎನ್ನುವುದನ್ನು ತೋರಿಸಿಕೊಡಬೇಕು ಎಂದು ಸಮಾಜದ ಗುರುಗಳಾಗಿ ನಾವು ಕರೆ ನೀಡುತ್ತಿದ್ದೇವೆ ಎಂದು ತಂಗಡಗಿಯ ಹಡಪದ ಅಪ್ಪಣ್ಣ ಮಹಾಸಂಸ್ಥಾನದ ಪೀಠಾಧ್ಯಕ್ಷ ಅನ್ನದಾನಭಾರತಿ ಅಪ್ಪಣ್ಣ ಶ್ರೀ ತಿಳಿಸಿದರು.

ಕೃಷ್ಣಾ ನದಿ ತೀರದಲ್ಲಿರುವ ತಂಗಡಗಿಯ ಹಡಪದ ಅಪ್ಪಣ್ಣ ಮಹಾಸಂಸ್ಥಾನ ಪೀಠದಲ್ಲಿ ಮಂಗಳವಾರ ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಪದಾಧಿಕಾರಿಗಳ ಸಭೆಯ ನಂತರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ಹಡಪದ ಎನ್ನುವ ಒಂದೇ ಹೆಸರಿನಲ್ಲಿ ಸಮಾಜದವರೆಲ್ಲರೂ ಒಗ್ಗಟ್ಟು ತೋರಿಸಬೇಕಿದೆ. ಇದರಲ್ಲಿ ಮಕ್ಕಳ ಭವಿಷ್ಯವೂ ಅಡಗಿದೆ. ನಮ್ಮ ಸಮಾಜಕ್ಕೆ 2ಎ ಮೀಸಲಾತಿ ಸಿಗಬೇಕು ಎನ್ನುವ ದೃಷ್ಟಿಯಿಂದಲೂ ಇದು ಅಗತ್ಯವಾಗಿದೆ. ಲಿಂಗಾಯತರು ಎಂದು 70 ಸಾವಿರ, ಹಡಪದ ಎಂದು 80 ಸಾವಿರದಿಂದ ಲಕ್ಷದವರೆಗೆ ಜನಸಂಖ್ಯೆ ಇದೆ ಎನ್ನುವುದು ತಿಳಿದು ಬಂದಿದೆ. ಉಳಿದವರು ಎಲ್ಲಿ ಹೋದರು ಎನ್ನುವ ಗೊಂದಲ ಮೂಡಿದೆ. ಇದನ್ನು ನಿವಾರಿಸಲು ಹಡಪದ ಎನ್ನುವ ಒಂದೇ ಹೆಸರಿನಿಂದ ಗುರ್ತಿಸಿಕೊಳ್ಳಲು ಎಲ್ಲರೂ ಮನಸ್ಸು ಮಾಡಬೇಕು. 900 ವರ್ಷಗಳ ಹಿಂದಿನಿಂದಲೂ ಹಡಪದ ಸಮಾಜವು ನಲುಗಿ ಹೋಗಿದೆ. ಈಗ ಎಲ್ಲರೂ ಜಾಗೃತರಾಗುವ ಕಾಲ ಕೂಡಿಬಂದಿದೆ. ರಾಜ್ಯದ ಎಲ್ಲ ಗ್ರಾಮಗಳ ಸಮಾಜದ ಹಿರಿಯರು ಈಗ ಬಂದಿರುವ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಲು ಮುಂದಾಗಬೇಕು ಎಂದರು.

ಸಂಘದ ರಾಜ್ಯಾಧ್ಯಕ್ಷ ಸಿದ್ದಪ್ಪ ಹಡಪದ ಅವರು ಮಾತನಾಡಿ, ರಾಜ್ಯದ ಹಡಪದ (ಕ್ಷೌರಿಕ, ನಾವಿಂದ, ನಾವಿ) ಸಮಾಜದವರೆಲ್ಲರೂ ಜಾತಿ ಕಾಲಂನಲ್ಲಿ ಹಡಪದ ಎಂದೇ ಬರೆಸಬೇಕು ಎನ್ನುವ ನಿರ್ಣಯವನ್ನು ಇಂದಿನ ರಾಜ್ಯಮಟ್ಟದ ಸಭೆಯಲ್ಲಿ ಸ್ವಾಮೀಜಿಗಳ ಸಮ್ಮುಖ ಕೈಕೊಳ್ಳಲಾಗಿದೆ. ನಮ್ಮ ಮೇಲೆ ನಡೆಯುವ ದಬ್ಬಾಳಿಕೆಗೆ ಬಲಿಯಾಗದೆ ಹಡಪದ ಜಾತಿ ಎಂದೇ ಬರೆಸಬೇಕು. 17 ಉಪನಾಮಗಳು ನಮ್ಮ ಸಮಾಜಕ್ಕೆ ಸೇರಿದ್ದು ಉಳಿದಿರುವ ಇನ್ನೆರಡನ್ನು ಸೇರಿಸುವಂತೆ ಕೋರಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗದ ಆಯೋಗ ಅಧ್ಯಕ್ಷರಿಗೆ ಮನವಿ ಸಲ್ಲಿಸಿದ್ದೇವೆ. ಇವೆರಡು ಸೇರಿದರೆ ಬರುವ ಎಲ್ಲ 19 ಉಪನಾಮದವರು ಧರ್ಮದಲ್ಲಿ ಹಿಂದು, ಜಾತಿಯಲ್ಲಿ ಹಡಪದ ಎಂದೇ ಬರೆಸಬೇಕು ಎಂದರು.

ನಾವು ಮೂಲ ಕನ್ನಡಿಗರು. 1946ರಲ್ಲಿ ಉದ್ಯೋಗ ಅರಸಿ ಆಂಧ್ರದಿಂದ ಕರ್ನಾಟಕಕ್ಕೆ ವಲಸೆ ಬಂದ ಸವಿತಾ ಸಮಾಜದವರು ಕ್ಷೌರಿಕ ವೃತ್ತಿ, ನಾಗಸ್ವರ ಎರಡನ್ನೂ ಬಳಸಿ ಸರ್ಕಾರದ ಮಟ್ಟದಲ್ಲಿ ಬೆಳೆದು ಎಲ್ಲ ಸೌಲಭ್ಯ ಪಡೆಯುತ್ತಿದ್ದಾರೆ. ಹಡಪದ ಸಮಾಜದವರು ಹಳ್ಳಿಗಳಲ್ಲಿರುವುದರಿಂದ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಗೆಜೆಟ್‌ನ 8ಎ ಕಾಲಂನಲ್ಲಿ 28 ಒಳಪಂಗಡ ಬಂದರೆ ಅದರಲ್ಲಿ ಕೇವಲ 19 ಒಳಪಂಗಡ ಮಾತ್ರ ಹಡಪದ ಜಾತಿಗೆ ಸಂಬಂಧಿಸಿವೆ. ಕ್ಷೌರಿಕ ವೃತ್ತಿ ಮಾಡುವವರೆಲ್ಲರೂ ಹಡಪದ ಸಮಾಜದವರಲ್ಲ. ಮುಸ್ಲೀಂ, ಮರಾಠಾ ಸಮಾಜದವರೂ ನಮ್ಮ ವೃತ್ತಿಯಲ್ಲಿದ್ದಾರೆ. ಅವರೆಲ್ಲರನ್ನೂ ಹಡಪದ ಜಾತಿ ಎನ್ನಲಿಕ್ಕಾಗುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಎಫ್.ನಾವಿ, ಧಾರವಾಡ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಫಕೀರೇಶ ಹಡಪದ, ಎಂ.ಎಸ್.ನಾವಿ, ಈರಣ್ಣ ಸಣ್ಣೂರ, ಮಲ್ಲಣ್ಣ ಹಡಪದ, ಹಣಮಂತ ಗುಡದಿನ್ನಿ, ಮುತ್ತಣ್ಣ ಹಡಪದ, ಶಂಕರ ಹಡಪದ, ಸಂತೋಷ್ ಹಡಪದ, ಅಶೋಕ್ ನಾವಿ ಸೇರಿದಂತೆ ಉಪಸ್ಥಿತರಿದ್ದರು.



## ಅಕ್ಕಮಹಾದೇವಿ ಸೊಸೈಟಿಯ ವಾರ್ಷಿಕ ಸಭೆ

**ಯರಗಟ್ಟಿ:** ಅಕ್ಕಮಹಾದೇವಿ ಮಹಿಳಾ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸಾಯಿಟಿಯ 4ನೇ ವರ್ಷದ ವಾರ್ಷಿಕ ಸಭೆ ಸ್ಥಳೀಯ ಮಹಾಂತ ದುರದುಂಡೇಶ್ವರ ಶ್ರೀಮಠದಲ್ಲಿ ನಡೆಯಿತು.

ವರದಿ ಸಾಲಿನಲ್ಲಿ ಸಂಘವು 320456.24 ರೂ. ನಿವ್ವಳ ಲಾಭ ಗಳಿಸಿದ್ದು, ಶೇ. 5 ಡಿವಿಡೆಂಡ್ ನೀಡಲಾಯಿತು. ಕಾಯ್ದಿಟ್ಟ ನಿಧಿ 25%, ಸಹಕಾರ ಶಿಕ್ಷಣ ನಿಧಿ 2%, ಧರ್ಮಾರ್ಥಕ ನಿಧಿ 2% ಮುಳುಗವ ಸಾಲ ನಿಧಿ 5% ಜುಬಲಿ ನಿಧಿ 3%, ಸದಸ್ಯರ ಕಲ್ಯಾಣ ನಿಧಿ 5% ಇಡಲಾಗಿದೆ ಸಂಘದ ಒಟ್ಟು ದುಡಿಯುವ ಬಂಡವಾಳ 48635320–50ರೂ. ಇರುತ್ತದೆ ಎಂದು ಸಂಘದ ಅಧ್ಯಕ್ಷ ಶೀಲ್ಪಾ ಹಾದಿಮನಿ ಅಧ್ಯಕ್ಷತೆ ವಹಿಸಿ ಹೇಳಿದರು.

ಈ ವೇಳೆ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳಿ ನಿರ್ದೇಶಕರಾದ ಉಮೇಶ ಬಾಳಿ, ಡಾ. ಸಂಜಯ ಹೊಮಠ, ತಮ್ಮಣ್ಣಾ ಕೆಂಚರಡ್ಡಿ, ಸಂಘದ ಉಪಾಧ್ಯಕ್ಷ ಸುರೇಖಾ ಅಂಗಡಿ, ನಿರ್ದೇಶಕರಾದ ಅನ್ನಪೂರ್ಣಾ ಜಕಾರಿ, ಸವಿತಾ ಬಾಳಿ, ನಿರ್ಮಲಾ ಮದ್ದಾನಿ, ನೀತಾ ಪಾಟೀಲ, ನೀಲಾ ಬೆಣ್ಣಿ, ನಿರ್ಮಲಾ ನಿಜಗುಲಿ, ಶೈಲಜಾ ಪಟ್ಟಣಶೆಟ್ಟಿ, ವೇದಾ ಕಮ್ಮಾರ, ನೇತ್ರಾವತಿ ಕಾಮಣ್ಣವರ, ಸುನೀತಾ ಸತ್ತಿಗೇರಿ, ರೇಖಾ ತಳವಾರ, ಮುಖ್ಯ ಕಾರ್ಯನಿರ್ವಾಹಕಿ ಸೌಮ್ಯಾ ಸಂಗಪ್ಪನ್ನವರ, ಗಂಗಾ ಶಿವಾಪೂರ, ಶಿವಕುಮಾರ ಅಂಗಡಿ, ಶ್ರೀದೇವಿ ಬಾಗಿಹಳ್ಳಿ, ಯಲ್ಲನಾಯ್ಕ ಸತ್ಯನಾಯ್ಕರ, ಸ್ಪೂರ್ತಿ ಗುಂಡ್ಲೂರ, ಮೋಹನ ಹಾದಿಮನಿ, ತಮ್ಮಣ್ಣಾ ಕಾಮಣ್ಣವರ, ಶಿವಾನಂದ ಮದ್ದಾನಿ, ದೇವೇಂದ್ರ ಕಮ್ಮಾರ ಸೇರಿದಂತೆ ಇತ್ತರರು ಇದ್ದರು.

## ಡಾ.ಗವಿಮಠಗೆ ಉಪನ್ಯಾಸಕ ಪ್ರಶಸ್ತಿ



**ಜಮಖಂಡಿ:** ಬೆಂಗಳೂರಿನಲ್ಲಿ ನಡೆದ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಬಾಗಲಕೋಟೆ ಜಿಲ್ಲೆಯ ಜಮಖಂಡಿಯ ಬಾಲಕರ ಸರಕಾರಿ ಪಿ.ಬಿ. ಪದವಿಪೂರ್ವ ಕಾಲೇಜಿನ ಜೀವಶಾಸ್ತ್ರ ಉಪನ್ಯಾಸಕ ಡಾ. ಲಿಂಗಾನಂದ ಕೆ. ಗವಿಮಠ. ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯಮಟ್ಟದ ಉತ್ತಮ ಉಪನ್ಯಾಸಕ ಪ್ರಶಸ್ತಿ ನೀಡಿ ಗೌರವಿಸಿದರು.

ವೇದಿಕೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ. ಉನ್ನತ ಶಿಕ್ಷಣಸಚಿವ ಡಾ.ಎಂ.ಸಿ. ಸುಧಾಕರ ಸಹಿತ ಹಲವರು ಇದ್ದರು. ಶಾಲಾ ಅಭಿವೃದ್ಧಿ ಸಮಿತಿ ಗೌರವಾಧ್ಯಕ್ಷ, ಶಾಸಕ ನಾಡೋಜ, ಜಗದೀಶ ಗುಡಗುಂಟಿ, ಪದವಿಪೂರ್ವ ಕಾಲೇಜು ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಂಡಲಿಕ ಕಾಂಬಳೆ, ಕಾಲೇಜಿನ ಪ್ರಾಚಾರ್ಯ ಸುರೇಶ. ಬಿರಾದಾರ ಸಹಿತ ಎಲ್ಲ ಉಪನ್ಯಾಸಕರು ತಾಲೂಕ ಪತ್ರಕರ್ತರ ಸಾಂಸ್ಕೃತಿಕ ಬಳಗ ಪದಾಧಿಕಾರಿಗಳು, ವಿವಿಧ ಸಂಘ–ಸಂಸ್ಥೆಗಳು ಸದಸ್ಯರು ಅಭಿನಂದಿಸಿದ್ದಾರೆ.



## ತಾಲೂಕು ಕ್ರೀಡಾಕೂಟದಲ್ಲಿ ಜೆವಿ ಮಂಡಳ ಸಾಧನೆ

**ತೇರದಾಳ:** ರಬಕವಿ–ಬನಹಟ್ಟಿ ತಾಲೂಕು ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ಸ್ಥಳೀಯ ಜೆವಿ ಮಂಡಳ ಸ್ವತಂತ್ರ ಪಪೂ ಕಾಲೇಜಿನ ಕ್ರೀಡಾಪಟುಗಳು ಹಲವು ವಿಭಾಗಗಳಲ್ಲಿ ಸಾಧನೆ ಮಾಡುವ ಮೂಲಕ ಜಿಲ್ಲಾಮಟ್ಟಕ್ಕೆ ಆಯ್ಕೆಗೊಂಡಿದ್ದಾರೆ.

ಬಾಲಕರ ವಿಭಾಗದಲ್ಲಿ ಕಬಡ್ಡಿ, ನೆಟ್‌ಬಾಲ್, ಟೆನಿಕ್ವಾಯಿಟ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾಮಟ್ಟಕ್ಕೆ ಆಯ್ಕೆಗೊಂಡಿದ್ದಾರೆ. ಅದರಂತೆ ಬಾಲಕಿಯರ ವಿಭಾಗದಲ್ಲಿ ವಾಲಿಬಾಲ್ ಹಾಗೂ ನೆಟ್‌ಬಾಲ್ ವಿಭಾಗದಲ್ಲಿ ಪ್ರಥಮ ಸ್ಥಾನ ಗಳಿಸಿ ಜಿಲ್ಲಾಮಟ್ಟಕ್ಕೆ ಆಯ್ಕೆಗೊಂಡಿದ್ದಾರೆ. ಸಂಸ್ಥೆ ಕಾರ್ಯದರ್ಶಿ ಡಾ. ಜೆ.ಬಿ. ಆಲಗೂರ ಸಾಧನೆಗೈದ ಕ್ರೀಡಾಪಟುಗಳನ್ನು ಸತ್ಕರಿಸಿ ಮಾತನಾಡಿ, ಪ್ರತಿ ವರ್ಷ ಕ್ರೀಡಾಪಟುಗಳು ಸಾಧನೆ ಮಾಡುವ ಮೂಲಕ ತಮ್ಮ ಸಂಸ್ಥೆ ಹಿರಿಮೆ ಹೆಚ್ಚಿಸುವ ಕೆಲಸ ಮಾಡುತ್ತಿರುವುದು ತುಂಬಾ ಸಂತಸದ ವಿಷಯ. ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳನ್ನು ಮುಂದೆ ತರುತ್ತಿರುವ ಶಿಕ್ಷಕರ ಪಾತ್ರ ಕೂಡ ಮಹತ್ವದ್ದಾಗಿದೆ ಎಂದು ಬಣ್ಣಿಸಿದರು. ಸಂಸ್ಥೆ ಕಾರ್ಯಾಧ್ಯಕ್ಷ ಡಿ.ಆರ್. ಪಾಟೀಲ, ಪ್ರಾಚಾರ್ಯ ಸಂತೋಷ ಕುಳ್ಳಿ, ಎಸ್.ಪಿ. ದೊಡವಾಡ ಇದ್ದರು.

## ಲಿಂಗಾಯತ ಬರೆಯಲು ಆಗ್ರಹಿಸಿ ಮನವಿ

**ಜಮಖಂಡಿ:** ರಾಜ್ಯ ಸರ್ಕಾರ ಕೈಗೊಳ್ಳಲಿರುವ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಧಾರ್ಮಿಕ ಕಾಲಂನಲ್ಲಿ 'ಲಿಂಗಾಯತ' ಎಂದು ಬರೆಯಲು ಅವಕಾಶ ಮಾಡಿಕೊಡಲು ಒತ್ತಾಯಿಸಿ ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗಕ್ಕೆ ಮನವಿ ಸಲ್ಲಿಸಲಾಯಿತು.

ಬಸವ ಕೇಂದ್ರ, ಬಸವ ಸಮಿತಿ, ವಚನ ಸಾಹಿತ್ಯ ಪರಿಷತ್ತು, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಲಿಂಗಾಯತ ಮಹಾಸಭಾ ವತಿಯಿಂದ ಇಲ್ಲಿನ ಉಪವಿಭಾಗಾಧಿಕಾರಿಗಳ ಕಚೇರಿಯ ಗ್ರೇಡ್–2 ತಹಶೀಲ್ದಾರ್ ಎನ್.ಜಿ. ಬಿರಡಿ ಅವರ ಮೂಲಕ ಮಂಗಳವಾರ ಸಲ್ಲಿಸಲಾದ ಮನವಿಯಲ್ಲಿ ಈ ಒತ್ತಾಯ ಮಾಡಲಾಗಿದೆ.

ಒಂದು ವೇಳೆ ಧರ್ಮದ ಕಾಲಂನಲ್ಲಿ ಲಿಂಗಾಯತ ಬರೆಯಲು ಅವಕಾಶ ಇರದಿದ್ದರೆ ಧರ್ಮದ ಕಾಲಂನಲ್ಲಿ 'ಯಾವುದು ಇಲ್ಲ' ಎಂದು ನಮೂದಿಸಿ ಜಾತಿ ಕಾಲಂನಲ್ಲಿ 'ಲಿಂಗಾಯತ' ಅಥವಾ 'ಲಿಂಗಾಯತದ ಜೊತೆಗೆ ಉಪಜಾತಿ'ಯನ್ನು ನಮೂದಿಸಲಾದರೂ ಅವಕಾಶ ಕೊಡಬೇಕು. ಯಾವುದೇ ಕಾರಣಕ್ಕೂ 'ಹಿಂದೂ ಅಥವಾ ಇತರೆ' ಎಂದು ಧರ್ಮದ ಕಾಲಂನಲ್ಲಿ ಲಿಂಗಾಯತರನ್ನು ಸೇರಿಸಬಾರದು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗ ಗುರುತಿಸಿರುವ ಲಿಂಗಾಯತರ 78 ಜಾತಿ/ಉಪಜಾತಿಗಳ ಪೈಕಿ 13 ಉಪಜಾತಿಗಳು ಪುನರಾವರ್ತನೆಗೊಂಡಿವೆ. ಆದರೆ, ಆಯೋಗ ಇನ್ನೂ 48 ಉಪಜಾತಿಗಳನ್ನು ಗುರುತಿಸಿಲ್ಲ. ಕೇಂದ್ರ ಸರ್ಕಾರದ 2006ರ ಜಾತಿ ಸಂಹಿತೆ ಪ್ರಕಾರ 32 ಉಪಜಾತಿಗಳು, ಡಾ.ಬಾಬಾಸಾಹೇಬ ಅಂಬೇಡ್ಕರ್ ಸಂಶೋಧನೆ ಮತ್ತು ತರಬೇತಿ ಸಂಸ್ಥೆಯ ಪ್ರಕಾರ 8 ಉಪಜಾತಿಗಳು ಹಾಗೂ ಇತರೆ ಮಾಹಿತಿ ಪ್ರಕಾರ 23 ಉಪಜಾತಿಗಳು ಒಟ್ಟು ಸೇರಿ ಲಿಂಗಾಯತರ 111 ಉಪಜಾತಿಗಳನ್ನು ಗುರುತಿಸಿಲ್ಲ.

ಆಯೋಗ ಗುರುತಿಸಿರುವ 78 ಉಪಜಾತಿಗಳು ಹಾಗೂ ಗುರುತಿಸದೆ ಉಳಿದಿರುವ 111 ಉಪಜಾತಿಗಳು ಸೇರಿ ಲಿಂಗಾಯತರ ಒಟ್ಟು 189 ಜಾತಿ/ಉಪಜಾತಿಗಳನ್ನು ಪಟ್ಟಿ ಮಾಡಲು ಮನವಿ ಪತ್ರದಲ್ಲಿ ಆಯೋಗವನ್ನು ಒತ್ತಾಯಿಸಲಾಗಿದೆ. ವಚನ ಸಾಹಿತ್ಯ ಪರಿಷತ್ತಿನ ಎಂ.ಡಿ. ಸಂಖ, ಬಸವ ಕೇಂದ್ರದ ಮಹಾಂತೇಶ ಅಂಗಡಿ, ಅಣ್ಣಾಸಾಹೇಬ ಜಗದೇವ, ಬಸವಜ್ಯೋತಿ ಶಿಕ್ಷಣ ಸಂಸ್ಥೆಗಳ ಆಡಳಿತಾಧಿಕಾರಿ ಪ್ರೊ.ಬಸವರಾಜ ಕಡ್ಡಿ, ಪ್ರಾಚಾರ್ಯ ಡಾ.ಟಿ.ಪಿ. ಗಿರಡ್ಡಿ, ಉಪನ್ಯಾಸಕ ಮೌನೇಶ ಬಡಿಗೇರ ಹಾಗೂ ಕರೆಪ್ಪ ಬೀಳಗಿ ಮನವಿ ಸಲ್ಲಿಸಿದ ನಿಯೋಗದಲ್ಲಿದ್ದರು.

## ಮಧ್ಯವರ್ತಿಗಳಿಂದ ಮೋಸ ಹೋಗದಂತೆ ಎಚ್ಚರಿಕೆ

**ಕೊಪ್ಪಳ:** ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಸಂಸ್ಥೆಯ ಅಧೀನದಲ್ಲಿರುವ ಯಾವುದೇ ಆಸ್ಪತ್ರೆಗಳಲ್ಲಿ ಕೆಲಸ ಕೊಡಿಸುವುದಾಗಿ ಕೆಲ ಮಧ್ಯವರ್ತಿಗಳು ಜನರಿಗೆ ಆಮೀಷವೊಡ್ಡಿ, ಹಣ ಕೇಳುತ್ತಿರುವ ಆರೋಪ ಸಂಸ್ಥೆಯ ಗಮನಕ್ಕೆ ಬಂದಿದ್ದು, ಸಾರ್ವಜನಿಕರು ಮೋಸ ಹೋಗದಂತೆ ಕಿಮ್ಸ್ ನಿರ್ದೇಶಕರಾದ ವೈಜನಾಥ ಇಟಗಿ ಅವರು ಎಚ್ಚರಿಕೆ ನೀಡಿದ್ದಾರೆ.

ಕಿಮ್ಸ್ ಸಂಸ್ಥೆ ಅಥವಾ ಸಂಸ್ಥೆಯ ಅಧೀನದಲ್ಲಿ ಜಿಲ್ಲಾ ಆಸ್ಪತ್ರೆಯು ಕಾರ್ಯನಿರ್ವಹಿಸುತ್ತಿದೆ. ಕಿಮ್ಸ್ ಕಾಲೇಜು ಬಳಿ ಹೊಸದಾಗಿ 450 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನು ನಿರ್ಮಿಸಿದ್ದು, ಇನ್ನೂ ಉದ್ಘಾಟನೆ ಆಗಿರುವುದಿಲ್ಲ. ಪ್ರಸ್ತುತ ಕಿಮ್ಸ್ ಸಂಸ್ಥೆಯಿಂದ ಹೊಸದಾಗಿ ಯಾವುದೇ ಹುದ್ದೆಗಳಿಗೆ ನೇಮಕಾತಿ ನಡೆಸಿರುವುದಿಲ್ಲ. ಸಂಸ್ಥೆಯಲ್ಲಿ ಯಾವುದೇ ನೇಮಕಾತಿ ಇದ್ದಲ್ಲಿ ನಿಯಮಾನುಸಾರ ಪ್ರಕಟಣೆ ಹೊರಡಿಸಿ ನೇಮಕಾತಿ ನಡೆಸಲಾಗುವುದು ಹಾಗೂ ನೇಮಕಾತಿ ಪ್ರಕ್ರಿಯೆಯಲ್ಲಿ ಯಾವುದೇ ಮಧ್ಯವರ್ತಿಗಳಿರುವುದಿಲ್ಲ. ಸಂಸ್ಥೆಯ ಹೆಸರಿನಲ್ಲಿ ಕೆಲಸ ಕೊಡಿಸುವುದಾಗಿ ಯಾರಾದರೂ ಆಮೀಷ ಒಡ್ಡಿದಲ್ಲಿ ಮೋಸ ಹೋಗಬಾರದು ಮತ್ತು ಮಧ್ಯವರ್ತಿಗಳಿಗೆ ಹಣ ನೀಡದೇ ಜಾಗರೂಕರಾಗಿರಬೇಕು. ಒಂದು ವೇಳೆ ಯಾರಾದರೂ ಮಧ್ಯವರ್ತಿಗಳು ಕೆಲಸ ಕೊಡಿಸುವುದಾಗಿ ಆಮೀಷ ಒಡ್ಡಿದಲ್ಲಿ ಕಿಮ್ಸ್ ನಿರ್ದೇಶಕರ ಗಮನಕ್ಕೆ ತರುವಂತೆ ಕಿಮ್ಸ್ ಪ್ರಕಟಣೆ ತಿಳಿಸಿದೆ.

## 15ರಂದು ಪ್ರಗತಿ ಪರಿಶೀಲನಾ ಸಭೆ

**ಕೊಪ್ಪಳ:** ಕೊಪ್ಪಳ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಸೆಪ್ಟೆಂಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ತಾಲೂಕಿನ ಹಿಟ್ನಾಳ ಗ್ರಾಮ ಪಂಚಾಯತಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಕೊಪ್ಪಳ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್ ಸ್ಯಾಮುವೆಲ್ ಅವರು ವಹಿಸುವರು. ಸಭೆಯಲ್ಲಿ ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಇತರ ವಿಷಯಗಳ ಕುರಿತು ಚರ್ಚೆ ನಡೆಯಲಿದ್ದು, ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಪ್ರತಿನಿಧಿಗಳನ್ನು ನಿಯೋಜಿಸದೆ ಖುದ್ದಾಗಿ ಸಭೆಗೆ ಹಾಜರಾಗುವಂತೆ ಕೊಪ್ಪಳ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾರಿಗೆ ಸಂಸ್ಥೆಯ ಅಧಿಕಾರಿಗಳೊಂದಿಗೆ ಬೀಳಗಿ ಶಾಸಕ ಜೆ.ಟಿ.ಪಾಟೀಲ ಸಭೆ

# ವಿದ್ಯಾರ್ಥಿಗಳಿಗೆ ಸಮರ್ಪಕ ಬಸ್ ಸೌಲಭ್ಯ ಒದಗಿಸಿ



**ಬಾಗಲಕೋಟೆ:** ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಅನುಗುಣವಾಗಿ ಗ್ರಾಮೀಣ ಭಾಗಕ್ಕೆ ಸಮರ್ಪಕ ಬಸ್ ಸೌಲಭ್ಯ ಒದಗಿಸುವಂತೆ ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ಕಚೇರಿಯಲ್ಲಿ ನಡೆದ ಬೀಳಗಿ ಕ್ಷೇತ್ರದ ಪ್ರಯಾಣಿಕರ ಸಮಸ್ಯೆಗಳ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ದೂರದ ಊರುಗಳಿಗೆ ಹಾಗೂ ಅಂತರರಾಜ್ಯಗಳಿಗೆ ಬಸ್‌ಗಳನ್ನು ಬಿಡುವುದಕ್ಕಿಂತ ಮೊದಲು ಸ್ಥಳೀಯ ಮಟ್ಟದಲ್ಲಿ ಸಂಪೂರ್ಣ ಸಾರಿಗೆ ಸೌಲಭ್ಯ ಒದಗಿಸುವುದು ಮುಖ್ಯವಾಗಿದೆ. ಪ್ರತಿ ಹಳ್ಳಿಗೂ ಕೂಡ ಬಸ್ ಸಂಚರಿಸುವಂತೆ ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದರು.

ಸಭೆಯಲ್ಲಿ ತೆಗೆದುಕೊಂಡ ಪರಿಹಾರಗಳನ್ನು ಕೇವಲ ಚರ್ಚೆಗಳಿಗೆ ಮಾತ್ರ ಸೀಮಿತಗೊಳಿಸದೆ ಅವುಗಳನ್ನು ಕಾರ್ಯರೂಪಕ್ಕೆ ತರುವಂತೆ ಅಧಿಕಾರಿಗಳಿಗೆ ಸೂಚಿಸಿದರು. ವಿಶೇಷವಾಗಿ, ಬಸ್ ಚಾಲಕರಿಗೆ ಸೂಕ್ತ ಅರಿವು ಮೂಡಿಸಿ ಮುಂಜಾನೆಯ ಸಮಯದಲ್ಲಿ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಬಸ್ ಸೇವೆಯನ್ನು ಒದಗಿಸಬೇಕು. ಅದರಂತೆ, ಬೀಳಗಿ ಡಿಪೋದಿಂದ ಎರಡು ದಿನದೊಳಗೆ ವಿಜಯಪುರ ಮಾರ್ಗವಾಗಿ ಸಂಚರಿಸುವ ಎರಡು ಬಸ್‌ಗಳನ್ನು ಸ್ಥಳೀಯ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸಲು ಕ್ರಮವಹಿಸಲು ಸೂಚಿಸಿದರು.

ಬೀಳಗಿ ಕ್ರಾಸ್‌ನಿಂದ ಸರ್ಕಾರಿ ಆಸ್ಪತ್ರೆಗೆ ರಾತ್ರಿ 9 ಗಂಟೆಯವರೆಗೆ ಒಂದು ಬಸ್ ಸೇವೆ ದೊರಕಬೇಕು. ಕ್ಷೇತ್ರದ ಯಾವುದೇ ಗ್ರಾಮದ ವಿದ್ಯಾರ್ಥಿಗಳಿಗೆ ತೊಂದರೆಯಾಗುವ ಸಂದರ್ಭಗಳಲ್ಲಿ ಹಾಗೂ ನಿಗದಿತ ಸ್ಥಳ ಬಿಟ್ಟು ಬೇರೆಕಡೆಗಳಲ್ಲಿ ನಿಲ್ಲುವ ಚಾಲಕರ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕು. ಹೂಲಗೇರಿ, ಸೊಕನಾದಗಿ, ಶೆಲ್ಲಿಕೇರಿ, ಅನವಾಲ, ನೀರಬೂದಿಹಾಳ, ಗಂಗನಬೂದಿಹಾಳ, ಕೆರಕಲಮಟ್ಟಿ, ಯಳ್ಳಿಗುತ್ತಿ, ಶಿರಗುಪ್ಪಿ, ಕುಂದರಗಿ, ಚಿಕ್ಕಾಲಗುಂಡಿ ಗ್ರಾಮಗಳಿಗೆ ಸಂಬಂಧಿಸಿದ ವಿದ್ಯಾರ್ಥಿಗಳ ಸಾರಿಗೆ ಸಮಸ್ಯೆಗಳಿಗೆ ಪರಿಹಾರ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಯಿತು.

ಸಭೆಯಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಎನ್.ಟಿ.ಪಾಟೀಲ, ಜಿಲ್ಲಾ ಸಂಚಾರಿ ನಿಯಂತ್ರಣಾಧಿಕಾರಿ ಕೆ.ಕೆ.ಲಮಾಣಿ, ಡಿಎಂಇ ಅಶೋಕ ಡೆಂಗಿ, ಸಹಾಯಕ ಸಂಚಾರಿ ನಿಯಂತ್ರಣಾಧಿಕಾರಿ ಕಲ್ಲೊಳ್ಳಿ, ಬಾಗಲಕೋಟೆ ಡಿಪೋ ಮ್ಯಾನೇಜರ ಕೃಷ್ಣಾ ಚವ್ಹಾಣ, ಬೀಳಗಿ ಡಿಪೋ ಮ್ಯಾನೇಜರ ರಮೇಶ ಖೇಡದ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ವಾಯವ್ಯ ಸಾರಿಗೆ: ಅರ್ಜಿ ಆಹ್ವಾನ

**ಗದಗ:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗೀಯ ಕಛೇರಿಯಲ್ಲಿ ಐಟಿಐ ಕೋಪಾ ವೃತ್ತಿಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು www.apprenticeshipindia.gov.in ನಲ್ಲಿ ನೊಂದಣಿ ಮಾಡಿಕೊಂಡು ಸದರಿ ಪೋರ್ಟಲ್‌ನಿಂದ Divisional Controller NWKARTC GADAG DIVISION (EO 4162900081) ಈ ವಿಳಾಸಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ವಿಭಾಗೀಯ ಕಛೇರಿ, ವಾ.ಕ.ರ.ಸಾ.ಸಂಸ್ಥೆ, ಗದಗ ವಿಭಾಗ" ಇಲ್ಲಿ ಸೆಪ್ಟೆಂಬರ್ 17 ರಂದು ಬೆಳಿಗ್ಗೆ 11–00 ಘಂಟೆಗೆ ಕಛೇರಿ ವೇಳೆಯಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ನೇರ ಸಂದರ್ಶನಕ್ಕೆ ಹಾಜರಾಗಬೇಕೆಂದು ವಾ.ಕ.ರ.ಸಾ.ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂತರರಾಷ್ಟ್ರೀಯ ಸಾಕ್ಷರತಾ ದಿನಾಚರಣೆ । ನವಸಾಕ್ಷರರಿಗೆ ಪ್ರಮಾಣ ಪತ್ರ ವಿತರಣೆ

# ದೇಶದ ಉನ್ನತಿಗೆ ಎಲ್ಲರೂ ಸಾಕ್ಷರರಾಗಿ: ಕುರೇರ

**ಬಾಗಲಕೋಟೆ:** ಅಜ್ಞಾನವೇ ಅಂಧಕಾರ, ಜ್ಞಾನವೇ ಬೆಳಕು ಶಿಕ್ಷಣವೇ ಬದುಕಿನ ಶಕ್ತಿ ಹಾಗೂ ಜೀವನದ ದಾರಿ ಆಗಿದ್ದು ದೇಶದ ಉನ್ನತಿಗೆ ಎಲ್ಲರೂ ಶಿಕ್ಷಣವಂತರಾಗಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಮತ್ತು ಶಾಲಾ ಶಿಕ್ಷಣ ಇಲಾಖೆ ಸಾಕ್ಷರತೆ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 59ನೇ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮದ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಎಲ್ಲರೂ ಶಿಕ್ಷಣವಂತರಾದರೆ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ. ಸಂಯುಕ್ತ ರಾಷ್ಟ್ರ ಸಂಘವು 1967ರಲ್ಲಿ ಘೋಷಿಸಿದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆಯ ಉದ್ದೇಶ ದೇಶದಲ್ಲಿ ಓದುಬರಹ ಹಾಗೂ ಶಿಕ್ಷಣದ ಮಹತ್ವವನ್ನು ವಿಶ್ವಮಟ್ಟದಲ್ಲಿ ಹರಡುವುದಾಗಿದ್ದು, ಪ್ರತಿಯೊಬ್ಬರೂ ಶಿಕ್ಷಣವಂತರಾದರೆ ಈ ದಿನಾಚರಣೆಯ ಉದ್ದೇಶವು ಅರ್ಥಪೂರ್ಣವಾಗುತ್ತದೆ ಎಂದರು.

ಶಿಕ್ಷಣದ ಮೂಲಕ ಮೂಢನಂಬಿಕೆಗಳನ್ನು ಹೋಗಲಾಡಿಸಲು, ಬಾಲ್ಯ ವಿವಾಹವನ್ನು ತಡೆಯಲು ಹಾಗೂ ಸರ್ಕಾರದ ವಿವಿಧ ಯೋಜನೆಗಳು ಮತ್ತು ಕಾನೂನುಗಳ ಬಗ್ಗೆ ತಿಳಿದುಕೊಳ್ಳಲು ಶಿಕ್ಷಣ ಅಗತ್ಯವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ನವಸಾಕ್ಷರರಿಗೆ ಪ್ರಮಾಣಪತ್ರಗಳನ್ನು ವಿತರಣೆ ಮತ್ತು ಪ್ರತಿಜ್ಞಾವಿಧಿ ನಡೆಸಲಾಯಿತು. ಬೋಧಕರು ಹಾಗೂ ಕಲಿಕಾರ್ಥಿಗಳಿಗೆ ಕಲಿಕಾ ಬೋಧನಾ ಸಾಮಗ್ರಿಗಳನ್ನು ನೀಡಲಾಯಿತು. ಆಯ್ದ ಗ್ರಾಮ ಪಂಚಾಯಿತಿಗಳಲ್ಲಿ ಸಾಕ್ಷರ ಗೀತೆಗಳು ಹಾಗೂ ಬೀದಿ ನಾಟಕಗಳ ಮೂಲಕ ಸಾಕ್ಷರತಾ ಕಲಿಕಾ ವಾತಾವರಣವನ್ನು ನಿರ್ಮಿಸಿದ ದಿವ್ಯದರ್ಶನ ಗ್ರಾಮೀಣ ಅಭಿವೃದ್ಧಿ ಹಾಗೂ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ಸಂಸ್ಥಾಪಕರಾದ ಪ್ರಹ್ಲಾದ್ ಬಸಪ್ಪ ಬೋಯಿ ಹಾಗೂ ಅವರ ಕಲಾತಂಡಕ್ಕೆ ಪ್ರಮಾಣಪತ್ರ ನೀಡಿ ಅಭಿನಂದಿಸಲಾಯಿತು.



ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ್ ತೇಲಿ, ಶಿಕ್ಷಣಾಧಿಕಾರಿಗಳಾದ ಎಚ್.ಟಿ.ಮಿರ್ಜಿ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳಾದ ಆರ್.ಎಂ.ಮಕಾನದಾರ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಹುನಗುಂದ ಕ್ಷೇತ್ರ ಶಿಕ್ಷಣಾಧಿಕಾರಿ ಜಾಸ್ಮಿನ್ ಕಿಲ್ಲೇದಾರ, ಅಕ್ಷರ ದಾಸೋಹ ಅಧಿಕಾರಿ ದಯಾನಂದ್ ಯಾವಗಲ್, ಜಿಲ್ಲಾ ಸ್ಕೌಟ್ ಗೈಡ್ ಸಂಘಟಿಕ ಪ್ರಮೋದ್ ಚೌಗಲಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು. ಆರ್.ಆರ್.ದೇಸಾಯಿ ವಂದಿಸಿದರು. ಸಂಗಮೇಶ ಸಣ್ಣತಂಗಿ ಕಾರ್ಯಕ್ರಮ ನಿರೂಪಿಸಿದರು.

# ಅತ್ಯಾಚಾರ ಪ್ರಕರಣ: ಅಪರಾಧಿಗೆ ಶಿಕ್ಷೆ ಪ್ರಕಟ

**ಕೊಪ್ಪಳ:** ಪರಿಶಿಷ್ಟ ಜಾತಿಗೆ ಸೇರಿದ ಅಪ್ರಾಪ್ತ ಬಾಲಕಿಯನ್ನು ಅಪಹರಿಸಿ, ಅತ್ಯಾಚಾರ ಎಸಗಿದ ಹನುಮಂತ ಕುಂಬಾರ ಎಂಬ ಆರೋಪಿಯ ಮೇಲಿನ ಆರೋಪಗಳು ಸಾಬೀತಾದ ಹಿನ್ನೆಲೆಯಲ್ಲಿ ಅಪರಾಧಿಗೆ ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ ನ್ಯಾಯಾಲಯ(ಪೋಕ್ಸೋ)ದ ನ್ಯಾಯಾಧೀಶರಾದ ಕುಮಾರ ಡಿ.ಕೆ. ಅವರು ದಂಡ ಸಹಿತ 20 ವರ್ಷಗಳ ಜೈಲು ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ.

ಕುಷ್ಟಗಿ ತಾಲ್ಲೂಕಿನ ಪರಮನಹಟ್ಟಿಯ ಹನುಮಂತ ಕುಂಬಾರ ಎಂಬ ವ್ಯಕ್ತಿಯು ಪರಿಶಿಷ್ಟ ಜಾತಿಗೆ ಸೇರಿದ ಬಾಧಿತಳನ್ನು ಪರಿಚಯಿಸಿಕೊಂಡು, ಸಲಿಗೆ ಬೆಳೆಸಿ ಪ್ರೀತಿಸುತ್ತಿರುವುದಾಗಿ ಹಾಗೂ ಮದುವೆಯಾಗುವುದಾಗಿ ಹೇಳಿದ್ದನು. ಬಾಧಿತಳು ತಾನಿನ್ನೂ ಚಿಕ್ಕವಳು ಎಂದು ಆರೋಪಿಯ ಪ್ರಸ್ತಾವನೆಯನ್ನು ನಿರಾಕರಿಸಿದ್ದಳು. ಆದರೂ ಮದುವೆಯಾಗುವುದಾಗಿ ಪುಸಲಾಯಿಸಿ ದಿನಾಂಕ: 10–05–2023 ರಿಂದ ಹಲವಾರು ಬಾರಿ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಲ್ಲದೇ, ದಿನಾಂಕ: 31–07–2023 ರಂದು ಬಾಧಿತಳ ಮನೆಯಿಂದ ಆಕೆಯನ್ನು ತನ್ನ ಮೊಟಾರ್ ಬೈಕ್‌ನಲ್ಲಿ ತನ್ನ ಗ್ರಾಮಕ್ಕೆ ಕರೆದುಕೊಂಡು ಹೋಗಿ ಅಲ್ಲಿ 2 ದಿನ ತಂಗಿದ್ದು, ಅಲ್ಲಿಂದ ಬೈಕ್ ಮೇಲೆ ಬೆಂಗಳೂರಿಗೆ ತೆರಳಿ, ಬೆಂಗಳೂರಿನ ರಾಜಾಕುಂಟೆ ಗ್ರಾಮದ ಪಟ್ಟಾಲು ದೇವಸ್ಥಾನದ ಹತ್ತಿರ ಪತ್ತೆಯಾಗಿರುತ್ತಾರೆ.

ಆರೋಪಿಯು ಬಾಲಕಿಯನ್ನು ಅಪಹರಿಸಿ ಅತ್ಯಾಚಾರ ಎಸಗಿದ ಹಿನ್ನೆಲೆಯಲ್ಲಿ ಬೇವೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ಸ್ಪೇ.ಎಸ್‌ಸಿ(ಪೋಕ್ಸೋ) ಸಂ:53/2023 ರಡಿ ಪ್ರಕರಣ ದಾಖಲಾಗಿತ್ತು. ಬೇವೂರು ಠಾಣೆ ಪಿಎಸ್‌ಐ ಪ್ರಶಾಂತ ಎಚ್.ಎಸ್. ಅವರು ದೂರು ಸ್ವೀಕರಿಸಿ ಪ್ರಥಮ ಹಂತದ ತನಿಖೆ ನಿರ್ವಹಿಸಿದ್ದರು. ಮುಂದಿನ ಹಂತದ ತನಿಖೆಯನ್ನು ಕೊಪ್ಪಳ ಡಿಎಸ್‌ಪಿ ಶರಣಬಸಪ್ಪ ಸುಬೇದಾರ ಅವರು ನಿರ್ವಹಿಸಿ, ಆರೋಪಿಯ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದರು. ಡಿಎಸ್‌ಪಿ ಕಚೇರಿಯ ಸಿಎಚ್‌ಸಿ ಶಿವಕುಮಾರ ಅವರು ತನಿಖಾ ಸಹಾಯಕ ಕರ್ತವ್ಯ ನಿರ್ವಹಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶರು ಆರೋಪಿತನ ಮೇಲಿನ ಆರೋಪಗಳು ಸಾಬೀತಾದ್ದರಿಂದ ಅಪರಾಧಿಗೆ 20 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ.30,000/– ಗಳ ದಂಡವನ್ನು ಭರಿಸುವಂತೆ ಹಾಗೂ ಸರ್ಕಾರದಿಂದ ರೂ.6,00,000/– ಗಳ ಪರಿಹಾರವನ್ನು ನೀಡಲು ಆದೇಶಿಸಿ ಸೆಪ್ಟೆಂಬರ್ 8 ರಂದು ತೀರ್ಪು ಪ್ರಕಟಿಸಿದ್ದಾರೆ. ಪ್ರಕರಣದ ವಿಚಾರಣೆಯಲ್ಲಿ ಸರ್ಕಾರದ ಪರವಾಗಿ ಪ್ರಧಾನ ಸರ್ಕಾರಿ ಅಭಿಯೋಜಕರಾದ ಅರ್ಪಣಾ ಬಂಡಿ ಹಾಗೂ ವಿಶೇಷ ಸರ್ಕಾರಿ ಅಭಿಯೋಜಕರಾದ(ಪೋಕ್ಸೋ) ಗೌರಮ್ಮ ದೇಸಾಯಿ ಅವರು ವಾದ ಮಂಡಿಸಿದ್ದರು. ಬೇವೂರು ಪೊಲೀಸ್ ಠಾಣೆ ಸಿಬ್ಬಂದಿ ಮಂಜುನಾಥ ಇವರು ಸಾಕ್ಷಿದಾರರನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವಲ್ಲಿ ಸಹಕರಿಸಿದ್ದರು ಎಂದು ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರು(ಪೋಕ್ಸೋ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮ ಸಡಕ್ ಯೋಜನೆ ಕಾಮಗಾರಿ ಪರಿವೀಕ್ಷಣೆ

**ಹಾವೇರಿ:** ಹಾವೇರಿ ಜಿಲ್ಲೆಗೆ ಸಂಬಂಧಿಸಿದ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಹಂತ–3ರ ಕಾಮಗಾರಿಗಳ ಪರಿವೀಕ್ಷಣೆ ಸೆ.13 ರಂದು ನ್ಯಾಷನಲ್ ಕ್ವಾಲಿಟಿ ಮಾನಿಟರ್ ಸುಶೀಲ್ ಪಂಡಿತ್ ಅವರು ನಡೆಸಲಿದ್ದಾರೆ ಎಂದು ಯೋಜನಾ ಅನುಷ್ಠಾನ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಿತಿ ರಚನೆಗೆ ಅರ್ಜಿ ಆಹ್ವಾನ

**ಹಾವೇರಿ:** ಧಾರ್ಮಿಕ ದತ್ತಿ ಇಲಾಖೆಯ ಆಡಳಿತಕ್ಕೆ ಒಳಪಟ್ಟ ಬಿ ಪ್ರವರ್ಗದ ಹಿರೇಕೆರೂರು, ರಟ್ಟಿಹಳ್ಳಿ ಹಾಗೂ ಬ್ಯಾಡಗಿ ತಾಲೂಕಿನ ವಿವಿಧ ದೇವಸ್ಥಾನಗಳಿಗೆ ಒಂಭತ್ತು ಸದಸ್ಯರಿರುವ ವ್ಯವಸ್ಥಾಪನ ಸಮಿತಿ ರಚನೆಗೆ ಅರ್ಜಿ ಆಹ್ವಾನಿಸಲಾಗಿದೆ. ಹಿರೇಕೆರೂರು ಪಟ್ಟಣದ ಶ್ರೀ ದುರ್ಗಾದೇವಿ ದೇವಸ್ಥಾನ, ತಾಲೂಕಿನ ಬಾಳಂಬೀಡ ಗ್ರಾಮದ ಶ್ರೀ ವಿಷಪರಿಹಾರೇಶ್ವರ ದೇವಸ್ಥಾನ, ರಟ್ಟಿಹಳ್ಳಿ ತಾಲೂಕಿನ ಕೋಡ ಗ್ರಾಮದ ಶ್ರೀ ಹನುಮಂತ ದೇವಸ್ಥಾನ, ಸಾತೇನಹಳ್ಳಿ ಶ್ರೀ ಶಾಂತೇಶ್ವರ ದೇವಸ್ಥಾನ, ಗುಂಡಿಗಟ್ಟಿಯ ಶ್ರೀ ಹನುಮಂತ ದೇವಾಸ್ಥಾನ, ಹಳ್ಳೂರು ಶ್ರೀ ರಂಗನಾಥ ದೇವಸ್ಥಾನ, ರಟ್ಟಿಹಳ್ಳಿಯ ಶ್ರೀ ವೀರಭದ್ರೇಶ್ವರ ದೇವಸ್ಥಾನ ಹಾಗೂ ಶ್ರೀ ತುಳಜ ಭವಾನಿ ದೇವಸಾನ್ಥ, ಕಣವಿಸದ್ದಗೇರಿ ಶ್ರೀ ಶಿದ್ದೇಶ್ವರ ದೇವಸ್ಥಾನ ಹಾಗೂ ಬ್ಯಾಡಗಿ ತಾಲೂಕು ಕದರಮಂಡಲಗಿ ಶ್ರೀ ಮಾರುತಿ ದೇವಸ್ಥಾನಕ್ಕೆ ವ್ಯವಸ್ಥಾಪನ ಸಮಿತಿ ರಚನೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.ದೇವಸ್ಥಾನದ ಸಂಬಂಧದಲ್ಲಿ ಪ್ರಧಾನ ಅರ್ಚಕ ಅಥವಾ ಅರ್ಚಕ ಒಂದು, ಅನುಸೂಚಿತ ಜಾತಿ, ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಕನಿಷ್ಠ ಒಬ್ಬ ಸದಸ್ಯ, ಇಬ್ಬರು ಮಹಿಳೆಯರು, ದೇವಸ್ಥಾನ/ಸಂಸ್ಥೆ ಇರುವ ಪ್ರದೇಶದ ಸ್ಥಳೀಕರಲ್ಲಿ ಕನಿಷ್ಠ ಒಬ್ಬರು ಹಾಗೂ ಇತರೆ ನಾಲ್ಕು ಜನರನ್ನೊಳಗೊಂಡ ಸಮಿತಿ ರಚನೆ ಮಾಡಲಾಗುವುದು. ಅಭ್ಯರ್ಥಿಗಳು ದೇವರಲ್ಲಿ ನಂಬಿಕೆಯುಳ್ಳವರಾಗಿರಬೇಕು, 25 ವರ್ಷ ಮೇಲ್ಪಟ್ಟವರಾಗಿರಬೇಕು. ಒಳ್ಳೆಯ ನಡತೆ ಮತ್ತು ಖ್ಯಾತಿಯನ್ನು ಹೊಂದಿರಬೇಕು ಹಾಗೂ ಆ ಸ್ಥಳೀಯವಾಗಿ ಗೌರವವುಳ್ಳ ನಾಗರಿಕರಾಗಿರಬೇಕು.

ಆಸಕ್ತರು ಪೊಲೀಸ್ ಸತ್ಯಾಪನಾ ವರದಿ, ಪೂರ್ಣ ವಿಳಾಸ, ದೂರವಾಣಿ ಸಂಖ್ಯೆ ಸೇರಿದಂತೆ ಅಗತ್ಯ ಮಾಹಿತಿಯನ್ನು ಸ್ಪಷ್ಟವಾಗಿ ನಮೂದಿಸಿದ ಅರ್ಜಿಯನ್ನು ಈ ಪ್ರಕಟಣೆಯ 30 ದಿನದೊಳಗಾಗಿ ಹಾವೇರಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ನಂತರ ಸಲ್ಲಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಧಾಮಿರ್ಕ ಪರಿಷತ್ ಅಧ್ಯಕ್ಷ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

## .ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ಸೂಚನೆ

**ಹಾವೇರಿ:** ಶಿಕ್ಷಕರು ವಿದ್ಯಾರ್ಥಿಗಳಿಗೆ ಮನವರಿಕೆಯಾಗುವಂತೆ ಬೋಧನೆ ಮಾಡಬೇಕು ಹಾಗೂ ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ಆದ್ಯತೆ ನೀಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಚ್.ಪಾಟೀಲ ಅವರು ಶಿಕ್ಷಕರಿಗೆ ಸೂಚನೆ ನೀಡಿದರು. ಹಾವೇರಿ ನಗರದಲ್ಲಿ ಶನಿವಾರ ಜರುಗಿದ ಹಾವೇರಿ ತಾಲೂಕಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಬೆಳಗಿನ ಅವಧಿಯಲ್ಲಿ ವಿಶೇಷ ತರಗತಿ ಹಾಗೂ ಸಂಜೆ ಗುಂಪು ಅಧ್ಯಯನ ಮಾಡುವುದರ ಜೊತೆಗೆ ಎಸ್.ಎಲ್.ಎಲ್.ಸಿ. ಫಲಿತಾಂಶ ಸುಧಾರಣೆಗೆ ಎಲ್ಲ ಶಿಕ್ಷಕರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಬರುವ ಡಿಸೆಂಬರ್ –2025ರ ಅಂತ್ಯದೊಳಗಾಗಿ ಪಠ್ಯಕ್ರಮ ಪೂರ್ಣಗೊಳಿಸಬೇಕು. ಪ್ರತಿ ಶಾಲೆಯಲ್ಲಿಯೇ ಪ್ರತಿ ಪಾಠದ ಕಲಿಕೆಯ ಮೌಲ್ಯಾಂಕನ ಮತ್ತು ವಿದ್ಯಾರ್ಥಿವಾರು ಕಲಿಕೆ ಆಧಾರಿತ ಟ್ರ್ಯಾಕಿಂಗ್ ವ್ಯವಸ್ಥೆ ಮಾಡಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆತರುವ ಕೆಲಸವಾಗಬೇಕು. ಮೂರು ದಿನಕ್ಕಿಂತ ಹೆಚ್ಚಿಗೆ ಶಾಲೆಗೆ ಗೈರಾದ ಬಾಲಕಿ ಮನೆಗೆ ತೆರಳಿ ವಾಸ್ತವ ತಿಳಿದುಕೊಳ್ಳಬೇಕು. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳ ಕಲಿಕಾ ಸುಧಾರಣೆಗೆ ಹೆಚ್ಚಿನ ಒತ್ತು ನೀಡಬೇಕು. ಒಟ್ಟಾರೆ ಜಿಲ್ಲೆಯ ಉತ್ತಮ ಶೈಕ್ಷಣಿಕ ವಾತಾವರಣ ನಿರ್ಮಾಣಕ್ಕೆ ಎಲ್ಲ ಶಿಕ್ಷಕರು ಶ್ರಮಿಸಬೇಕು ಎಂದು ಸೂಚನೆ ನೀಡಿದರು.

ವಿದ್ಯಾರ್ಥಿಗಳಿಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆ, ಬಾಲಕ ಕಾರ್ಮಿಕ ನಿಷೇಧ ಕಾಯ್ದೆ ಹಾಗೂ ಮಕ್ಕಳ ಹಕ್ಕುಗಳ ಕುರಿತು ಮಾಹಿತಿ ನೀಡಬೇಕು ಎಂದು ತಿಳಿಸಿದರು. ಸಭೆಗೆ ಅನಿರೀಕ್ಷಿತ ಭೇಟಿ ನೀಡಿದ ಡಯಟ್ ಪ್ರಾಚಾರ್ಯ ಝುಡ್ ಎಂ.ಖಾಜಿ ಅವರು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರಿಗೆ ಹಲವಾರು ಸಲಹೆ ಸೂಚನೆಗಳನ್ನು ನೀಡಿದರು.

# ರಾಷ್ಟ್ರೀಯ ಪೌಷ್ಟಿಕಾಂಶ ಸಪ್ತಾಹ ದಿನಾಚರಣೆ




**ಬಸವನಬಾಗೇವಾಡಿ:** ಸದೃಢವಾದ ಶರೀರದ ರಚನೆಯಲ್ಲಿ ಆಹಾರವು ಪ್ರಮುಖ ಪಾತ್ರ ನಿರ್ವಹಿಸುತ್ತದೆ. ಈ ನಿಟ್ಟಿನಲ್ಲಿ ಜನತೆ ಆಹಾರದ ಕಡೆಗೆ ಹೆಚ್ಚು ಗಮನ ಹರಿಸುವ ಅಗತ್ಯವಿದೆ ಎಂದು ಪಟ್ಟಣದ ಖ್ಯಾತ ವೈದ್ಯ ಡಾ. ಎನ್.ಬಿ. ವಜೀರಕರ ಹೇಳಿದರು.

ಪಟ್ಟಣದ ಬಿ.ಎಲ್.ಡಿ.ಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಸಭಾಂಗಣದಲ್ಲಿ ಐಕ್ಯೂಎಸಿ,ವಿಜಯಪುರ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಹಾಗೂ ಮಹಿಳಾ ವೇದಿಕೆಯ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪೌಷ್ಟಿಕಾಂಶ ಸಪ್ತಾಹ ದಿನಾಚರಣೆಯಲ್ಲಿ ಮಾತನಾಡಿದ ಅವರು, ಪ್ರತಿದಿನ ಊಟದಲ್ಲಿ ಧಾನ್ಯ, ತರಕಾರಿ, ದ್ವಿದಳ ಧಾನ್ಯ, ಸಿರಿಧಾನ್ಯ ಮೊಳಕೆ ಒಡೆದ ಕಾಳುಗಳು ಬಳಸಬೇಕು. ಬೇಯಿಸದೇ ಇರುವ ತರಕಾರಿಗಳಾದ ಗಜ್ಜರಿ, ಸೌತೆಕಾಯಿ, ಮೂಲಂಗಿ, ಬಿಟರೂಟ್, ಈರುಳ್ಳಿ, ಬೆಳ್ಳುಳ್ಳಿ ಅನೇಕ ತರಕಾರಿಯನ್ನು ಹೆಚ್ಚಿಗೆ ಬಳಸಬೇಕು. ಮಾಂಸ ಆಹಾರಕ್ಕಿಂತ ಸಸ್ಯ ಆಹಾರವು ಆರೋಗ್ಯಕ್ಕೆ ಹೆಚ್ಚಿನ ಶಕ್ತಿ ತಂದುಕೊಡುತ್ತದೆ. ದೀರ್ಘಕಾಲದವರೆಗೆ ಸದೃಢವಾದ ಶರೀರವನ್ನು ಕಾಪಾಡಿಕೊಳ್ಳಲು ಬೇಕರಿ ಮತ್ತು ಕರಿದ ಪದಾರ್ಥಗಳಿಂದ ದೂರ ಇರಬೇಕು. ವಯಸ್ಕರು ಪ್ರತಿದಿನ ಮೂರರಿಂದ ಮೂರುವರೆ ಲೀಟರ್ ನೀರನ್ನು ಕುಡಿಯುವುದು ಉತ್ತಮ ಆರೋಗ್ಯಕ್ಕೆ ತುಂಬಾ ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎ.ವಿ. ಸೂರ್ಯವಂಶಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂಖ್ಯಾಶಾಸ್ತ್ರದ ಪ್ರಾಧ್ಯಾಪಕ ಡಾ. ಶ್ರೀನಿವಾಸ್ ಎ.ಟಿ., ಐಕ್ಯೂಎಸಿ ಸಂಯೋಜಕ ಸಿ.ಪಿ. ಧಡೇಕರ, ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥ ಡಾ. ಬಿ.ಎಂ. ಸಾಲವಾಡಗಿ, ಎನ್‌ಎಸ್‌ಎಸ್ ಘಟಕದ ಮುಖ್ಯಸ್ಥ ವೈ. ಬಿ. ನಾಯಕ, ಮಹಿಳಾ ವೇದಿಕೆಯ ಅಧ್ಯಕ್ಷ ಡಾ. ಎಸ್. ಬಿ. ಜನಗೊಂಡ, ರಾಜ್ಯಶಾಸ್ತ್ರದ ಪ್ರಾಧ್ಯಾಪಕ ಶ್ರೀರಾಮ್ ಬಿಜಾಪುರ, ದೈಹಿಕ ನಿರ್ದೇಶಕ ಎಸ್. ಕೆ. ಚಿಕ್ಕನರ್ತಿ, ಎಂ. ಕೆ. ಯಾದವ, ಎಸ್. ಜೆ. ಸೂರ್ಯವಂಶಿ, ಪಿ.ಎಸ್. ನಾಟೀಕರ, ಜಯರಾಮರೆಡ್ಡಿ ಆರ್.ಎಂ. ಮುಜಾವರ, ಐಶ್ವರ್ಯ ಹಕ್ಕೆ ಇತರರು ಇದ್ದರು. ಲಕ್ಷ್ಮಿ ಮೆಣಸಿಗಿ ನಿರೂಪಿಸಿದರು ಸುನಿತಾ ಕುಳಗೇರಿ ವಂದಿಸಿದರು.

# ನಾಡಿನ ಸಂಸ್ಕೃತಿಕ ಪರಂಪರೆ ಹಳ್ಳಿಗಳಲ್ಲಿ ಅಡಗಿದೆ

**ಬಾಗಲಕೋಟೆ:** ನಾಡಿನ ಸಂಸ್ಕೃತಿಕ ಪರಂಪರೆ ಹಳ್ಳಿಗಳಲ್ಲಿ ಅಡಗಿದೆ. ಈ ಸಾಂಸ್ಕೃತಿಕ ಪರಂಪರೆಗೆ ಸಾಕ್ಷಿಯಾಗಿ ಇತಿಹಾಸದಲ್ಲಿ ಸಿಗುವ ಮೂಲ ಆಕರಗಳು ಅದಕ್ಕೆ ಪೂರಕ ಸಾಧನೆಗಳಾಗಿವೆ ಎಂದು ಡಾ ವಿಜಯಕುಮಾರ ಕಟಗಿಹಳ್ಳಿಮಠ ಹೇಳಿದರು.

ಅವರು ಸೀಮಿಕೇರಿ ಗ್ರಾಮದಲ್ಲಿ ಹಂಪೆ ಕಟ್ಟೆ ಸಾಹಿತ್ಯ ಹಾಗೂ ಸಾಂಸ್ಕೃತಿಕ ಕೂಟ ಹಮ್ಮಿಕೊಂಡಿದ್ದ ನಮ್ಮೂರ ತಿಳಿಯೋಣ ಬಾರ–1 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ನಾಗರಿಕತೆಗಳು ಅರಳಿದ್ದು ನದಿಗಳ ತೀರದಲ್ಲಿ ಅನಂತರ ಕಾಲಾನುಕ್ರಮದಲ್ಲಿ ಪ್ರಗತಿಯ ಸೋಗಿನಲ್ಲಿ ಹಾಗೂ ಆಧುನಿಕತೆಯ ಭರಾಟೆಯಲ್ಲಿ ನಮ್ಮತನವನ್ನು ನಾವು ಕಳೆದುಕೊಳ್ಳುತ್ತಿದ್ದೇವೆ ಎಂದು ಖೇದ ವ್ಯಕ್ತಪಡಿಸಿದರು. ಅದಕ್ಕೆ ನಾವು ಈಗ ಆಧುನಿಕತೆಯೊಂದಿಗೆ ಮೂಲ ಪರಿಕಲ್ಪನೆಯನ್ನು ಅರಿತುಕೊಂಡು ನಡೆಯಬೇಕಾಗಿದೆ ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಉಪನ್ಯಾಸಕರಾಗಿ ಆಗಮಿಸಿದ್ದ ಅಶೋಕ ಕಂದಗಲ್ಲ ಸಣ್ಣ ಸಣ್ಣ ಸ್ಥಾನಿಕ ಸಂಗತಿಗಳು ಇತಿಹಾಸಕ್ಕೆ ಪುಷ್ಟಿಯನ್ನು ನೀಡಿ ಮೌಲ್ಯವರ್ಧನೆಗೆ ಪೂರಕ ಐತಿಹಾಸಿಕ ವಾತಾವರಣವನ್ನು ನಿರ್ಮಿಸಲು ಸಹಕಾರಿಯಾಗಿದೆ. ಗ್ರಾಮಗಳಲ್ಲಿ ಸಿಗುವ ಐತಿಹಾಸಿಕ ಕುರುಹುಗಳಿಂದ ಇತಿಹಾಸ ರಚಿಸಲು ತುಂಬಾ ಸಹಕಾರಿಯಾಗಿದೆಯೆಂದ ಅವರು ಭಾರತ ದೇಶ ಹಳ್ಳಿಗಳಿಂದ ಕೂಡಿದ ರಾಷ್ಟ್ರ ಆ ಹಳ್ಳಿಗಳಲ್ಲಿ ಸಿಗುವ ಐತಿಹಾಸಿಕ ಕುರುಹುಗಳಿಂದ ಇತಿಹಾಸದ ಕಾಲಾನುಕ್ರಮವನ್ನು ವ್ಯವಸ್ಥಿತವಾಗಿ ರೂಪಿಸಲು ಸಹಾಯಕಾರಿಯಾಗಿದೆಯೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮದ ಹಿರಿಯರಾದ ಮಹದೇವಪ್ಪ ನಿಂ. ತಳವಾರ ವಹಿಸಿ ಅಧ್ಯಕ್ಷೆಯ ಸಮಾರೋಪದಲ್ಲಿ ಹಂಪೆಕಟ್ಟೆ ಸಾಹಿತ್ಯ ಹಾಗೂ ಸಂಸ್ಕೃತಿಕ ಕೂಟ ಹಾಗೂ ಗ್ರಾಮದಲ್ಲಿರುವ ಸಂಸ್ಕೃತಿಕ ಘಟಕಗಳನ್ನು ಸಂರಕ್ಷಿಸುವ ಕೆಲಸವನ್ನು ಗ್ರಾಮ ಪಂಚಾಯಿತಿಯಿಂದ ಮಾಡಲಾಗುವದೆಂದು ತಮ್ಮ ಸಮಾರೋಪ ಭಾಷಣದಲ್ಲಿ ಆಶ್ವಾಸನೆ ನೀಡಿದರು. ಸಂವಾದ ಕಾರ್ಯಕ್ರಮದಲ್ಲಿ ಎಚ್ ಐ ನಾಯಕ, ಕಲ್ಲಪ್ಪ ಸಿರಬಡಗಿ, ರಮೇಶ ತಳವಾರ, ಶಂಕ್ರಪ್ಪ ಅಗಸರ, ಕೆಂಚಪ್ಪ ತೆಗ್ಗಿ, ಈರಣ್ಣ ಶಿ.ನಾಯಕ, ಬಸವರಾಜ ಕುಂಬಾರ, ಈರಪ್ಪ ಜಂಗನ್ನವರ, ಬಾಲಪ್ಪ ಜಮ್ಮನಕಟ್ಟಿ, ರಮೇಶ ತೆಗ್ಗಿ ಭಾಗವಹಿಸಿದ್ದರು. ಶ್ರೀ ಹನುಮಂತರಾವ ದೇಸಾಯಿ, ಮಲ್ಲಿಕಾರ್ಜುನ ತಳವಾರ ಪ್ರಕಾಶ ಖಾಡೆ ಉಪಸ್ಥಿತರಿದ್ದರು. ಗುರುನಾಥ ತಳವಾರ ಗುರುತಿಸಿರುವ ವೀರಗಲ್ಲು ಈ ಕಾರ್ಯಕ್ರಮದ ಕೇಂದ್ರ ಬಿಂದುವಾಗಿತ್ತು. ಕಾರ್ಯಕ್ರಮದಲ್ಲಿ ವಿಠ್ಠಲ ತಳವಾರ ಪ್ರಾರ್ಥಿಸಿದರು. ಬಸವರಾಜ ನಾಯಕ ಸ್ವಾಗತ ಗೀತೆ ಹಾಡಿದರು. ವಿರುಪಾಕ್ಷಿ ಗಂಗೂರ ಸ್ವಾಗತಿಸಿದರು. ಮುತ್ತಣ್ಣ ಇಂಗಳಗಿ ಪರಿಚಯಿಸಿದರು. ಬಸವರಾಜ ನಾಯಕ ನಿರೂಪಿಸಿದ ಕಾರ್ಯಕ್ರಮವನ್ನು ಮಲ್ಲಿಕಾರ್ಜುನ ತಳವಾರ ವಂದಿಸಿದರು. ಕಾರ್ಯಕ್ರಮದಲ್ಲಿ ಶಿವಣ್ಣ ಅವರಾದಿ, ಬಸಪ್ಪ ಚಿನ್ನಾಪುರ, ರಾಮನ್ನ ಸುನಗದ, ಮಲ್ಲಪ್ಪ ಕಪಲಿ ಅಲ್ಲದೆ ಗ್ರಾಮದ ಸಾರ್ವಜನಿಕರು ಭಾಗವಹಿಸಿದ್ದರು.




# ಇಂದು ಲೀನ್ ಯೋಜನೆ ಕುರಿತು ಕಾರ್ಯಕ್ರಮ

**ವಿಜಯಪುರ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ವಿಜಯಪುರ ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಬೆಂಗಳೂರು (ಕಾಸಿಯಾ) ಇವರ ಸಹಯೋಗದಲ್ಲಿ ಎಂಎಸ್‌ಎಂಇಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು ಯೋಜನೆಯಡಿ ಝಡ್‌ಇಡಿ ಮತ್ತು ಲೀನ್ ಯೋಜನೆಯ ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಸೆ.11 ರಂದು ಸಿಂದಗಿಯ ಹೋಟೆಲ್ ಡಾಲ್ಫಿನ್‌ನಲ್ಲಿ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಎಂಎಸ್‌ಎಂಇ ಉದ್ದಿಮೆದಾರರು ಭಾಗವಹಿಸಿ ಒಂದು ದಿನದ ಅರಿವು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಮಗಾರಿಗಳಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡಿ: ಗೋಡಬೋಲೆ

**ಕಾರವಾರ:** ಜಿಲ್ಲೆಯಲ್ಲಿ ಕೈಗೊಳ್ಳುವ ವಿವಿಧ ಕಾಮಗಾರಿಗಳ ಅನುಷ್ಠಾನದಲ್ಲಿ ಅತ್ಯುತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳವಲ್ಲಿ ಹೆಚ್ಚಿನ ಆದ್ಯತೆ ನೀಡುವಂತೆ ಇಂಜಿನೀಯರಿಂಗ್ ವಿಭಾಗದ ಎಲ್ಲಾ ಇಲಾಖೆಗಳ ಅಧಿಕಾರಿಗಳಿಗೆ ರಾಜ್ಯ ಮಾಹಿತಿ ಆಯೋಗದ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಪಂಚಾಯತ್‌ನ ಆಡಳಿತಾಧಿಕಾರಿ ಸುಷಮಾ ಗೋಡಬೋಲೆ ಸೂಚನೆ ನೀಡಿದರು.

ಅವರು ಮಂಗಳವಾರ ಜಿಲ್ಲಾ ಪಂಚಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಪಂಚಾಯತ ಸಾಮಾನ್ಯ ಸಭೆ ಮತ್ತು ಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಯಾವುದೇ ಕಾಮಗಾರಿಗಳನ್ನು ಕೈಗೊಳ್ಳುವಾಗ, ಸ್ಥಳೀಯ ವಾತಾವರಣವನ್ನು ಗಮನದಲ್ಲಿಟ್ಟುಕೊಂಡು, ಇಲ್ಲಿನ ಪರಿಸ್ಥಿತಿಗೆ ಯಾವ ರೀತಿಯ ವಸ್ತುಗಳನ್ನು ಬಳಸಿ ಕಾಮಗಾರಿಗಳನ್ನು ಕೈಗೊಂಡರೆ ದೀರ್ಘಕಾಲದವರೆಗೆ ಸಾರ್ವಜನಿಕರ ಉಪಯೋಗಕ್ಕೆ ಬರುತ್ತದೆ ಎಂಬುದನ್ನು ನಿರ್ಧರಿಸಿ ಇಂಜಿನೀಯರಿಗ್ ವಿಭಾಗದ ಅಧಿಕಾರಿಗಳು ಅತ್ಯಂತ ಉತ್ತಮ ಗುಣಮಟ್ಟದಿಂದ ಕೂಡಿದ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದರು.

ಪಂಚಾಯತ ರಾಜ್ ಇಂಜಿನೀಯರಿಂಗ್ ವಿಭಾಗದಲ್ಲಿ ನೀಡಲಾದ ಕಾಮಗಾರಿಗಳ ಅಂದಾಜು ಪಟ್ಟಿ ತಯಾರಿಸುವುದರಲ್ಲಿ ವಿಳಂಬ ಮಾಡಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು ಶೀಘ್ರವಾಗಿ ಅಂದಾಜುಪಟ್ಟಿ ಸಿದ್ದಪಡಿಸಿ, ಆದ್ಯತೆ ಮೇರೆಗೆ ಶಾಲಾ ಅಂಗನವಾಡಿ ದುರಸ್ಥಿ ಕಾಮಗಾರಿಗಳನ್ನು ಪ್ರಾರಂಭಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲೆಯ ಎಲ್ಲಾ ಸರಕಾರಿ ಇಲಾಖೆಗಳ ಅಧಿಕಾರಿಗಳು, ತಮ್ಮ ಇಲಾಖೆಗೆ ಸಂಬಂಧಿಸಿದ ಆಸ್ತಿಗಳ ದಾಖಲಾತಿಯ ವಿವರಗಳು, ಇಲಾಖೆ ಹೆಸರಿಗೆ ಖಾತೆಯಾಗಿರುವ ಬಗ್ಗೆ ಪರಿಶೀಲಿಸಿ, ದಾಖಲಾತಿಗಳನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡಬೇಕು ಎಂದರು.

ಅನಕ್ಷರಸ್ಥರಿಗೆ ಕಲಿಕಾ ಕೇಂದ್ರದಲ್ಲಿ ಕಲಿಕೆ ಜೊತೆ ಕಲಿಯಲು ಅವರನ್ನು ಹುರಿದುಂಬಿಸುವ ರೀತಿಯ ವಿಭಿನ್ನ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಅವರಿಗೆ ಕಲಿಕೆಯಲ್ಲಿ ಹೆಚ್ಚಿನ ಆಸಕ್ತಿ ಮೂಡಿಸಬೇಕು. ಸ್ಥಳೀಯ ಸಂಸ್ಥೆಗಳ ಸಹಯೋಗದೊಂದಿಗೆ ಅನಕ್ಷರಸ್ಥ ಪೌರ ಕಾರ್ಮಿಕರಿಗೆ ಮತ್ತು ಎಪಿಎಂಸಿ ಯಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರನ್ನು ಕಲಿಕಾ ಕೇಂದ್ರದಲ್ಲಿ ನೋಂದಣಿ ಮಾಡಿಸಿ ಅವರಿಗೆ ಶಿಕ್ಷಣ ನೀಡುವಂತೆ ವಯಸ್ಕರ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ತೀವ್ರ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳಿಗೆ ಚಿಕಿತ್ಸೆ ಒದಗಿಸಿದ ನಂತರ ಅವರ ಅರೋಗ್ಯದಲ್ಲಿ ಆಗಿರುವ ಬದಲಾವಣೆಯ ಬಗ್ಗೆ ಪರಿಶೀಲಿಸಿ, ಈ ಬಗ್ಗೆ ವರದಿ ನೀಡುವಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕಾರವಾರ ಮೆಡಿಕಲ್ ಕಾಲೇಜು ಆವರಣದಲ್ಲಿ ಪೂರ್ಣಗೊಂಡಿರುವ 450 ಹಾಸಿಗೆ ಸಾಮರ್ಥ್ಯದ ಹೊಸ ಕಟ್ಟಡವನ್ನು ಈಗಾಗಲೇ ಸುಪರ್ದಿಗೆ ಪಡೆದಿರುವುದರಿಂದ, ಕೂಡಲೇ ಅಲ್ಲಿಗೆ ಸ್ಥಳಾಂತರ ಪ್ರಕ್ರಿಯೆಯನ್ನು ಆರಂಭಿಸುವಂತೆ ಮತ್ತು ಶೀಘ್ರದಲ್ಲಿ ಅದನ್ನು ಉದ್ಘಾಟಿಸಲು ಅಗತ್ಯವಿರುವ ಕ್ರಮ ಕೈಗೊಳ್ಳುವಂತೆ ಕ್ರಿಮ್ಸ್‌ನ ಡೀನ್ ಗೆ ಸೂಚಿಸಿದರು.

ಎಲ್ಲಾ ಕಚೇರಿಗಳಲ್ಲಿ ಕಡತಗಳನ್ನು ಎ.ಬಿ.ಸಿ.ಡಿ ಯಾಗಿ ವರ್ಗೀಕರಿಸಿ ವಿಲೇವಾರಿ ಹಾಗೂ ಅನುಪಯುಕ್ತ ವಸ್ತುಗಳನ್ನು ನವೆಂಬರ್ ಅಂತ್ಯದೊಳಗೆ ವಿಲೇವಾರಿ ಮಾಡುವಂತೆ ಸೂಚಿಸಿದ ಅವರು, ಅಭಿಲೇಖಪಾಲಕವನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡುವಂತೆ ಇಲಾಖಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಅನಿರ್ಬಂದಿತ ಅನುದಾನದ ಕ್ರಿಯಾಯೋಜನೆಗಳಿಗೆ ಅನುಮೋದನೆ, ಸಿ.ಎಂ.ಜಿ.ಎಸ್.ವೈ. ಕ್ರಿಯಾಯೋಜನೆಗಳಿಗೆ ಅನುಮೋದನೆ ಹಾಗೂ ಜಿಲ್ಲಾ ಪಂಚಾಯತ ಅಧೀನ ಇಲಾಖೆಗಳ ಅಗಸ್ಟ್–2025 ರ ಅಂತ್ಯದವರೆಗಿನ ಪ್ರಗತಿ ಪರಿಶೀಲನೆ ನಡೆಸಲಾಯಿತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ತರಬೇತಿ ನಿರತ ಐ.ಎ.ಎಸ್.ಅಧಿಕಾರಿ ಝೂಫಿಷಾನ್ ಹಕ್, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಎ.ಎಸ್.ಪಿ. ಕೃಷ್ಣಮೂರ್ತಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಅವಧಿ ವಿಸ್ತರಣೆ

**ಕೊಪ್ಪಳ:** ಅಕ್ಟೋಬರ್ 2 ರಂದು ಮಹಾರಾಷ್ಟ್ರದ ನಾಗಪುರದಲ್ಲಿ ನಡೆಯಲಿರುವ ಸಂವಿಧಾನ ಶಿಲ್ಪಿ, ಭಾರತ ರತ್ನ, ಡಾ.ಬಿ.ಆರ್. ಅಂಬೇಡ್ಕರ್ ರವರ ಪ್ರವರ್ತನಾ ದಿನದಲ್ಲಿ(ವಿಜಯ ದಶಮಿ ದಿನದಂದು) ಪಾಲ್ಗೊಳ್ಳುವ ಅನುಯಾಯಿಗಳಿಗೆ ಯಾತ್ರೆಗೆ ತೆರಳಲು ಅರ್ಜಿ ಸಲ್ಲಿಕೆ ಅವಧಿಯನ್ನು ಸೆಪ್ಟೆಂಬರ್ 15 ರವರೆಗೆ ವಿಸ್ತರಿಸಲಾಗಿದೆ.ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ https://swd.karnataka.gov.in ನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಸೆ.9 ರವರೆಗೆ ಅವಕಾಶ ಕಲ್ಪಿಸಲಾಗಿತ್ತು. ಸದ್ಯ ಇಲಾಖೆಯ ಆಯುಕ್ತರ ನಿರ್ದೇಶನದನ್ವಯ ಆನ್‌ಲೈನ್ ಅರ್ಜಿ ಸಲ್ಲಿಕೆ ಅವಧಿಯನ್ನು ಸೆ.15 ರವರೆಗೆ ವಿಸ್ತರಿಸಲಾಗಿದೆ. ಆಸಕ್ತರು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಪ್ಪಳ ಅವರನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತಮ ಶಿಕ್ಷಕರಿಗೆ ನೇಷನ್ ಬಿಲ್ಡರ್ ಪ್ರಶಸ್ತಿ




**ಜಮಖಂಡಿ:** ನಗರದ ರಾಜ್ಯ ಹೆದ್ದಾರಿಯಲ್ಲಿ ಬರತಕ್ಕ ರೋಟರಿ ಭವನದಲ್ಲಿ ರೊಟರಿ ಸಂಸ್ಥೆ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಸಾಧಕ ಶಿಕ್ಷಕರಿಗೆ ನೇಷನ್ ಬಿಲ್ಡರ್ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ವೇದಿಕೆಯಲ್ಲಿ ರೋಟರಿ ಸಂಸ್ಥೆಯ ಅಧ್ಯಕ್ಷ ರಾಜಶೇಖರ ಕೊವಳ್ಳಿ, ಕಾರ್ಯದರ್ಶಿ ಎಂ.ಎಚ್.ಕಡ್ಲಿಮಟ್ಟಿ, ಆರ್.ಪಿ. ಕಾಮೋಜಿ, ಮುಖ್ಯಶಿಕ್ಷಕ ನಾರಾಯಣ ಶಾಸ್ತ್ರೀ, ಚಂದ್ರಕಾಂತ ಜನವಾಡ, ಶಂಕರ ಪಟ್ಟಣಶೆಟ್ಟಿ, ಲತಾ ಪಾಟೀಲ, ಮಾನಸಾ ಇಂಗಳಗಿ, ರಶ್ಮೀ ದೇಸಾಯಿ, ಅರ್ಚನಾ ಕಾಖಂಡಕಿ, ಶಶಿಧರ ಕಡಬಾಗಿಲ,

ಇದೇ ಸಂದರ್ಭದಲ್ಲಿ ಕುಂಬಾರಹಳ್ಳ ಸರ್ಕಾರಿ ಪ್ರೌಢ ಶಾಲೆ ಮುಖ್ಯಶಿಕ್ಷಕ ನಾರಾಯಣ ಶಾಸ್ತ್ರೀ, ಮಹಾಂತೇಶ ನಗರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕಿ ಪ್ರಭಾವತಿ ದುದಗಿ, ಮರೆಗುದ್ದಿಯ ಹಿರಿಯ ಪ್ರಾಥಮಿಕ ಶಾಲೆ ಆರ್.ಬಿ.ಪಾಟೀಲ, ಶಿಕ್ಷಕ ಅಂದಾನೆಪ್ಪ ಅವರಿಗೆ ನೇಷನ್ ಬಿಲ್ಡರ್ ಪ್ರಶಸ್ತಿ ನೀಡಿ ಗೌರವಿಸಿದರು.

ಒಂದು ಮಗುವನ್ನು ಶಿಸ್ತು ಬದ್ದ ಮೂರ್ತಿಗಳನ್ನಾಗಿ ನಿರ್ಮಿಸುವದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಕರ ಕರ್ತವ್ಯ. ಶಿಕ್ಷಕರು ಕರ್ತವ್ಯ ಮತ್ತು ಜವಾಬ್ದಾರಿ ಅರಿತು ಮಕ್ಕಳಿಗೆ ಶಿಕ್ಷಣ ನೀಡಬೇಕು, ಶಿಕ್ಷಣದ ಜೊತೆಗೆ ಸಾಮಾಜಿಕ ಜವಾಬ್ದಾರಿಯಲ್ಲಿ ರೋಟರಿ ಸಂಸ್ಥೆಯೂ ಭಾಗಿಯಾಗುತ್ತಾ ಬಂದಿದೆ ಎಂದರು.

# 5ವರ್ಷದ ಅವಧಿಯಲ್ಲಿ ಸಂಪೂರ್ಣ ಸಾಕ್ಷರ ನಾಡನ್ನಾಗಿಸುವ ಗುರಿ

**ಗದಗ:** 59ನೇ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಅಂಗವಾಗಿ ಗದಗ ಜಿಲ್ಲಾ ಮಟ್ಟದ ಸಾಕ್ಷರತಾ ದಿನಾಚರಣೆಯನ್ನು ಗದಗ ಜಿಲ್ಲಾಡಳಿತ ಕಚೇರಿ ಆವರಣದಲ್ಲಿ ಸೋಮವಾರ ನೆರವೇರಿಸಲಾಯಿತು. ಜಿ.ಪಂ. ಯೋಜನಾ ನಿರ್ದೇಶಕ ಎಮ್.ವಿ.ಚಳಗೇರಿ ಸಾಕ್ಷರತಾ ಧ್ವಜಾರೋಹಣ ನೆರವೇರಿಸಿದರು.

ನಂತರ ಮಾತನಾಡಿದ ಅವರು ಜಿಲ್ಲೆಯಲ್ಲಿ ಸಂಪೂರ್ಣ ಸಾಕ್ಷರಗೊಳಿಸಲು ಅನುಷ್ಠಾನದಲ್ಲಿರುವ ಸಾಕ್ಷರತಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಮಾಡಬೇಕು. ಹಾಗೂ 2022 ರಂದ 2027 ರವರೆಗಿನ 5 ವರ್ಷಗಳ ಅವಧಿಯಲ್ಲಿ ಕರ್ನಾಟಕ ರಾಜ್ಯವನ್ನು ಸಂಪೂರ್ಣ ಸಾಕ್ಷರ ನಾಡನ್ನಾಗಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಎಸ್.ಎಸ್. ಕುರಿಯವರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತಾನಾಡುತ್ತಾ ಜಿಲ್ಲೆಯಲ್ಲಿ ರಾಜ್ಯ ಮಟ್ಟದ ಸಂಪೂರ್ಣ ಸಾಕ್ಷರ ಗ್ರಾಮ ಪಂಚಾಯತ ಸಾಕ್ಷರತಾ ಕಾರ್ಯಕ್ರಮ,



ಜಿಲ್ಲಾ ಮಟ್ಟದ ಲಿಂಕ್ ಡಾಕ್ಯೂಮೆಂಟ್ ಜನಶಿಕ್ಷಣ ನಿಲಯ ಯೋಜನೆಯಡಿಯ ಮೂಲ ಸಾಕ್ಷರತಾ ಕಾರ್ಯಕ್ರಮ ಮತ್ತು ರಾಷ್ಟ್ರ ಮಟ್ಟದ ನವಭಾರತ ಸಾಕ್ಷರತಾ ಕಾರ್ಯಕ್ರಮಗಳನ್ನು ಜಿಲ್ಲೆಯ ಶಿಕ್ಷಣ ಅಧಿಕಾರಿಗಳು ತಮ್ಮ ಸಹಯೋಗದೊಂದಿಗೆ ಯಶಸ್ವಿಗೊಳಿಸಬೇಕೆಂದು ಹೇಳಿದರು.

ಡಯಟ್‌ದ ಪ್ರಾಚಾರ್ಯರಾದ ಮಂಗಳಾ. ಬಿ. ತಾಪಸ್ಕರ ಸಾಕ್ಷರತಾ ಪ್ರಮಾಣ ವಚನವನ್ನು ಬೋಧಿಸಿದರು. ಡಿ.ವೈ.ಪಿ.ಸಿ. ಸರ್ವ ಶಿಕ್ಷಣ ಅಭಿಯಾನ, ಎಮ್. ಹೆಚ್. ಕಂಬಳಿ ಮಾತನಾಡಿ ವಿದ್ಯಾವಂತರು ಅನಕ್ಷರಸ್ಥರಿಗೆ ಅಕ್ಷರ ಜ್ಞಾನ ನೀಡಲು ಮುಂದಾಗಬೇಕು. ಜನರು ಸ್ವಾವಲಂಬಿಯಾಗಿ ಬದುಕಲು ಸಾಕ್ಷರತೆ ಒಂದು ಊರುಗೋಲು ಇದ್ದಂತೆ ಎಂದು ಹೇಳಿದರು. ಶಿಕ್ಷಣದ ಮಹತ್ವ ಸಾರುವ ಈ ದಿನ ನಾವು ಯಾವುದೇ ರಂಗದಲ್ಲಿ ಯಶಸ್ಸನ್ನು ಸಾಧಿಸಬೇಕಾದರೆ ಸಾಕ್ಷರತೆ ಅತೀ ಅವಶ್ಯಕ, ಎಲ್ಲರೂ ಸಾಕ್ಷರರಾಗಬೇಕು. ಹಾಗೂ 15 ವರ್ಷ ಮೇಲ್ಪಟ್ಟ ವಯಸ್ಕರಿಗೆ ಓದು, ಬರಹ, ಸರಳ ಲೆಕ್ಕಾಚಾರಗಳೊಂದಿಗೆ ಜೀವನ ಕೌಶಲಗಳನ್ನು ಅಭಿವೃದ್ಧಿಪಡಿಸುವುದು. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಪುರುಷ ಮಹಿಳೆಯರ ನಡುವಿನ ಸಾಕ್ಷರತಾ ಪ್ರಮಾಣದ ಅಂತರವನ್ನು ಕಡಿಮೆ ಮಾಡಲು ಈ ಸಾಕ್ಷರತಾ ಕಾರ್ಯಕ್ರಮವು ಬಹಳ ಉಪಯುಕ್ತವಾಗಿದೆ ಎಂದು ಹೇಳಿದರು.

ಜಿ. ಎಮ್. ಮುಂದಿನಮನಿ, ಹಿರಿಯ ಉಪನ್ಯಾಸಕರು, ಬಿ.ಎಫ್. ಅರವಟಗಿ, ಹಿರಿಯ ಉಪನ್ಯಾಸಕರು ಜೆ.ಎ. ಬಾವಿಕಟ್ಟಿ, ಕ್ಷೇತ್ರ ಸಮನ್ವಯಾಧಿಕಾರಿಗಳು, ಗದಗ ಗ್ರಾಮೀಣ, ಹಾಗೂ ಎಸ್.ಪಿ. ಪ್ರಭಯ್ಯನಮಠ, ಕ್ಷೇತ್ರ ಸಮನ್ವಯಾಧಿಕಾರಿಗಳು, ಗದಗ ಶಹರ, ಎಸ್. ಆರ್. ನದಾಫ, ಎಸ್. ಬಿ. ಬನ್ನಿಕಲ್, ಜೆ. ಹುಲಗೇರಿ, ಜಿ.ಡಿ. ದಾಸರ, ಮತ್ತು ಗದಗ ಗ್ರಾಮೀಣ ವಿಭಾಗದ ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳು ಮತ್ತು ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳು ಹಾಗೂ ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗದವರು, ಸಾಕ್ಷರತಾ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ದೈಹಿಕ ಶಿಕ್ಷಕರಾದ ಎಸ್. ಮುಳಗುಂದ, ಧ್ವಜಾರೋಹಣ ಕಾರ್ಯಕ್ರಮವನ್ನು ನೆರವೇರಿಸಿಕೊಟ್ಟರು. ಕ್ಷೇತ್ರ ಸಂಪನ್ಮೂಲ ವ್ಯಕಿ ಪಿ.ಡಿ. ಮಂಗಳೂರ ವಂದಿಸಿದರು.

### ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಸಚಿವ ಶಿವಾನಂದ ಪಾಟೀಲ ಸೂಚನೆ

# ಕಳಪೆ ಬೀಜ, ಗೊಬ್ಬರ ಮಾರಾಟಗಾರರ ವಿರುದ್ಧ ಎಫ್‌ಐಆರ್ ದಾಖಲಿಸಿ

**ಹಾವೇರಿ:** ಜಿಲ್ಲೆಯಲ್ಲಿ ಪತ್ತೆಯಾದ ಕಳಪೆ ರಸಗೊಬ್ಬರ ಹಾಗೂ ಬಿತ್ತನೆ ಬೀಜ ಮಾರಾಟಗಾರರ ಲೈಸನ್ಸ್ ರದ್ದು ಮಾಡಿ, ಅವರ ವಿರುದ್ಧ ಚಾರ್ಜ್‌ಶೀಟ್ ಹಾಕಿ, ಎಫ್‌ಐಆರ್ ದಾಖಲಿಸುವಂತೆ ಅಧಿಕಾರಿಗಳಿಗೆ ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಮೊದಲು ರಾಣೇಬೆನ್ನೂರು ಉತ್ತಮ ಸೀಡ್ಸ್‌ಗೆ ಹೆಸರಾಗಿತ್ತು. ಈಗ ಕಳಪೆ ಬೀಜ ಮಾರಾಟದಿಂದ ಜಿಲ್ಲೆ ಸುದ್ದಿಯಲ್ಲಿದೆ. ರಾಜ್ಯ ಮಟ್ಟದ ವಿಜಲನ್ಸ್ ತಂಡ ಕರೆಸಿ ಪರಿಶೀಲನೆ ಮಾಡಿಸುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಶಾಸಕ ಪ್ರಕಾಶ ಕೋಳಿವಾಡ ಅವರು ಮಾತನಾಡಿ, ಕಳಪೆ ಬೀಜ–ಗೊಬ್ಬರ ಮಾರಾಟಮಾಡಿದ ಪ್ರಕರಣದಲ್ಲಿ ಬಂದ್ ಮಾಡಲಾದ ಅಂಗಡಿಗಳನ್ನು ಪುನಃ ಆರಂಭಿಸಲಾಗಿದೆ. ಇದಕ್ಕೆ ಯಾರು ಅನುಮತಿ ನೀಡಿದರು ಎಂದು ಪ್ರಶ್ನೆ ಮಾಡಿದರು ಹಾಗೂ ಕೂಡಲೇ ಆ ಅಂಗಡಿಗಳನ್ನು ಮುಚ್ಚಿಸಲು ಕ್ರಮವಹಿಸಬೇಕು ಎಂದರು.

ಸಚಿವರು ಕಳಪೆ ಬೀಜದ ಕುರಿತು ಲ್ಯಾಬ್ ವರದಿ ಏನಂತಾ ಬಂದಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಪ್ರಶ್ನಿಸಿದರು. ಆಗ ಅವರು ಕಳಪೆ ಎಂದು ವರದಿ ಬಂದಿದೆ ಎಂದು ತಿಳಿಸಿದಾಗ, ಕೂಡಲೇ ಕಳಪೆ ಬೀಜ ಮಾರಾಟಗಾರರ ಅಂಗಡಿ ಮುಚ್ಚಿಸುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ನಕಲಿ ಆರ್‌ಟಿಸಿ:** ಶಿಗ್ಗಾಂವ ತಾಲೂಕಿನಲ್ಲಿ ನಕಲಿ ಆರ್‌ಟಿಸಿ ತಯಾರಿಸಿ ರೈತರಲ್ಲದವರು ಬೆಳೆಹಾನಿ ಪರಿಹಾರ ಪಡೆದಿದ್ದಾರೆ. ಇದರಿಂದ ನೈಜ ರೈತರಿಗೆ ಅನ್ಯಾಯವಾಗಿದೆ. ಈ ಕುರಿತು ಕೃಷಿ ಇಲಾಖೆ ಅಧಿಕಾರಿಗಳು ಯಾವುದೇ ಕ್ರಮಕೈಗೊಂಡಿಲ್ಲ. ಇಷ್ಟೊಂದು ದೊಡ್ಡ ಪ್ರಮಾಣದ ಅವ್ಯವಹಾರದಲ್ಲಿ ಅಧಿಕಾರಿಗಳ ಹಸ್ತಕ್ಷೇಪ ಇದೆ ಎಂದು ಅನುಮಾನ ಬರುತ್ತಿದೆ. ನಕಲಿ ಆರ್.ಟಿ.ಸಿ. ತಯಾರಿಸುವ ಏಜೆಂಟರಿದ್ದಾರೆ. ಅವರಿಗೆ ಮೊದಲೇ ಗೊತ್ತಿರುತ್ತದೆ ಯಾವ ಬೆಳೆಗೆ ಬೆಳೆ ವಿಮೆ ಎಂದು, ಇದು ಹೇಗೆ ಸಾಧ್ಯ? ರೈತರು ಬೆಳೆ ವಿಮೆ ಪಾವತಿಸಿದರೆ ಪರಿಹಾರ ಬರುವುದಿಲ್ಲ. ಆದರೆ ಏಜೆಂಟರು ಪಾವತಿಸಿದರೆ ಪರಿಹಾರ ಬರುತ್ತದೆ ಎಂದು ಹೇಳಲಾಗುತ್ತಿದೆ. ಈ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದು ಶಾಸಕ ಯಾಸೀರ್ ಅಹ್ಮದ್‌ಖಾನ್ ಪಠಾಣ ಅವರು ಸಚಿವರ ಗಮನಕ್ಕೆ ತಂದರು.



**ತಂಡ ರಚನೆಗೆ ಸೂಚನೆ:** ನಕಲಿ ಆರ್‌ಟಿಸಿ ತಯಾರಿಸಿ 500 ಎಕರೆ ಪ್ರದೇಶದ ಬೆಳೆ ಪರಿಹಾರ ಪಡೆದಿದ್ದರೂ ಕೃಷಿ ಇಲಾಖೆ ಅಧಿಕಾರಿಗಳ ಗಮನಕ್ಕೆ ಇಲ್ವಾ? ನೀವೆಲ್ಲ ಹೇಗೆ ಕೆಲಸ ಮಾಡ್ತೀರಿ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕರನ್ನು ತರಾಟೆಗೆ ತೆಗೆದುಕೊಂಡರು. ಈ ಕುರಿತು ತಂಡ ರಚಿಸಿ, ತನಿಖೆ ನಡೆಸಿ ಎರಡು ತಿಂಗಳಲ್ಲಿ ವರದಿ ನೀಡುವಂತೆ ಹಾಗೂ ಮುಂದೆ ಇಂತಹ ಪ್ರಕರಣಗಳು ನಡೆಯದಂತೆ ಅಧಿಕಾರಿಗಳು ಜಾಗೃತರಾಗಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ 41,557.73 ಹೆಕ್ಟೇರ್ ತೋಟಗಾರಿಕೆ ಬೆಳೆ ಪ್ರದೇಶವಿದ್ದು, 6385 ಹೆ.ಪ್ರದೇಶದಲ್ಲಿ ಹಣ್ಣು, 9829.92 ಹೆ.ಪ್ರದೇಶದಲ್ಲಿ ತರಕಾರಿ, 4572.58 ಹೆ.ಪ್ರದೇಶದಲ್ಲಿ ಸಾಂಬಾರ ಪದಾರ್ಥ, 19,976.19 ತೋಟಗಾರಿಕೆ ಬೆಳೆ, 713 ಹೆ.ಪ್ರದೇಶದಲ್ಲಿ ಹೂವು, 34.06 ಹೆ.ಪ್ರದೇಶದಲ್ಲಿ ಔಷಧಿಯ ಹಾಗೂ ಪರಿಮಳ ಬೆಳೆ ಬೆಳೆಯಾಗುತ್ತಿದೆ. ಪ್ರತಿ ವರ್ಷ ಒಂದರಿಂದ ಎರಡು ಸಾವಿರ ಹೆಕ್ಟೇರ್ ಪ್ರದೇಶ ಅಡಿಕೆ ಬೆಳೆ ಅಧಿಕವಾಗುತ್ತಿದೆ ಎಂದು ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

**ರೈತರಿಗೆ ಮಾಹಿತಿ ನೀಡಿ:** ಹಿಂಗಾರು ಹಂಗಾಮಿಗೆ ಅಗತ್ಯವಾದ ಬೀಜ ಹಾಗೂ ರಸಗೊಬ್ಬರ ದಾಸ್ತಾನುಮಾಡಿಕೊಳ್ಳಬೇಕು. ಜಿಲ್ಲೆಯ ಹವಾಮಾನ ಆಧಾರಿತ ಬೆಳೆ ಬೆಳೆಯಲು ಹಾಗೂ ಮಾಲದಂಡಿ ಮತ್ತು ಹೈಬ್ರೀಡ್ ಜೋಳಕ್ಕೆ ಉತ್ತಮ ಬೆಲೆ ಇದೆ. ಈ ಕುರಿತು ಅಭಿಯಾನ ನಡೆಸಿ ಮಾಹಿತಿ ನೀಡಬೇಕು. ಐಇಸಿ ಅಡಿ ಬರುವ ಅನುದಾನದಲ್ಲಿ ರೈತರಿಗೆ ಲಾಭವಾಗುವಂತೆ ಪ್ರಚಾರ ಮಾಡಬೇಕು ಎಂದು ಸೂಚನೆ ನೀಡಿದರು.

**ಗಂಭೀರವಾಗಿ ಪರಿಗಣಿಸಿ:** ಕೆಡಿಪಿ ಸಭೆಗೆ ವಿವಿಧ ಇಲಾಖೆಗಳು ಸಲ್ಲಿಸುವ ಮಾಹಿತಿಯನ್ನು ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲಿಸಿ, ಕಾಮಗಾರಿಗಳ ಸಮಗ್ರ ಮಾಹಿತಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಹಾಗೂ ಇದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಹಾಗೂ ಜಿ.ಪಂ.ಸಿಇಒ ಅವರಿಗೆ ತಿಳಿಸಿದರು.

**ಗುತ್ತಿಗೆದಾರರಿಗೆ ನೋಟೀಸ್:** ಹಾವೇರಿ–ಹಾನಗಲ್–ಶಿರಶಿ, ಗದಗ–ಹೊನ್ನಾಳಿ ರಸ್ತೆ ಸೇರಿದಂತೆ ಲೋಕೋಪಯೋಗಿ ಇಲಾಖೆ, ಕೆಶಿಪ್ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ರಸ್ತೆ ಕಾಮಗಾರಿಗಳು ಹಾಗೂ ನಿರ್ವಹಣೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳಿಗೆ ವೇಗ ನೀಡಬೇಕು, ಪಾಟ್‌ಹೋಲ್ ಕೆಲಸ ಸರಿಯಾಗಿ ನಿರ್ವಹಣೆ ಮಾಡಬೇಕು.

#### ಅಧಿಕಾರಿಗಳ ಅಮಾನತ್‌ಗೆ ನಿರ್ದೇಶನ

ತುಂಗಾ ಮೇಲ್ದಂಡೆ ಯೋಜನೆ, ಶಿಗ್ಗಾಂವ ಏತ ನೀರಾವರಿ, ವಿವಿಧ ಕೆರೆ ತುಂಬಿಸುವ ಯೋಜನೆ ಸೇರಿದಂತೆ ವಿವಿಧ ನೀರಾವರಿ ಯೋಜನೆಗಳ ಮಾಹಿತಿ ಪರಿಶೀಲಿಸಿದ ಸಚಿವರು, ಕಾಮಗಾರಿ ಆರಂಭದ ದಿನಾಂಕ, ಮುಕ್ತಾಯದ ದಿನಾಂಕ, ನಿರ್ವಹಣೆ ದಿನಾಂಕ, ಆರ್ಥಿಕ ಹಾಗೂ ಭೌತಿಕ ಪ್ರಗತಿ ಮಾಹಿತಿ ನೀಡದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು ಹಾಗೂ ಸರಿಯಾಗಿ ಮಾಹಿತಿ ನೀಡದ ಅಧಿಕಾರಿಗಳಿಗೆ ಶೋಕಾಸ್ ನೋಟೀಸ್ ನೀಡಿ ಅಮಾನತ್ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾಮಗಾರಿ ವಿಳಂಬ ಮಾಡುವ ಗುತ್ತಿಗೆದಾರರಿಗೆ ನೋಟೀಸ್ ನೀಡಿ ಕಪ್ಪುಪಟ್ಟಿಗೆ ಸೇರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಸಂಕಲ್ಪ ಯೋಜನೆಯಡಿ ಮಹಿಳಾ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ವಿತರಣೆ ಮಾಡಲಾಯಿತು. ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಶಿಶು ಪಾಲನಾ ಕೇಂದ್ರ ಕಟ್ಟಡಕ್ಕೆ ಗುದ್ದಲಿಪೂಜೆ ನೆರವೇರಿಸಲಾಯಿತು. ಸಭೆಯಲ್ಲಿ ಶಾಸಕರು, ವಿಧಾನಸಭೆ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಶಾಸಕರಾದ ಯು.ಬಿ.ಬಣಕಾರ, ಶ್ರೀನಿವಾಸ ಮಾನೆ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ, ಉಪಸ್ಥಿತರಿದ್ದರು.

## ಹಿರಿಯ ನಾಗರಿಕರಿಗೆ ಸಾಂಸ್ಕೃತಿಕ ಸ್ಪರ್ಧೆ

**ವಿಜಯಪುರ:** ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ ಸೆಪ್ಟೆಂಬರ್ 17ರಂದು ಡಾ.ಬಿ.ಆರ್. ಅಂಬೇಡ್ಕರ್ ಒಳಾಂಗಣ ಕ್ರೀಡಾಂಗಣದಲ್ಲಿ ಹಿರಿಯ ನಾಗರಿಕರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸಾಂಸ್ಕೃತಿಕ ಸ್ಪರ್ಧೆಗಳಾದ ಗಾಯನ ಹಾಗೂ ಏಕ ಪಾತ್ರಾಭಿನಯ ಸ್ಪರ್ಧೆ ಹಾಗೂ ಕ್ರೀಡಾ ಸ್ಪರ್ಧೆಗಳಾದ ಮ್ಯೂಸಿಕಲ್ ಚೇರ್, ಬಿರುಸಿನ ನಡಿಗೆ, ಬಕೆಟ್‌ನಲ್ಲಿ ಬಾಲ್ ಎಸೆಯುವುದು ಮಹಿಳೆ ಹಾಗೂ ಪುರಷರು ಭಾಗವಹಿಸಬಹುದಾಗಿದ್ದು, 60 ರಿಂದ 70 ವರ್ಷ ವಯೋಮಿತಿಯನ್ನು ನಿಗದಿ ಪಡಿಸಲಾಗಿದೆ. **ಹೆಚ್ಚಿನ ಮಾಹಿತಿಗೆ:** ವಿಜಯಪುರ ಜಿಲ್ಲಾ ಸಂಯೋಜಕರಾದ ಪ್ರತಿಭಾ ಮಾದರ ಮೊ: 9606151149, ವಿಜಯಪುರ ತಾಲೂಕ ಪಂಚಾಯತಿಯ ಸಂಯೋಜಕರಾದ ರವಿ ರಾಠೋಡ ಮೊ: 9035553337, ಇಂಡಿ ತಾಲೂಕ ಪಂಚಾಯತಿಯ ಸಂಯೋಜಕರಾದ ಪರಶುರಾಮ ಭೋಸಲೆ ಮೊ: 9972441464, ಸಿಂದಗಿ ತಾಲೂಕ ಪಂಚಾಯತಿಯ ಸಂಯೋಜಕರಾದ ಮೊ: ಮುತ್ತುರಾಜ ಸಾತಿಹಾಳ ಮೊ: 9980019635, ಮುದ್ದೇಬಿಹಾಳ ತಾಲೂಕ ಪಂಚಾಯತಿಯ ಸಂಯೋಜಕರಾದ ಎಸ್.ಕೆ.ಘಾಟಿ ಮೊ: 9740682979 ಹಾಗೂ ಬಸವನ ಬಾಗೇವಾಡಿ ತಾಲೂಕ ಪಂಚಾಯತಿಯ ಸಂಯೋಜಕರಾದ ಶೀವಲೀಲಾ ಬಿರಾದಾರ ಮೊ: 8722135660ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ವಿಜಯಪುರ:** ಎಸ್‌ಎಸ್‌ಎಲ್‌ಸಿ ನಂತರದ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ ಹಾಗೂ ಸ್ನಾತಕೊತ್ತರ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ ಶುಲ್ಕ ಮರು ಪಾವತಿ ಹಾಗೂ ವಿಕಲಚೇತನರಿಗೆ ವಿವಾಹವಾದಲ್ಲಿ ನೀಡಲಾಗುವ ಪ್ರೋತ್ಸಾಹಧನಕ್ಕೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸೆಪ್ಟೆಂಬರ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಲ್ಯಾಣಾಧಿಕಾರಿ ಜಗದೀಶ ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. **ಹೆಚ್ಚಿನ ಮಾಹಿತಿಗೆ:** ವಿಜಯಪುರ ಜಿಲ್ಲಾ ಸಂಯೋಜಕರಾದ ಪ್ರತಿಭಾ ಮಾದರ ಮೊ: 9606151149, ವಿಜಯಪುರ ತಾಲೂಕ ಪಂಚಾಯತಿಯ ಸಂಯೋಜಕರಾದ ರವಿ ರಾಠೋಡ ಮೊ: 9035553337, ಇಂಡಿ ತಾಲೂಕ ಪಂಚಾಯತಿಯ ಸಂಯೋಜಕರಾದ ಪರಶುರಾಮ ಭೋಸಲೆ ಮೊ: 9972441464, ಸಿಂದಗಿ ತಾಲೂಕ ಪಂಚಾಯತಿಯ ಸಂಯೋಜಕರಾದ ಮೊ: ಮುತ್ತುರಾಜ ಸಾತಿಹಾಳ ಮೊ: 9980019635, ಮುದ್ದೇಬಿಹಾಳ ತಾಲೂಕ ಪಂಚಾಯತಿಯ ಸಂಯೋಜಕರಾದ ಎಸ್.ಕೆ.ಘಾಟಿ ಮೊ: 9740682979 ಹಾಗೂ ಬಸವನ ಬಾಗೇವಾಡಿ ತಾಲೂಕ ಪಂಚಾಯತಿಯ ಸಂಯೋಜಕರಾದ ಶೀವಲೀಲಾ ಬಿರಾದಾರ ಮೊ: 8722135660ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಇಂದು ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

**ವಿಜಯಪುರ:** ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದ ಅಥ್ಲೆಟಿಕ್ ಹಾಗೂ ಜುಡೋ ಕ್ರೀಡೆಗಳನ್ನು ವಿಜಯಪುರ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ.11 ಹಾಗೂ 12 ರಂದು ಏರ್ಪಡಿಸಲಾಗಿದೆ.

ಜಿಲ್ಲಾ ಮಟ್ಟದ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ–ದ್ವಿತಿಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳಿಗೆ ವಿಭಾಗ ಮಟ್ಟದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ವಿಭಾಗ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ದಿನಾಂಕ : 11–09–2025 ರಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ವರದಿ ಮಾಡಿಕೊಳ್ಳಬೇಕು.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ರಾಜಶೇಖರ ಧೈವಾಡಿ ಮೊ: 7019008443 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ವಿದ್ಯುತ್ ಚಾಲಿತ ಹೊಲಿಗೆ ಯಂತ್ರಕ್ಕೆ ಅರ್ಜಿ

**ಬಾಗಲಕೋಟೆ:** 2025–26ನೇ ಸಾಲಿಗೆ ಜಿಲ್ಲಾ ಉದ್ಯಮ ಕೇಂದ್ರ, ವಿಶೇಷ ಘಟಕ, ಗಿರಿಜನ ಉಪಯೋಜನೆಯಡಿ ಮತ್ತು ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆಗಳ ಸರಬರಾಜು ಯೋಜನೆಯಡಿ ವಿದ್ಯುತ್ ಚಾಲಿತ ಹೊಲಿಗೆಯಂತ್ರ ಸಲಕರಣೆಯನ್ನು ಗ್ರಾಮೀಣ ಪ್ರದೇಶದವರಿಗೆ ನೀಡಲು ಅರ್ಹ ಫಲಾನುವಿಗಳಿಂದ ಆನ್‌ಲೈನ್ (https://bagalkot.nic.in) ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಗ್ರಾಮೀಣ ಪ್ರದೇಶದ ಮಹಿಳಾ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದಾಗಿದ್ದು, 10ನೇ ತರಗತಿ ಪಾಸಾಗಿರಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 26 ಆಗಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಜಿಲ್ಲಾ ಪಂಚಾಯತ್ ಕೈಗಾರಿಕಾ ವಿಭಾಗ, ಕೊಠಡಿ ಸಂಖ್ಯೆ 239, 3ನೇ ಮಹಡಿ, ಜಿಲ್ಲಾಡಳಿತ ಭವನ ನವನಗರ, ಬಾಗಲಕೋಟೆ, ದೂಸಂ.08354–223744, 7760007080 ಮತ್ತು 9620721729 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್-ಮಾಧ್ಯಮ ಅಕಾಡೆಮಿ ಒಡಂಬಡಿಕೆ

**ಕಾರವಾರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ದೇಶದಲ್ಲಿಯೇ ಮೊದಲ ಬಾರಿಗೆ ಜಾಗತಿಕ ಮಟ್ಟದಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದ ದಿಗ್ಗಜ ಇನ್‌ಫೋಸಿಸ್‌ನ ಸ್ಪ್ರಿಂಗ್‌ಬೋರ್ಡ್ ಸಿಎಸ್‌ಆರ್ ಕಾರ್ಯಕ್ರಮದಡಿ ಸಹಭಾಗಿತ್ವಕ್ಕಾಗಿ ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರ ತರಬೇತಿಗಾಗಿ ಒಡಂಬಡಿಕೆ ಮಾಡಿಕೊಂಡಿದೆ.

ಪತ್ರಕರ್ತರ ಸಾಫ್ಟ್‌ಸ್ಕಿಲ್ ತರಬೇತಿಯ ಉದ್ದೇಶಕ್ಕಾಗಿ ಮಾಡಿಕೊಳ್ಳುತ್ತಿರುವ ಈ ಒಡಂಬಡಿಕೆಯು ಸಿ.ಎಸ್.ಆರ್. ಅಡಿ ಕರ್ನಾಟಕ ಮಾಧ್ಯಮ ಅಕಾಡೆಮಿ ಕೈಗೆತ್ತಿಕೊಂಡ ಮೊದಲ ಕಾರ್ಯಕ್ರಮವಾಗಿದೆ. ಇನ್ಫೋಸಿಸ್ ಸಿ.ಎಸ್. ಆರ್ ಯೋಜನೆಯ “ಸ್ಪ್ರಿಂಗ್‌ಬೋರ್ಡ್” ಪ್ಲಾಟ್‌ಫಾರ್ಮ್ ಮೂಲಕ ಪತ್ರಕರ್ತರ ಡಿಜಿಟಲ್ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸಾಮರ್ಥ್ಯ ನಿರ್ಮಾಣ ಈ ಒಡಂಬಡಿಕೆಯ ಉದ್ದೇಶವಾಗಿದೆ.

“ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಹಭಾಗಿತ್ವವು ಬದಲಾಗುತ್ತಿರುವ ಹೊಸ ಮಾಧ್ಯಮಕ್ಕೆ ಹೊಂದಿಕೊಳ್ಳುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ವಿನೂತನ ಪ್ಲಾಟ್‌ಫಾರಂ ಮಾಧ್ಯಮ ವೃತ್ತಿಪರರ ಕೌಶಲ್ಯ ಉನ್ನತೀಕರಣಕ್ಕೆ, ಅದರಲ್ಲೂ ವಿಶೇಷವಾಗಿ ಪತ್ರಕರ್ತರಿಗೆ ವೇಗವಾಗಿ ಬದಲಾಗುತ್ತಿರುವ ಸನ್ನಿವೇಶಗಳಿಗೆ ಅನುಗುಣವಾಗಿ ತಾಂತ್ರಿಕ ಪರಿಣತಿ ಹಾಗೂ ಸುದ್ದಿಯನ್ನು ಪ್ರಸ್ತುತಪಡಿಸುವ ಕೌಶಲವನ್ನು ಒದಗಿಸಲಿದೆ” ಎಂಬ ಆಶಯವನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯೇಶಾ ಖಾನಂ ಅವರು ವ್ಯಕ್ತಪಡಿಸಿದ್ದಾರೆ.

“ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಶಿಕ್ಷಣ ಕುರಿತ ಸಿಎಸ್‌ಆರ್ ಕಾರ್ಯಕ್ರಮವಾಗಿದೆ. ಇಂದು ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಮಾಧ್ಯಮ ಅಕಾಡೆಮಿಯೊಂದಿಗೆ ಒಡಂಬಡಿಕೆಗೆ ಸಹಿ ಹಾಕಿದೆ. ಮಾಧ್ಯಮ ಅಕಾಡೆಮಿಗೆ ಸ್ಪ್ರಿಂಗ್‌ಬೋರ್ಡ್‌ನ ಡಿಜಿಟಲ್ ವಿಷಯಗಳಿಗೆ ಪ್ರವೇಶ ಲಭಿಸಲಿದೆ ಮತ್ತು ಅವರು ಸಾಫ್ಟ್ ಸ್ಕಿಲ್‌ಗಳು, ವ್ಯಕ್ತಿತ್ವ ವಿಕಾಸ ಹಾಗೂ ಕೃತಕ ಬುದ್ಧಿಮತ್ತೆ (ಎಐ) ಸೇರಿದಂತೆ ಇತ್ತೀಚಿನ ತಂತ್ರಜ್ಞಾನಗಳ ಅವಲೋಕನ ಕುರಿತ ವಿಷಯಗಳಿಂದ ಪ್ರಯೋಜನ ಪಡೆಯಬಹುದು. ಇದು ವಿಶೇಷವಾಗಿ 2ನೇ ಹಾಗೂ 3ನೇ ಹಂತದ ನಗರಗಳ ಪತ್ರಕರ್ತರಿಗೆ ಖಂಡಿತವಾಗಿಯೂ ಸಹಾಯಕವಾಗಲಿದೆ” ಎಂದು ಇನ್ಫೋಸಿಸ್ ನ ಹಿರಿಯ ಉಪಾಧ್ಯಕ್ಷ (ಇ ಟಿ ಎ) ಸತೀಶ ಬಿ. ನಂಜಪ್ಪ ಅವರು ಅಭಿಪ್ರಾಯ ಪಟ್ಟಿದ್ದಾರೆ.

ತರಬೇತಿ ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಕಾರ್ಯಕ್ರಮದಡಿ ಪತ್ರಕರ್ತರಿಗೆ ಮೂರು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಇದರಲ್ಲಿ ಡಿಜಿಟಲ್ ಮಾಧ್ಯಮಕ್ಕೆ ಅಗತ್ಯ ಕೌಶಲ್ಯಗಳು, ಕೃತಕ ಬುದ್ಧಿಮತ್ತೆಯ ಬಳಕೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಿಸಿದಂತೆ ತರಬೇತಿ ನೀಡಲಾಗುವುದು.

ಈ ವರ್ಷದಲ್ಲಿ ಒಟ್ಟು ಮೂರು ಕಾರ್ಯಕ್ರಮಗಳ ಮೂಲಕ ಒಟ್ಟು 150 ಪತ್ರಕರ್ತರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಇದರಲ್ಲಿ ವಿಶೇಷವಾಗಿ ಒಂದು ಬ್ಯಾಚ್‌ನಲ್ಲಿ ಮಹಿಳಾ ಆಯವ್ಯಯದಡಿ ಪತ್ರಕರ್ತೆಯರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಜಿಲ್ಲಾ ಮಟ್ಟದ ಪತ್ರಕರ್ತರಿಗೆ ಈ ತರಬೇತಿಯಲ್ಲಿ ಆದ್ಯತೆ ನೀಡಲಾಗುವುದು. ಇನ್ಫೋಸಿಸ್ ಸಂಸ್ಥೆಯು ಪ್ಲಾಟ್‌ಫಾರ್ಮ್ ಮತ್ತು ಪರಿಣತಿ ಒದಗಿಸಲಿದೆ. ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರು ಹಾಗೂ ಶಿಕ್ಷಕರ ಭಾಗವಹಿಸುವಿಕೆ ಸಮನ್ವಯಗೊಳಿಸಲಿದೆ.

ಪತ್ರಿಕೋದ್ಯಮ ಕ್ಷೇತ್ರದಲ್ಲಿ ಗುಣಮಟ್ಟದ ಸುಧಾರಣೆಯ ನಿಟ್ಟಿನಲ್ಲಿ ಇದೊಂದು ಮಹತ್ವದ ಉಪಕ್ರಮವಾಗಿದೆ. ಹೆಚ್ಚು ಪತ್ರಕರ್ತರಿಗೆ ತರಬೇತಿ ನೀಡುವ ಆಶಯದೊಂದಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿಯು ಮುಂದಡಿಯಿಟ್ಟಿದೆ. ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ, ಸದಸ್ಯ ಹೆಚ್.ವಿ. ಕಿರಣ್, ಕಾರ್ಯದರ್ಶಿ ಸಹನಾ ಎಂ, ಇನ್‌ಫೋಸಿಸ್ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಸತೀಶ ಬಿ. ನಂಜಪ್ಪ, ಹಿರಿಯ ಅಧಿಕಾರಿಗಳಾದ ಸಂತೋಷ್ ಅನಂತಪುರ, ಬಿಳಿಗಿರಿ ರಂಗ ಮತ್ತಿತರರು ಉಪಸ್ಥಿತರಿದ್ದರು.

## ಗಣೇಶ ಮೂರ್ತಿ ವಿಸರ್ಜನೆ ಮದ್ಯ ಮಾರಾಟ ನಿಷೇಧ

**ಕೊಪ್ಪಳ:** ಗಂಗಾವತಿ ನಗರ ಹಾಗೂ ತಾವರಗೇರಾ ಪಟ್ಟಣದಲ್ಲಿ ಗಣೇಶ ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಹಾಗೂ ಕಾನೂನು ಸುವ್ಯವಸ್ಥೆ, ಶಾಂತಿ ಪಾಲನೆಗಾಗಿ ಮತ್ತು ಸಾರ್ವಜನಿಕರ ಹಿತಾಸಕ್ತಿ ಕಾಪಾಡುವ ಹಿತದೃಷ್ಟಿಯಿಂದ ಗಂಗಾವತಿ ನಗರ ಪೊಲೀಸ್ ಠಾಣಾ ವ್ಯಾಪ್ತಿ ಹಾಗೂ ತಾವರಗೇರಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕರ್ನಾಟಕ ಅಬಕಾರಿ ಕಾಯ್ದೆ–1965 ರ ಕಲಂ 21 ರನ್ವಯ ಸೆಪ್ಟೆಂಬರ್ 16 ರವರೆಗೆ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ತಾವರಗೇರಾ ಪಟ್ಟಣದಲ್ಲಿ ಸೆಪ್ಟೆಂಬರ್ 11 ರಂದು ಹಾಗೂ ಗಂಗಾವತಿ ನಗರದಲ್ಲಿ ಸೆಪ್ಟೆಂಬರ್ 12 ಮತ್ತು ಸೆ.16 ರಂದು ಗಣೇಶ ಮೂರ್ತಿ ವಿಸರ್ಜನೆ ಇರುವುದರಿಂದ ಆಯಾ ದಿನಗಳಂದು ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 11 ಗಂಟೆಯವರೆಗೆ ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ನಿಷೇಧಿಸಲಾಗಿದೆ.

ಈ ವಿಷಯವಾಗಿ ಅಬಕಾರಿ ಉಪ ಆಯುಕ್ತರ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಿ, ಅದರಲ್ಲಿ ಆರಕ್ಷಕರ ವೃತ್ತ ನಿರೀಕ್ಷಕರು ಹಾಗೂ ಅಬಕಾರಿ ವೃತ್ತ ನಿರೀಕ್ಷಕರು ಕಾರ್ಯನಿರ್ವಹಿಸಲು ಆದೇಶಿಸಿದೆ. ಈ ಆದೇಶವನ್ನು ಅನುಷ್ಠಾನಗೊಳಿಸುವಲ್ಲಿ ನಿರ್ಲಕ್ಷತನ ತೋರಿದವರ ವಿರುದ್ಧ ನಿಯಮಾನುಸಾರ ಕಾನೂನು ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

## ಯುವನಿಧಿ ಯೋಜನೆ: ದಾಖಲಾತಿ ಪರಿಶೀಲಿಸಿಕೊಳ್ಳಲು ಸೂಚನೆ

**ಕೊಪ್ಪಳ:** ಕರ್ನಾಟಕ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಗೆ ಈಗಾಗಲೇ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಕೂಡಲೇ ಡಿ.ಡಿ.ಪಿ.ಆಯ್ ಇಲಾಖೆಯಲ್ಲಿ ಎಸ್.ಎಸ್.ಎಲ್.ಸಿ, ಡಿ.ಡಿ.ಪಿ.ಯು ಇಲಾಖೆಯಲ್ಲಿ ಪಿ.ಯು.ಸಿ ಮತ್ತು ಡಿ.ಇ.ಇ.ಓ ಇಲಾಖೆಯಲ್ಲಿ ಡಿಪ್ಲೊಮಾ, ಪದವಿ ಮೂಲ ಅಂಕಪಟ್ಟಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ಮಾಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಈ ಮೂರು ಇಲಾಖೆಗಳು ಜಿಲ್ಲಾಡಳಿತ ಭವನ ಸಂಕೀರ್ಣದಲ್ಲಿ ಕಾರ್ಯನಿರ್ವಹಿಸುತ್ತವೆ. ತಮ್ಮ ಅರ್ಜಿಯ ಪ್ರಸ್ತುತ ಸ್ಥಿತಿಯನ್ನು ತಿಳಿದುಕೊಳ್ಳಲು ಸೇವಾ ಸಿಂಧು ಪೋರ್ಟಲ್‌ನ ಯುವನಿಧಿ ಅಪ್ಲಿಕೇಶನ್ ಸ್ಟೇಟಸ್ ಚೆಕ್ ಮೂಲಕ ತಾವೇ ಖುದ್ದಾಗಿ ಪರಿಶೀಲಿಸಿಕೊಳ್ಳಬಹುದು.

ಕರ್ನಾಟಕ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಯಾವುದೇ ಅಂತಿಮ ದಿನಾಂಕ ನಿಗದಿಯಾಗಿರುವುದಿಲ್ಲ. ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಚಾಲನೆಯಲ್ಲಿರುತ್ತದೆ. ಆದಕಾರಣ 2023, 2024, 2025ನೇ ಸಾಲಿನಲ್ಲಿ ಪದವಿ, ಸ್ನಾತಕೋತ್ತರ ಪದವಿ ಅಥವಾ ಡಿಪ್ಲೋಮಾ ತೇರ್ಗಡೆಯಾಗಿ ಅರ್ಜಿ ಸಲ್ಲಿಸದೇ ಇರುವ ಅರ್ಹ ನಿರುದ್ಯೋಗಿ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್ http://sevasindhugs.karnataka.gov.in ಮೂಲಕ ಗ್ರಾಮ ಒನ್ ಅಥವಾ ಕರ್ನಾಟಕ ಒನ್ ಅಥವಾ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಪ್ರಸ್ತುತ ಮಾಸಿಕವಾಗಿ ದಾಖಲಿಸುತ್ತಿರುವ ಸ್ವಯಂ ಘೋಷಣೆಯ ಬದಲಾಗಿ, ಇನ್ನು ಮುಂದೆ ಮೂರು ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.ಹೆಚ್ಚಿನ ಮಾಹಿತಿಗಾಗಿ ಉದ್ಯೋಗಾಧಿಕಾರಿ, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಕೊಪ್ಪಳ ಯುವನಿಧಿ ಸಹಾಯವಾಣಿ ಸಂಖ್ಯೆ: 1800 599 7154 ನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಬ್ರಿಲಿಯಂಟ್ ಶಾಲಾ ಮಕ್ಕಳ ಉತ್ತಮ ಸಾಧನೆ

**ತಾಳಿಕೋಟೆ:** ಬಿಜ್ಜೂರ ಗ್ರಾಮದ ಸರ್ಕಾರಿ ಮಾದರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ನಡೆದ 2025–26ನೇ ಸಾಲಿನ ಮುದ್ದೇಬಿಹಾಳ ತಾಲೂಕು ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ 14 ವರ್ಷ ವಯೋಮಿತಿಯ ಬಾಲಕರ ಖೋ ಖೋ ಮತ್ತು ಥ್ರೋ ಬಾಲ್ ಪಂದ್ಯಾವಳಿಗಳಲ್ಲಿ ಸ್ಥಳೀಯ ಮೈಲೇಶ್ವರ ಬ್ರಿಲಿಯಂಟ್ ಶಾಲಾ ಮಕ್ಕಳು ಭಾಗವಹಿಸಿ ವಿಜಯಶಾಲಿಗಳಾಗಿ ಸತತ ಮೂರನೇ ಬಾರಿಗೆ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಈ ಅದ್ಭುತ ಸಾಧನೆಗೆ ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ನಿರ್ದೇಶಕರು ಮತ್ತು ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ ಮುಂದಿನ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಪ್ರದರ್ಶನ ನೀಡಲಿ ಎಂದು ಶುಭ ಹಾರೈಸಿದ್ದಾರೆ.


## ಮೈಸೂರ ದಸರಾ: ಕನ್ನಡ ಪುಸ್ತಕ ಮಾರಾಟ ಮೇಳ

**ಬಾಗಲಕೋಟೆ:** ಜಗತ್ತಿನ ಪ್ರಸಿದ್ಧ ಮೈಸೂರು ದಸರಾ ಉತ್ಸವ–2025ರಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿ, ಸಹಯೋಗದಲ್ಲಿ ಸೆಪ್ಟೆಂಬರ 22 ರಿಂದ ಅಕ್ಟೋಬರ 1 ವರೆಗೆ ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ–2025ನ್ನು ಮೈಸೂರಿನ ಹಳೆ ಡಿಸಿ ಕಚೇರಿ, ಸ್ಕೌಟ್ಸ್ ಮತ್ತು ಗೈಡ್ಸ್ ಮೈದಾನದಲ್ಲಿ ಏರ್ಪಡಿಸಲಾಗುತ್ತಿದೆ.

ಪುಸ್ತಕ ಮೇಳದಲ್ಲಿ ಕನ್ನಡ ಪ್ರಕಾಶಕರು, ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ 1 ಸಾವಿರ ರೂ.ಗಳ ಭದ್ರತಾ ಠೇವಣಿ ಡಿ.ಡಿ.ಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಅವರ ಹೆಸರಿನಲ್ಲಿ ಡಿಡಿಗಳನ್ನು ಸಲ್ಲಿಸುವುದು. ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಪ್ರಕಾಶಕರು, ಮಾರಾಟಗಾರರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರಿನ ಕಛೇರಿ ಅಥವಾ ಆಯಾ ಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಛೇರಿಗಳಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್ https://kpp.karnataka.gov.in ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ.

ಭರ್ತಿಮಾಡಿದ ಅರ್ಜಿಯ ಜೊತೆಗೆ ಡಿ.ಡಿ.ಯೊಂದಿಗೆ ಸೆಪ್ಟೆಂಬರ 18 ರಂದು ಸಂಜೆ 5 ರೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು ಅವರ ಹೆಸರಿಗೆ ಅಂಚೆಯ ಮೂಲಕ ಹಾಗೂ ಇ–ಮೇಲ್ kannadappradhikara@gmail.com ರ ಮೂಲಕ ಸಲ್ಲಿಸಲು ಕೋರಿದೆ. ನಿರ್ಮಿಸಲಾಗುವ ಮಳಿಗೆಗಳನ್ನು ಆದ್ಯತೆಯ ಮೇರೆಗೆ ಹಂಚಿಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ 080–22484516, 22107704ಗೆ ಸಂಪರ್ಕಿಸಬಹುದಾಗಿದೆ.

## ಪ್ರಯೋಗಾಲಯದ ಕಟ್ಟಡ ಕಾಮಗಾರಿಗೆ ಚಾಲನೆ



**ಘಟಪ್ರಭಾ.** ಶಾಸಕರಾದ ರಮೇಶ ಜಾರಕಿಹೊಳಿ ಅವರ ಸೂಚನೆಯಂತೆ ಮಂಗಳವಾರದಂದು ಪಿ ಎಂ ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮಲ್ಲಾಪುರ ಪಿ ಜಿ ಘಟಪ್ರಭಾದಲ್ಲಿ ವಿಜ್ಞಾನ ಪ್ರಯೋಗಾಲಯದ ಕಟ್ಟಡ ನಿರ್ಮಾಣಕ್ಕೆ ಪೂಜೆ ಮತ್ತು ಗಣಕೀಕೃತ ಗ್ರಂಥಾಲಯಕ್ಕೆ ಪೂಜೆ ಮಾಡುವದರ ಮೂಲಕ ಚಾಲನೆ ನೀಡಿದರು.

ಸಂದರ್ಭದಲ್ಲಿ ಶಾಸಕರ ಆಪ್ತ ಸಹಾಯಕ ಸುರೇಶ ಸನದಿ, ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಕಾಶ ಹಿರೇಮಠ,ರಾಮಣ್ಣ ಹುಕ್ಕೇರಿ, ಡಿ ಎಮ್ ದಳವಾಯಿ, ಪುರಸಭೆಯ ರಮೇಶ್ ತಂಗೆವ್ವಗೋಳ, ಸಿ ಆರ್ ಪಿ ರಂಗಪ್ಪ ಗೋಡೇರ್, ಮುಖ್ಯೋಪಾಧ್ಯಾಯರಾದ ಕಳಸಣ್ಣವರ, ಸುರೇಶ ಪಾಟೀಲ, ಶ್ರೀಕಾಂತ ವಿ ಮಹಾಜನ ಪ್ರವೀಣ ಮಟಗಾರ, ಶ್ರೀಕಾಂತ ಕುಲಕರ್ಣಿ, ಸಂತೋಷ ದೇಶಪಾಂಡೆ, ಅರುಣ್ ದೇಶಪಾಂಡೆ, ನಿತಿನ್ ದೇಶಪಾಂಡೆ ಮುರಳೀಧರ ಜತ್ಕರ , ಮಲ್ಲು ಕೋಳಿ, ಕೆಂಪಣ್ಣಾ ಚೌಕಾಶಿ, ಮಲ್ಲಿಕಾರ್ಜುನ ತುಕ್ಕಾನಟ್ಟಿ, ರಮೇಶ್ ಕಬಾಡಗಿ ಕಾಡಪ್ಪಾ ಕರೋಶಿ ಗುತ್ತಿಗೆದಾರರಾದ ರಮೇಶ್ ಗಂಡವ್ವಗೋಳ, ಕೃಷ್ಣಾ ಗಂಡವ್ವಗೋಳ, ವೀರಭದ್ರ ಗಂಡವ್ವಗೋಳ, ಸುಧೀರ್ ಜೋಡಟ್ಟಿ, ದುಂಡಪ್ಪಾ ರಾಜಾಪುರೆ, ಎಂ ಬಿ ಅಸೋದೆ, ಆನಂದ ಬನನ್ನವರ, ಅಪ್ಪಾಸಾಬ ಮುಲ್ಲಾ, ಕಲ್ಲಪ್ಪ ಕಾಡದವರ, ಲಕ್ಷ್ಮಣ ಮೇತ್ರಿ ಸುರೇಶ್ ಪೂಜೇರಿ, ಕಿರಣ ಶಿವಾಳೆ, ಶ್ರೀಕಾಂತ ತಳವಾರ, ಶೇಖರ್ ಕುಲಗೋಡ, ಇಮ್ರಾನ್ ಬಟಕುರ್ಕಿ, ನಾಗರಾಜ್ ಜಂಬ್ರಿ, ಈರಗೌಡ ಕಲಕುಟಗಿ, ಪ್ರತಾಪ ಬೇವಿನಗಿಡದ ಸೇರಿದಂತೆ ಎಲ್ಲಾ ಶಾಲಾ ಶಿಕ್ಷಕರು ವಿದ್ಯಾರ್ಥಿಗಳು ನಾಗರೀಕರು ಕಾರ್ಯಕ್ರಮದಲ್ಲಿ ಭಾಗವಹಿದ್ದರು.

## ಸೆ.15ರಿಂದ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ

**ಬಾಗಲಕೋಟೆ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ರಾಜ್ಯ ಮಹಿಳಾ ಅಬಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಸೆಪ್ಟೆಂಬರ 15 ರಿಂದ ನವೆಂಬರ 17 ವರೆಗೆ ಒಟ್ಟು 45 ದಿನಗಳ ಕಾಲ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಕೈಗೊಳ್ಳಲಾಗುತ್ತಿದೆ.ಬಾಗಲಕೋಟೆ ತಾಲೂಕಿನಲ್ಲಿ ಈಗಾಗಲೇ ಗುರುತಿಸಿರುವ 808 ದೇವದಾಸಿ ಮಹಿಳೆಯರಲ್ಲಿ 264 ಮಹಿಳೆಯರು ಮರಣ ಹೊಂದಿದ್ದಾರೆ. 25 ದೇವದಾಸಿ ಮಹಿಳೆಯರು ವಲಸೆ ಹೋಗಿದ್ದು, 519 ಜೀವಂತ ದೇವದಾಸಿ ಮಹಿಳೆಯರು ಇದ್ದಾರೆ. ಆದ್ದರಿಂದ 519 ಜೀವಂತ ದೇವದಾಸಿ ಮಹಿಳೆಯರು, 25 ವಲಸೆ ಹೋದ ದೇವದಾಸಿ ಮಹಿಳೆಯರು ಖಡ್ಡಾಯವಾಗಿ ಸರ್ವೆಯಲ್ಲಿ ಭಾಗವಹಿಸಲು ಹಾಗೂ ಮರಣ ಹೊಂದಿದ 264 ದೇವದಾಸಿ ಮಹಿಳೆಯರ ಮಕ್ಕಳು ಇಚ್ಛಿಸಿದಲ್ಲಿ ಅವರು ಸಹಿತ ಸರ್ವೆಯಲ್ಲಿ ಭಾಗವಹಿಸಬಹುದು. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಸೆಕ್ಟರ ನಂ.18, ಕೆವಿಜಿ ಬ್ಯಾಂಕ್ ಎದುರುಗಡೆ, ನವನಗರ, ಬಾಗಲಕೋಟೆ ಕಚೇರಿಯ ವೇಳೆಯಲ್ಲಿ ಹಾಜರಾಗಿ ಸರ್ವೆಯಲ್ಲಿ ಭಾಗವಹಿಸುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

